ಸಂಪುಟ : 13 Volume | ಸಂಚಿಕೆ : 218 Issue | ಪುಟಗಳು : 08 Pages | ಮಂಗಳವಾರ 14 ಅಕ್ಟೋಬರ್ 2025 | ₹2
RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

'ಮಾನವನೆದೆಯಲಿ ಆರದೆ ಉರಿಯಲಿ ದೇವರು ಹಚ್ಚಿದ ದೀಪ , ರೇಗುವ ದನಿಗೂ ರಾಗವು ಒಲಿಯಲಿ ಮೂಡಲಿ ಮಧುರಾಲಾಪ '

– ಲಕ್ಷ್ಮೀನಾರಾಯಣ ಭಟ್ .

ಸಂಪಾದಕರು: ರಮೇಶ ರೆಡ್ಡಿ

2. ಕಾನೂನು ಅರಿವು, ನೆರವು
4 ಸ್ಮಾರ್ಟ್ ಕಾರ್ಡ್ ವಿತರಣೆ
8 ವೈದ್ಯಕೀಯ ಕಾಲೇಜಿಗೆ ಪ್ರಶಸ್ತಿ ಪ್ರದಾನ

# ಹಾಸ್ಯನಟ ತಾಳಿಕೋಟೆ ನಿಧನ

ವಿಜಯಪುರ:ಅ.13: ಖ್ಯಾತ ಹಾಸ್ಯನಟ ರಾಜು ತಾಳಿಕೋಟೆ (59) ಹೃದಯಾಘಾತದಿಂದ ನಿಧನರಾಗಿದ್ದಾರೆ.



ಉಡುಪಿ ಜಿಲ್ಲೆಯ ಹೆಬ್ರಿ ತಾಲೂಕಿನಲ್ಲಿ ರಾಜು ತಾಳಿಕೋಟೆ ಚಿತ್ರೀಕರಣದಲ್ಲಿ ಭಾಗಿಯಾಗಿದ್ದರು. ಚಿತ್ರೀಕರಣ ಸಂದರ್ಭದಲ್ಲಿ ರಾಜು ತಾಳಿಕೋಟೆ ಕುಸಿದು ಬಿದ್ದಿದ್ದರು. ನಂತರ ಅವರನ್ನು ಹೆಚ್ಚಿನ ಚಿಕಿತ್ಸೆ ಗೆ ಮಣಿಪಾಲ ಕಸ್ತೂರ್ಬಾ ಮೆಡಿಕಲ್ ಕಾಲೇಜ್ ಆಸ್ಪತ್ರೆಗೆ ಕರೆ ತರಲಾಗಿತ್ತು. ಕೆಲ ದಿನಗಳಿಂದ ವೆಂಟಿಲೇಟರ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಚಿಕಿತ್ಸೆ ಗೆ ಸ್ಪಂದಿಸದೇ ಕೊನೆಯುಸಿರೆಳೆದಿದ್ದಾರೆ.

ವಿಜಯಪುರ ಜಿಲ್ಲೆಯ ಸಿಂದಗಿ ತಾಲ್ಲೂಕಿನ ಚಿಕ್ಕಸಿಂದಗಿ ಗ್ರಾಮದ ಮೂಲದವರಾಗಿದ್ದ ಅವರು, ಚಲನಚಿತ್ರದಲ್ಲಿ ಪ್ರಸಿದ್ಧರಾದ ನಂತರ ತಾಳಿಕೋಟೆ ನಗರದಲ್ಲಿ ವಾಸವಾಗಿದ್ದರು.

ರಾಜು ತಾಳಿಕೋಟೆಯವರು ಮೊದಲ ಹೆಸರು ರಾಜೇಸಾಬ ಮಕ್ತುಮಸಾಬ್ ತಾಳಿಕೋಟೆ. ಅವರು ಕೇವಲ ನಟನಾಗಿರದೇ ತಾಳಿಕೋಟೆಯ ಪ್ರಸಿದ್ಧ ಖಾಸ್ಗತೇಶ್ವರ ನಾಟಕ ಮಂಡಳಿಯ ಮಾಲೀಕರಾಗಿದ್ದರು.

ಅನಾರೋಗ್ಯ ಕಾರಣದಿಂದಾಗಿ ನಾಟಕ ಹಾಗೂ ಸಿನಿಮಾ ಚಟುವಟಿಕೆಗಳಿಂದ ದೂರ ಉಳಿದಿದ್ದರು. ರಾಜು ತಾಳಿಕೋಟೆಯವರ ನಿಧನಕ್ಕೆ ಕನ್ನಡ ಚಿತ್ರರಂಗ ಮತ್ತು ಉತ್ತರ ಕರ್ನಾಟಕದ ರಂಗಭೂಮಿ ಕಂಬನಿ ಮಿಡಿದಿದೆ.

ನಿರ್ದೇಶಕ ಯೋಗರಾಜ್ ಭಟ್ ಅವರ 'ಮನಸಾರೆ' (2009) ಚಿತ್ರದ ಮೂಲಕ ಅವರು ಜನಪ್ರಿಯತೆ ಗಳಿಸಿದರು. ನಂತರ 'ಪಂಚರಂಗಿ', 'ಮತ್ತೊಂದ್ ಮದುವೇನಾ..!' ಮತ್ತು 'ಮೈನಾ' ಸೇರಿದಂತೆ ಹಲವಾರು ಚಿತ್ರಗಳಲ್ಲಿ ತಮ್ಮದೇ ಆದ ವಿಶಿಷ್ಟ ಹಾಸ್ಯ ಶೈಲಿಯ ಮೂಲಕ ಪ್ರೇಕ್ಷಕರ ಗಮನ ಸೆಳೆದಿದ್ದರು. ಬಿಗ್

2ನೇ ಪುಟನೋಡಿ

## ಅಕ್ರಮವಾಗಿ ಗಾಂಜಾ ಮಾರುತ್ತಿದ್ದ ವ್ಯಕ್ತಿ ಬಂಧನ:24.92 ಲಕ್ಷ ರೂ. ಗಾಂಜಾ ಜಪ್ತಿ



ಬೀದರ:ಅ.13:ನಗರದ ಬೀದರ-ಕಮಠಾಣಾ ರಸ್ತೆಯ ಕೆ.ಇ.ಬಿ.ಫಂಕ್ಷನ್ ಹಾಲ್ ಮೈದಾನದಲ್ಲಿ ಅಕ್ರಮವಾಗಿ ಸಾರ್ವಜನಿಕರಿಗೆ ಗಾಂಜಾ ಮಾರಾಟ ಮಾಡುತ್ತಿದ್ದ ವ್ಯಕ್ತಿಯ ಮೇಲೆ ದಾಳಿ ನಡೆಸಿ ಆರೋಪಿಯ ವಶದಿಂದ ರೂ 24,92,000 ಮೌಲ್ಯದ ಒಟ್ಟು 24.920 ಕೆ.ಜಿ ಗಾಂಜಾ ಜಪ್ತಿ ಮಾಡಿ ಆರೋಪಿತನಿಗೆ ನ್ಯಾಯಾಂಗ

2ನೇ ಪುಟನೋಡಿ

## ಕಲಬುರಗಿ ಬಂದ್‌ಗೆ ಮಿಶ್ರ ಪ್ರತಿಕ್ರಿಯೆ





ಕಲಬುರಗಿ, ಅ. 13: ಭಾರಿ ಮಳೆ ಮತ್ತು ಪ್ರವಾಹವನ್ನು ನೈಸರ್ಗಿಕ ವಿಕೋಪ ಎಂದು ಪರಿಗಣಿಸುವ ಮೂಲಕ ಕಲಬುರಗಿ ಜಿಲ್ಲೆಯನ್ನು ಹಸಿ ಬರ ಜಿಲ್ಲೆ ಎಂದು ಘೋಷಿಸುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರೈತ, ದಲಿತ, ಕನ್ನಡ, ಕಾರ್ಮಿಕ ಮಹಿಳಾ, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಕರೆ ನೀಡಿದ್ದ ಕಲಬುರಗಿ ಬಂದ್ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಮುಂಜಾನೆ ಆರು ಗಂಟೆ ಹೊತ್ತಿಗೆ ಬಂದ್ ಆರಂಭಗೊಂಡಿದ್ದರಿಂದ ಕೇಂದ್ರ ಬಸ್ ನಿಲ್ದಾಣದಿಂದ ಬೆಳಗ್ಗೆ 6ಕ್ಕೂ ಮುನ್ನ ಸಾರಿಗೆ ಬಸ್‌ಗಳು ನಿಗದಿತ ಜಿಲ್ಲೆಗಳತ್ತ ಮುಖ ಮಾಡಿ ಪ್ರಯಾಣ ಆರಂಭಿಸಿದವಾದರೂ, ಬಳಿಕ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಪ್ರಯಾಣಿಕರ ಹಿತದೃಷ್ಟಿಯಿಂದ ಬಸ್‌ಗಳನ್ನು ಡಿಪೋಗಳಿಂದ ಹೊರಗೆ ಬಿಡದ ಕಾರಣ ಕೇಂದ್ರ ಬಸ್ ನಿಲ್ದಾಣ ಬಿಕೋ ಎನ್ನುತ್ತಿತ್ತು.


ಇನ್ನೊಂದೆಡೆ, ಅಲ್ಲಲ್ಲಿ ಆಟೋರಿಕ್ಷಾಗಳ ಓಡಾಟ ಕಂಡುಬಂದಿತಾದರೂ ಕೇಂದ್ರ ಬಸ್ ನಿಲ್ದಾಣ, ರಾಮಮಂದಿರ ಮತ್ತು ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಲ್ಲಿ ಅಂಗಡಿ ಮುಂಗಟ್ಟುಗಳು, ಹೋಟೆಲ್‌ಗಳು ಬಂದ್ ಪ್ರಯುಕ್ತ ಯಾವುದೇ ವಹಿವಾಟು ನಡೆಸಲಿಲ್ಲ.

2ನೇ ಪುಟನೋಡಿ

## ಆರ್‌ಎಸ್‌ಎಸ್ ನಿಷೇಧಿಸಲು ಹೇಳಿಲ್ಲ

ಬೆಂಗಳೂರು, ಅ. 13: ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ನಿಷೇಧಿಸಬೇಕು ಎಂದು ನಾನು ಹೇಳಿಲ್ಲ. ಆರ್‌ಎಸ್‌ಎಸ್‌ನ ಚಟುವಟಿಕೆಗಳು ಸರ್ಕಾರಿ ಶಾಲೆಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಬೇಡ ಎಂದಷ್ಟೇ ಹೇಳಿದ್ದೇನೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ಸ್ಪಷ್ಟಪಡಿಸಿದ್ದಾರೆ.

ಆರ್‌ಎಸ್‌ಎಸ್‌ನನ್ನು ನಿಷೇಧಿಸುವಂತೆ ಪ್ರಿಯಾಂಕ ಖರ್ಗೆ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ ಎಂಬ ಸುದ್ದಿ ದೊಡ್ಡ ಮಟ್ಟದ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೆ ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ ಖರ್ಗೆ, ಆರ್‌ಎಸ್‌ಎಸ್ ನಿಷೇಧಿಸಬೇಕು ಅಂತ ನಾನು ಎಲ್ಲಿ ಹೇಳಿದ್ದೇನೆ ಎಂದು ಪ್ರಶ್ನಿಸಿದರು.



ಆರ್‌ಎಸ್‌ಎಸ್‌ನ ಚಟುವಟಿಕೆಗಳನ್ನು ಸರ್ಕಾರಿ ಶಾಲೆಗಳು, ಸಾರ್ವಜನಿಕ ಸ್ಥಳಗಳಲ್ಲಿ ನಡೆಸುವುದನ್ನು ನಿರ್ಬಂಧಿಸಬೇಕು ಎಂದು ನಾನು ಹೇಳಿದ್ದೇನೆ ಅಷ್ಟೇ ಎಂದರು.

ಆರ್‌ಎಸ್‌ಎಸ್ ನೋಂದಣಿಯಾಗಿದ್ದರೆ ಅದರ ಪ್ರತಿಯನ್ನು ಕೊಡಲಿ ಎಂದು ಒತ್ತಾಯಿಸಿದ ಪ್ರಿಯಾಂಕ ಖರ್ಗೆ, ಆರ್‌ಎಸ್ ಎಸ್ ಕಚೇರಿ ಮೇಲೆ ರಾಷ್ಟ್ರಧ್ವಜ ಹಾರಿಸಲು 55 ವರ್ಷ ಬೇಕಾಯಿತು ಎಂದು ವ್ಯಂಗ್ಯವಾಡಿದರು.

ಶಾಸಕ ಮುನಿರತ್ನ ಗಣವೇಷ ಹಾಕಿಕೊಂಡು

2ನೇ ಪುಟನೋಡಿ

## ಸಾರ್ವಜನಿಕರ ಸಮಸ್ಯೆ ಆಲಿಸಿದ ಮಾಜಿ ಸಚಿವ ರಾಜಶೇಖರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್‌ನಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ ಅವರು ಸೋಮವಾರ ಸಾರ್ವಜನಿಕರ ವಿವಿಧ ಸಮಸ್ಯೆಗಳನ್ನು ಆಲಿಸಿದರು. ನಾಗರಿಕರು ನೀರು, ರಸ್ತೆ, ವಿದ್ಯುತ್ ಹಾಗೂ ಸೌಲಭ್ಯಗಳ ಕೊರತೆ ಕುರಿತಂತೆ ಮನವಿ ಸಲ್ಲಿಸಿದರು. ಪಾಟೀಲರವರು ಪ್ರತಿ ವಿಷಯಕ್ಕೂ ತಕ್ಷಣ ಕ್ರಮಕೈಗೊಳ್ಳುವುದಾಗಿ ಭರವಸೆ ನೀಡಿದರು.

ಅವರು ಅಧಿಕಾರಿಗಳಿಗೆ ಜನರ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಸೂಚನೆ ನೀಡಿದರು. ಜನರ ಕಷ್ಟವನ್ನು ಅರಿತು ಕೆಲಸ ಮಾಡುವುದೇ ನಮ್ಮ ಕರ್ತವ್ಯ ಎಂದು ಹೇಳಿದರು. ಸಾರ್ವಜನಿಕರಿಗೆ ತೊಂದರೆ ಆಗದಂತೆ ನೊಡಿ ಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಿದರು.

## ಬ್ರಿಮ್ಸ್ ಆಸ್ಪತ್ರೆಗೆ ಜಿಲ್ಲಾಧಿಕಾರಿ ಭೇಟಿ: ಪರಿಶೀಲನೆ



ಬೀದರ, ಅ.13 : ನಗರದ ಬ್ರಿಮ್ಸ್ ಆಸ್ಪತ್ರೆಗೆ ಸೋಮವಾರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ರೋಗಿಗಳ ಕೋಣೆ, ಮಕ್ಕಳ ಚಿಕಿತ್ಸಾ ಘಟಕ, ತುರ್ತು ಚಿಕಿತ್ಸಾ ಘಟಕ, ಕುಡಿಯುವ ನೀರು, ಶೌಚಾಲಯ, ಸ್ವಚ್ಛತೆ, ವೈದ್ಯಕೀಯ ಸೌಲಭ್ಯ ಮುಂತಾದವುಗಳನ್ನು ಪರಿಶೀಲನೆ ನಡೆಸಿ ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ವ್ಯವಸ್ಥೆ ಕಲ್ಪಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ರೋಗಿಗಳೊಂದಿಗೆ ಮಾತನಾಡಿ ವೈದ್ಯಕೀಯ ಸೌಲಭ್ಯಗಳು ಹಾಗೂ ಸರಿಯಾದ ರೀತಿಯಲ್ಲಿ ಚಿಕಿತ್ಸೆ ನೀಡುತ್ತಿದ್ದಾರಾಯೇ ಅಥವಾ ಇಲ್ಲವೇ ಎಂದು ತಿಳಿದುಕೊಂಡರು. ಮಕ್ಕಳ ಚಿಕಿತ್ಸಾ ಘಟಕಕ್ಕೆ ಭೇಟಿ ನೀಡಿ ವೈದ್ಯರಿಂದ ಮಾಹಿತಿ ಪಡೆದರು. ವೈದ್ಯಕೀಯ ತಂಡ ಹಾಗೂ ಅಧಿಕಾರಿಗಳಿಂದ ಅಲ್ಲಿನ ಕುಂದುಕೊರತೆಗಳ ಬಗ್ಗೆ ಅರಿತು ಆಸ್ಪತ್ರೆಯಲ್ಲಿ ಕೆಲವು ಸುಧಾರಣೆಗಳು ಆಗಬೇಕಾಗಿದೆ ಎಂದು ಅಧಿಕಾರಿಗಳಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಬ್ರಿಮ್ಸ್‌ನ ವೈದ್ಯರು, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಳೆವೈಷಮ್ಯ ವಿಜಯಪುರದಲ್ಲಿ ಜೋಡಿ ಕೊಲೆ

ವಿಜಯಪುರ:ಅ.13: ವಿಜಯಪುರ ತಾಲ್ಲೂಕಿನ ಕಣ್ಣೂರು ಗ್ರಾಮದಲ್ಲಿ ಇಬ್ಬರು ಯುವಕರನ್ನು ಕ್ರೂರವಾಗಿ ಕೊಲೆ ಮಾಡಲಾಗಿದ್ದು, ಹಳೆವೈಷಮ್ಯದ ಶಂಕೆ ವ್ಯಕ್ತವಾಗಿದೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಮೃತರನ್ನು ಸಾಗರ್ ಬೆಲುಂಡಗಿ (25) ಮತ್ತು ಇಸಾಹಕ್ ಖುರೇಶಿ (24) ಎಂದು ಗುರುತಿಸಲಾಗಿದೆ.

ಪೊಲೀಸ್ ಮೂಲಗಳ ಪ್ರಕಾರ, ಭಾನುವಾರ ಅಪರಾಧ ಎಸಗಿದ ತಕ್ಷಣ ದಾಳಿಕೋರರು ಸ್ಥಳದಿಂದ ಪರಾರಿಯಾಗಿದ್ದಾರೆ.

ಸಾಗರ್ ಮತ್ತು ಇಸಾಹಕ್ ಇಬ್ಬರೂ ಎರಡು ವರ್ಷಗಳ ಹಿಂದೆ ತಮ್ಮೂರ್ ಗ್ರಾಮದ ಈರನಗೌಡ ಎಂಬ ವ್ಯಕ್ತಿಯ ಮೇಲೆ ಹಲ್ಲೆ ನಡೆಸಿದ್ದರು. ಈ ವೈಷಮ್ಯಕ್ಕೆ ಇಬ್ಬರ ಕೊಲೆ ನಡೆದಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ.

ಹಲ್ಲೆ ಬಳಿಕ ಹಲವು ದಿನಗಳ ಕಾಲ ಚಿಕಿತ್ಸೆ ಪಡೆಯುತ್ತಿದ್ದ ಈರನಗೌಡ ಅವರು ಚಿಕಿತ್ಸೆ ಗೆ ಸ್ಪಂದಿಸದೆ ಸಾವಿಗೀಡಾಗಿದ್ದರು.

ಈರನಗೌಡ ಅವರ ಸಾವಿಗೆ ಸೇಡು ತೀರಿಸಿಕೊಳ್ಳಲು ಇಬ್ಬರನ್ನು ಕೊಲೆ ಮಾಡಲಾಗಿದೆ ಎಂದು ಪೊಲೀಸರು ಶಂಕಿಸಿದ್ದಾರೆ.

ವಿಜಯಪುರ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ಆರೋಪಿಗಳನ್ನು ಪತ್ತೆಹಚ್ಚುವ ಪ್ರಯತ್ನಗಳು ನಡೆಯುತ್ತಿವೆ.

## ಬಾರ್ಬಡೋಸ್ ಸಂಸತ್ತಿಗೆ ಭೇಟಿ ನೀಡಿದ ಹೊರಟ್ಟಿ ಮತ್ತು ಖಾದರ್



ಬೆಂಗಳೂರು, ಅ 13:68ನೇ ಅಂತರರಾಷ್ಟ್ರೀಯ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದಲ್ಲಿ ಭಾಗವಹಿಸಲು ಬಾರ್ಬಡೋಸ್‌ಗೆ ಅಧಿಕೃತ ಭೇಟಿ ನೀಡಿದ ಸಂದರ್ಭದಲ್ಲಿ, ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಫರೀದ್ ಅವರು ಬಾರ್ಬಡೋಸ್ ಸಂಸತ್ತಿಗೆ ಭೇಟಿ ನೀಡಿದರು.

ಬಾರ್ಬಡೋಸ್ ಸಂಸತ್ತಿನ ಸಭಾಧ್ಯಕ್ಷರ ಪೀಠವು ಭಾರತದಿಂದ ಕೊಡಲ್ಪಟ್ಟಿದೆ. ಇದು ಭಾರತ ಮತ್ತು ಬಾರ್ಬಡೋಸ್ ನಡುವಿನ ಸ್ನೇಹ ಮತ್ತು ಸಂಸತ್ತೀಯ ಸಹಕಾರದ ಸಂಕೇತವಾಗಿದೆ.

ಈ ಸಮ್ಮೇಳನವು ಬಾರ್ಬಡೋಸ್ ಶಾಸನಾಂಗದ ಕಾರ್ಯನಿರ್ವಹಣೆಯನ್ನು ಅರ್ಥಮಾಡಿಕೊಳ್ಳಲು ಮತ್ತು ಅಂತರ-ಸಂಸದೀಯ ಸಂಬಂಧಗಳನ್ನು ಬಲಪಡಿಸಲು ಮಹತ್ವದ ಅವಕಾಶವನ್ನು ಒದಗಿಸಿತು.

## ಶಾಸಕರ, ಹೈಕಮಾಂಡ್ ಬೆಂಬಲವಿಲ್ಲದೇ ಸಿಎಂ ಆಗಲು ಸಾಧ್ಯವಿಲ್ಲ: ಸಿಎಂ

ಬಾಗಲಕೋಟೆ:ಅ.13:ಪಕ್ಷದ ಶಾಸಕರ ಬೆಂಬಲವಿಲ್ಲದೆ ಮತ್ತು ಕಾಂಗ್ರೆಸ್ ಹೈಕಮಾಂಡ್ ಆಶೀರ್ವಾದವಿಲ್ಲದೆ ಯಾರೂ ಸಿಎಂ ಆಗಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರ ನವೆಂಬರ್‌ನಲ್ಲಿ ಎರಡೂವರೆ ವರ್ಷ ಪೂರ್ಣಗೊಳಿಸಲಿದ್ದು, ಈ ವೇಳೆ ಮುಖ್ಯಮಂತ್ರಿ ಬದಲಾವಣೆ ಮತ್ತು ಸಚಿವ ಸಂಪುಟ ಪುನರ್ರಚನೆ ಬಗ್ಗೆ ಮಾತುಗಳು ಕೇಳಿಬರುತ್ತಿದ್ದು, ಇದನ್ನು ಕೆಲವರು ನವೆಂಬರ್ ಕ್ರಾಂತಿ ಎಂದು ಕರೆಯುತ್ತಿದ್ದಾರೆ.

ನಾನು ಅಂತಹ ವಿಷಯಗಳಿಗೆ ಪ್ರತಿಕ್ರಿಯಿಸಲು ಬಯಸುವುದಿಲ್ಲ. ಈ ಹೈಕಮಾಂಡ್ ನಿರ್ಧಾರವೇ ಅಂತಿಮ. ಶಾಸಕರು ಮತ್ತು ಹೈಕಮಾಂಡ್ ಎರಡೂ ಬಹಳ ಮುಖ್ಯ. ಶಾಸಕರ ಬೆಂಬಲವಿಲ್ಲದೆ ಯಾರೂ ಮುಖ್ಯಮಂತ್ರಿಯಾಗಲು ಸಾಧ್ಯವಿಲ್ಲ. ಶಾಸಕರ ಬೆಂಬಲದ ಜೊತೆಗೆ ಹೈಕಮಾಂಡ್‌ನ ಆಶೀರ್ವಾದವೂ ಅಗತ್ಯ ಎಂದು ಸಿಎಂ ತಿಳಿಸಿದರು. ಹೈಕಮಾಂಡ್ ನಿರ್ಧಾರದ ಆಧಾರದ ಮೇಲೆ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ನಡೆಯಬಹುದು. ಇದಕ್ಕೆ ಶಾಸಕರ ಬೆಂಬಲದ

2ನೇ ಪುಟನೋಡಿ

## ಕಲಬುರಗಿ-ಬೆಂಗಳೂರು ಸ್ಟಾರ್ ಏರ್ ವಿಮಾನ ಹಾರಾಟ ಸ್ಥಗಿತ

ಕಲಬುರಗಿ: ಅ.13: ಕಲಬುರಗಿ ಮತ್ತು ಬೆಂಗಳೂರು ನಡುವೆ ಸಂಚರಿಸುತ್ತಿದ್ದ ಸ್ಟಾರ್ ಏರ್ ವಿಮಾನ ಸೇವೆ ಸ್ಥಗಿತಗೊಳ್ಳುತ್ತಿದೆ. ಅಕ್ಟೋಬರ್ 15ರಿಂದ ಸೇವೆ ನಿಲ್ಲಿಸುವುದಾಗಿ ಸಂಸ್ಥೆ ಘೋಷಿಸಿದ್ದು, ಈ ಭಾಗದ ವಿಮಾನಯಾನದ ಯಾತ್ರಿಕರಿಗೆ ನಿರಾಸೆಯುಂಟು ಮಾಡಿದೆ.

ಕಳೆದ ಕೆಲವು ವಾರಗಳಿಂದ ಪ್ರಯಾಣಿಕರ ಕೊರತೆಯಿಂದ ವಾರಕ್ಕೆ ಮೂರು ದಿನಗಳಷ್ಟೇ ವಿಮಾನ ಸಂಚಾರ ನಡೆಯುತ್ತಿತ್ತು. ಇದೀಗ ಸಂಸ್ಥೆ ಸಂಪೂರ್ಣ ಸೇವೆ ಸ್ಥಗಿತಗೊಳಿಸಲು ಮುಂದಾಗಿದೆ. ಉಡಾನ್ ಯೋಜನೆ ಅಡಿಯಲ್ಲಿ ಬೀದರ್, ಶಿವಮೊಗ್ಗ ಹಾಗೂ ನಾಂದೇಡ್ ಹೊಸ ಮಾರ್ಗಗಳು ಮಂಜೂರಾದ ಹಿನ್ನೆಲೆಯಲ್ಲಿ, ಕಲಬುರಗಿಗೆ ಬಳಸುತ್ತಿದ್ದ ವಿಮಾನವನ್ನು ನಾಂದೇಡ್ ಮಾರ್ಗಕ್ಕೆ ಬದಲಾಯಿಸುವ ನಿರ್ಧಾರ ಕೈಗೊಂಡಿದೆ ಎನ್ನಲಾಗುತ್ತಿದೆ. ಇದರಿಂದ ಮತ್ತೆ ಕಲ್ಯಾಣ ಕರ್ನಾಟಕದಲ್ಲಿನ ವೈಮಾನಿಕ ಸೇವೆ ಸ್ಥಗಿತದಿಂದ ಈ ಭಾಗದ ಪ್ರಯಾಣಿಕರು ನಿರಾಸೆಗೆ ಒಳಗಾಗುವಂತಾಗಿದೆ.




ಮಹ್ಮದ್ ಸಿರಾಜ್ :2025ರಲ್ಲಿ 8 ಟೆಸ್ಟ್‌ಗಳಲ್ಲಿ ಅತಿ ಹೆಚ್ಚು 37 ವಿಕೆಟ್ ಪಡೆದ ಬೌಲರ್ ಎಂಬ ಖ್ಯಾತಿಗೆ ಪಾತ್ರರಾಗಿದ್ದಾರೆ.

## ಒಂದನೇ ಪುಟದಿಂದ

### ತಾಳಿಕೋಟೆ ನಿಧನ

ಬಾಸ್ ಸೀಸನ್ 7ರಲ್ಲಿ ಅವರು ಸ್ಪರ್ಧಿಯಾಗಿ ಭಾಗವಹಿಸಿದ್ದರು.

ಕುಡುಕನಪಾತ್ರಗಳಲ್ಲಿಮನೋಜ್ಞವಾಗಿ ಅಭಿನಯಿಸುತ್ತಿದ್ದ ಇವರ 'ಕಲಿಯುಗದ ಕುಡುಕ', 'ಕುಡುಕರ ಸಾಮ್ರಾಜ್ಯ', ಮತ್ತು 'ಅಸಲಿ ಕುಡುಕ' ಬಹಳ ಫೇಮಸ್ ಆಗಿದ್ದವು. ಈ ನಾಟಕಗಳ ಆಡಿಯೋ ಕ್ಯಾಸೆಟ್‌ಗಳು ಕೂಡ ಆ ಕಾಲದಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಹೆಚ್ಚು ಪ್ರಸಿದ್ಧಿ ಪಡೆದಿದ್ದವು.

### 24.92 ಲಕ್ಷ ರೂ. ಗಾಂಜಾ ಜಪ್ತಿ

ಬಂಧನಕ್ಕೆ ಕಳಿಸಿದ್ದಾರೆ. ದಿನಾಂಕ: 12-10-2025 ರಂದು ರಾತ್ರಿ ಆನಂದರಾವ್ ಎಸ್.ಎನ್ ಪಿ.ಐ ಗಾಂಧಿಗಂಜ ಪೊಲೀಸ್ ಠಾಣೆ ರವರು ಠಾಣೆಯಲಿದ್ದಾಗ ಗಾಂಧಿಗಂಜ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಬೀದರ-ಕಮಠಾಣಾ ರೋಡಿನ ಕೆ.ಇ.ಬಿ ಫಂಕ್ಷನ್ ಹಾಲ್ ಗ್ರೌಂಡಿನಲ್ಲಿ ಒಬ್ಬ ವ್ಯಕ್ತಿ ಅಕ್ರಮವಾಗಿ ಪ್ಲಾಸ್ಟಿಕ್ ಚೀಲಗಳಲ್ಲಿ ಗಾಂಜಾ ಇಟ್ಟುಕೊಂಡು ಸಾರ್ವಜನಿಕರಿಗೆ ಗಾಂಜಾ ಮಾರಾಟ ಮಾಡುತ್ತಿದ್ದಾನೆ ಅಂತ ಬಂದ ಖಚಿತ ಮಾಹಿತಿಯನ್ನು ಆಧರಿಸಿ ಪ್ರದೀಪ ಗುಂಟಿ ಐಪಿಎಸ್, ಪೊಲೀಸ್ ಅಧೀಕ್ಷಕರು ಬೀದರ ಜಿಲ್ಲೆ, ಚಂದ್ರಕಾಂತ ಪೂಜಾರಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರು-1 ಬೀದರ ರವರ ಮಾರ್ಗದರ್ಶನದಂತೆ, ಇಬ್ಬರು ಪಂಚರು ಹಾಗೂ ತೂಕ ಮಾಡಲು ಒಬ್ಬ ವ್ಯಕ್ತಿಯನ್ನು ಹಾಗೂ ಗೇಜೆಟೆಡ್ ಅಧಿಕಾರಿಯಾದ ಶಿವನಗೌಡ ಪಾಟೀಲ ಪೊಲೀಸ್ ಉಪಾಧ್ಯಕ್ಷಕರು ಬೀದರ ರವರನ್ನು ಕರೆದುಕೊಂಡು ಠಾಣೆಯ ಸಿಬ್ಬಂದಿಯವರಾದ ಸಂಜುಕುಮಾರ , ಅನಿಲ್ ಸಿ, ಸುಧಾಕರ , ರಾಜಕುಮಾರ ಹಾಗೂ ಇಸ್ಮಾಯಿಲ್ ರವರೊಂದಿಗೆ ಹೋಗಿ ಬೀದರ-ಕಮಠಾಣಾ ರೋಡಿನ ಕೆ.ಇ.ಬಿ ಫಂಕ್ಷನ್ ಹಾಲ ಗ್ರೌಂಡಿನ ಖುಲ್ಲಾ ಜಾಗೆಯಲ್ಲಿ ಲೈಟಿನ ಕಂಬದ ಬೆಳಕಿನಲ್ಲಿ ಪ್ಲಾಸ್ಟಿಕ್ ಚೀಲಗಳಲ್ಲಿ ಗಾಂಜಾ ಇಟ್ಟುಕೊಂಡು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿರುವುದನ್ನು ಖಚಿತ ಪಡಿಸಿಕೊಂಡು ಆತನ ಮೇಲೆ ದಾಳಿ ಮಾಡಿ ಹಿಡಿದು ವಿಚಾರಿಸಲಾಗಿ ತನ್ನ ಹೆಸರು ವಿಳಾಸ ತಿಳಿಸಿದ್ದು ಪ್ಲಾಸ್ಟಿಕ್ ಚೀಲಗಳಲ್ಲಿರುವ ವಸ್ತುವಿನ ಬಗ್ಗೆ ವಿಚಾರಿಸಲಾಗಿ ಗಾಂಜಾ ಇರುವುದಾಗಿ ತಿಳಿಸಿದ ನಂತರ ಗೇಜೆಟೆಡ್ ಅಧಿಕಾರಿಯು ಪ್ಲಾಸ್ಟಿಕ್ ಚೀಲದಲ್ಲಿರುವ ವಸ್ತುವನ್ನು ಪಂಚರ ಸಮಕ್ಷಮ ಪರಿಶೀಲಿಸಿ ನೋಡಲಾಗಿ ಗಾಂಜಾ ಇದ್ದು ತೂಕ ಮಾಡಿ ನೋಡಲಾಗಿ ಒಟ್ಟು 24.920 ಕೆ.ಜಿ ಗಾಂಜಾ ಇದ್ದು ಇದರ ಅ.ಕೀ 24,92,000/- ರೂ ಇದ್ದು, ಸದರಿ ಗಾಂಜಾದ ಬಗ್ಗೆ ವಿಚಾರಿಸಲಾಗಿ ಹೆಚ್ಚಿನ ಹಣ ಸಂಪಾದಿಸಲು ಅಕ್ರಮವಾಗಿ ಗಂಜಾ ಮಾರಾಟ ಮಾಡುತ್ತಿರುವುದಾಗಿ ತಿಳಿಸಿದ್ದು, ಜಪ್ತಿ ಮಾಡಿದ ಗಾಂಜಾ ಹಾಗೂ ಆರೋಪಿತನನ್ನು ದಸ್ತಗಿರಿ ಮಾಡಿಕೊಂಡು ಠಾಣೆಗೆ ತಂದು ಗಾಂಧಿಗಂಜ ಪೊಲೀಸ್ ಠಾಣೆಯ ಅಪರಾಧ ಸಂಖ್ಯೆ : 193/2025 ಕಲಂ 20(ಬಿ),(ಜಿಜಿ),ಇ) ಎನ್.ಡಿ.ಪಿ.ಎಸ್ ಕಾಯ್ದೆಯಂತೆ ಪ್ರಕರಣವನ್ನು ದಾಖಲಿಸಿ ಕಾನೂನು ಕ್ರಮ ಕೈಗೊಂಡು ಆರೋಪಿತನನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಿದ್ದು, ಇರುತ್ತದೆ. ಈ ಪ್ರಕರಣವನ್ನು ಪತ್ತೆ ಹಚ್ಚುವಲ್ಲಿ ಪಾಲ್ಗೊಂಡ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಯವರ ಕಾರ್ಯಕ್ಷಮತೆಗೆ ಪೊಲೀಸ್ ಅಧೀಕ್ಷಕರು ಬೀದರ ಜಿಲ್ಲೆ ರವರು ಪ್ರಶಂಸೆ ವ್ಯಕ್ತಪಡಿಸಿರುತ್ತಾರೆ.

### ನಿಷೇಧಿಸಲು ಹೇಳಿಲ್ಲ

ಗಾಂಧೀಜಿ ಫೋಟೋ ಮುಂದಿಟ್ಟುಕೊಂಡು ನಿನ್ನೆ ಪ್ರತಿಭಟನೆ ನಡೆಸಿರುವುದು ಹಾಸ್ಯಾಸ್ಪದ. ಆರ್‌ಎಸ್‌ಎಸ್‌ನ ಇತಿಹಾಸ ಮುನಿರತ್ನ ಅವರಿಗೆ ಗೊತ್ತಿಲ್ಲ ಎನಿಸುತ್ತೆ ಎಂದು ವ್ಯಂಗ್ಯವಾಡಿದರು.

ಎಐಸಿಸಿ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರು ಗೃಹ ಸಚಿವರಾಗಿ ಆರ್‌ಎಸ್‌ಎಸ್ ಕಚೇರಿಗೆ ಹೋಗಿರುವ ಚಿತ್ರವನ್ನು ಬಿಜೆಪಿ ಟ್ವೀಟ್‌ನಲ್ಲಿ ಹಂಚಿಕೊಂಡಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, ಗೃಹ ಸಚಿವರಾಗಿ ಅವರು ಅಲ್ಲಿಗೆ ಭೇಟಿ ನೀಡಿ ಸೂಕ್ಷ್ಮ ಪ್ರದೇಶದಲ್ಲಿ ಶಿಬಿರ ಮಾಡುತ್ತಿದ್ದೀರಿ ಬಾಲಿ ಬಿಚ್ಚಿದರೆ ಹುಷಾರ್ ಎಂದು ಮುಖದ ಮೇಲೆ ಉಗಿದಿದ್ದಾರೆ. ಅದನ್ನು ಬಿಜೆಪಿಯವರು ಹೇಳಲ್ಲ. ಪೊಲೀಸ್ ಅಧಿಕಾರಿಗಳ ಜತೆ ಹೋಗಿದ್ದರು. ಶಾಖೆಗೆ ಹೋಗಿದ್ದಲ್ಲ ತಾಕೀತು ಮಾಡಕ್ಕೆ ಹೋಗಿದ್ದು ಎಂದು ಪ್ರಿಯಾಂಕ ಖರ್ಗೆ ಹೇಳಿದರು. ಆರ್‌ಎಸ್‌ಎಸ್‌ಗೆ ಸುಳ್ಳಿನ ಇತಿಹಾಸ ಇದೆ. ಗಾಂಧಿ ಕೊಂದ ಇತಿಹಾಸ ಇದೆ. ದೇಶದಲ್ಲಿ ಕೋಮು ವಿಷ ಬೀಜ ಬಿತ್ತಿದ ಇತಿಹಾಸ ಇದೆ. ಅವರಿಗೆ ಇತಿಹಾಸ ಇಲ್ಲದಿದ್ದರೆ ಅವರಿಗೆ ನಾನು ಇತಿಹಾಸದ ಪಾಠ ಮಾಡುತ್ತೇನೆ ಎಂದು ಹೇಳಿದರು. ಆರ್‌ಎಸ್‌ಎಸ್‌ನಲ್ಲಿ ಲೈಂಗಿಕ ಕಿರುಕುಳದ ಆರೋಪದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕೇರಳದ ಹುಡುಗ ಮಾಡಿರುವ ಇನ್ಸ್ ಟಾಗ್ರಾಂ ನೋಡಿದರೆ ಅದು ಗೊತ್ತಾಗುತ್ತದೆ. ರಾಜ್ಯದಲ್ಲೂ ಹನುಮೇಗೌಡ ಎಂಬುವರು ಆರ್‌ಎಸ್‌ಎಸ್‌ನಲ್ಲಿ ಲೈಂಗಿಕ ಕಿರುಕುಳ ಕೊಡುತ್ತಾರೆ ಎಂಬ ಪುಸ್ತಕ ಬರೆದಿದ್ದಾರೆ ಎಂದು ಹೇಳಿದರು.

**ಸಮಿತಿ ರಚಿಸಿದ ಬಿಜೆಪಿ**

ರಾಜ್ಯದಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿರ್ಬಂಧಿಸುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಸಚಿವ ಪ್ರಿಯಾಂಕ ಖರ್ಗೆ ಪತ್ರ ಬರೆದಿರುವ ಹಿನ್ನೆಲೆಯಲ್ಲಿ ಸರ್ಕಾರದ ನಡೆಯ ಮೇಲೆ ನಿಗಾ ಇಡಲು ಬಿಜೆಪಿ ಸಮಿತಿ ರಚನೆ ಮಾಡಿದೆ. ಶಾಲಾ-ಕಾಲೇಜು, ಸಾರ್ವಜನಿಕ ಸ್ಥಳ, ಮುಜರಾಯಿ ದೇವಸ್ಥಾನಗಳಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮಗಳಿಗೆ ಅವಕಾಶ ನೀಡಬಾರದು. ಈ ಸಂಬಂಧ ಕಾನೂನು ರೂಪಿಸಿ ಎಂದು ಪ್ರಿಯಾಂಕ ಖರ್ಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ರವರಿಗೆ ಪತ್ರ ಬರೆದಿರುವ ಬೆನ್ನಲ್ಲೆ ಈ ಪತ್ರದ ಪರಿಣಾಮಗಳ ಬಗ್ಗೆ ನಿಗಾ ಇಡಲು ಬಿಜೆಪಿ ವಿಧಾನಪರಿಷತ್ ಸದಸ್ಯರುಗಳಾದ ಎನ್. ರವಿಕುಮಾರ್, ಕೆಎನ್. ನವೀನ್ ರವರನ್ನೊಳಗೊಂಡ ಮೂವರು ಸಮಿತಿ ರಚಿಸಿದೆ. ಈ ಸಮಿತಿ ಸರ್ಕಾರದ ಮುಂದಿನ ನಡೆ ಮೇಲೆ ನಿಗಾ ಇಡಲಿದ್ದು, ಒಂದು ವೇಳೆ ಸರ್ಕಾರ ಪ್ರಿಯಾಂಕ ಖರ್ಗೆ ಪತ್ರಕ್ಕೆ ಸ್ಪಂದಿಸಿ ತೀರ್ಮಾನ ಮಾಡಿದರೆ ಪರಿಣಾಮಗಳ ಬಗ್ಗೆಯೂ ಅಧ್ಯಯನ ಮಾಡಲಿದೆ.

### ಬಂದ್‌ಗೆ ಮಿಶ್ರ ಪ್ರತಿಕ್ರಿಯೆ

**2ನೇ ಪುಟನೋಡಿ** ಹೀಗಾಗಿ, ಬಂದ್ ಕುರಿತು ಮಾಹಿತಿ ಇಲ್ಲದೆ ದೂರದ ಊರುಗಳಿಂದ ಬಂದಿದ್ದ ಜನರು ತೊಂದರೆ ಅನುಭವಿಸಿದರು. ರಿಂಗ್ ರಸ್ತೆಗಳಲ್ಲಿಯೂ ಬೆಳಗಿನ ಆರಂಭದಲ್ಲಿ ಪ್ರತಿಭಟನಾಕಾರರು ಅಲ್ಲಲ್ಲಿ ಕಂಡುಬಂದಿದ್ದರಿಂದ ಸಾರಿಗೆ ಸಂಸ್ಥೆಯ ಬಸ್‌ಗಳು ರಾಮಮಂದಿರ, ಖರ್ಗೆ ಪೆಟ್ರೋಲ್ ಬಂಕ್, ರಾಜಾಪುರ-ಶಹಾಬಾದ್ ಕ್ರಾಸ್, ಹುಮನಾಬಾದ್ ರಿಂಗ್ ರೋಡ್, ಆಳಂದ ಚೆಕ್‌ಪೋಸ್ಟ್ ಹಾಗೂ ಕಲಬುರಗಿಯ ಅಫಜಲಪುರ ಕ್ರಾಸ್‌ಗಳವರೆಗೆ ಅನ್ಯ ಜಿಲ್ಲೆಗಳ ಸಾರಿಗೆ ಬಸ್‌ಗಳು ಬಂದು ಅಲ್ಲಿಂದಲೇ ಹೊರವಲಯದ ರಸ್ತೆಗಳ ಮೂಲಕ ಸಂಚರಿಸಿದವು. ಈ ಮಧ್ಯೆ, ಆಳಂದ, ಅಫಜಲಪುರ, ಜೇವರ್ಗಿ, ಸೇಡಂ, ಶಹಾಬಾದ್, ಹುಮನಾಬಾದ್ ಕಡೆಗೆ ಪ್ರಯಾಣಿಸಬೇಕಿದ್ದ ಪ್ರಯಾಣಿಕರು ಅನಿವಾರ್ಯವಾಗಿ ಕ್ರ್ಯೂಸರ್ ಜೀಪ್‌ಗಳನ್ನು ಆಶ್ರಯಿಸಬೇಕಾಯಿತು. ಹೀಗಾಗಿ, ಕ್ರ್ಯೂಸರ್ ಚಾಲಕರು ಪ್ರಯಾಣಿಕರಿಂದ ದುಪ್ಪಟ್ಟು ಪ್ರಯಾಣ ದರ ವಸೂಲಿ ಮಾಡಿದರು. ಕಲಬುರಗಿ ಬಂದ್ ಪ್ರಯುಕ್ತ ಸುಮಾರು 20ಕ್ಕೂ ಅಧಿಕ ಸಂಘಟನೆಗಳ ಪದಾಧಿಕಾರಿಗಳು ಗಂಜ್ ಪ್ರದೇಶದ ನಗರೇಶ್ವರ ಶಾಲೆಯಿಂದ ಬೃಹತ್ ಮೆರವಣಿಗೆಯಲ್ಲಿ ಆಗಮಿಸಿದ್ದರಿಂದ ಕಲಬುರಗಿ ನಗರದ ಸೂಪರ್ ಮಾರ್ಕೆಟ್‌ನಲ್ಲಿ ಅಂಗಡಿಗಳನ್ನು ಕೆಲಹೊತ್ತು ಮುಚ್ಚಲಾಗಿತ್ತು. ಮೆರವಣಿಗೆ ಜಗತ್ ವೃತ್ತವನ್ನು ತಲುಪುತ್ತಿದ್ದಂತೆಯೇ ಅಂಗಡಿ-ಮುಂಗಟ್ಟುಗಳನ್ನು ತೆರೆದ ವರ್ತಕರು ಎಂದಿನಂತೆ ತಮ್ಮ ವಹಿವಾಟು ಆರಂಭಿಸಿದರು. ಇನ್ನು ಬಂದ್ ಕುರಿತು ಮಾಹಿತಿ ಇಲ್ಲದ ಕಾರಣಕ್ಕಾಗಿ ದೂರದ ಊರುಗಳಿಗೆ ಪ್ರಯಾಣಿಸಲು ಬಂದಿದ್ದ ಸ್ಥಳೀಯ ಪ್ರಯಾಣಿಕರು ಬಸ್‌ಗಳಿಲ್ಲದ ಕಾರಣಕ್ಕಾಗಿ ಕೇಂದ್ರ ಬಸ್ ನಿಲ್ದಾಣದಲ್ಲಿ ಮಧ್ಯಾಹ್ನ 2 ಗಂಟೆವರೆಗೆ ಬಂದ್ ಮುಕ್ತಾಯಕ್ಕಾಗಿ ಕಾಯುತ್ತಿದ್ದುದು ಗಮನ ಸೆಳೆಯುವಂತಿತ್ತು.

ಕರ್ನಾಟಕ ಪ್ರಾಂತ ರೈತ ಸಂಘ ಜಿಲ್ಲಾ ಸಮಿತಿ ಅಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ, ಅಖಿಲ ಭಾರತ ಕಿಸಾನ್ ಸಭಾ ಜಿಲ್ಲಾ ಸಮಿತಿಯ ಭಿಮಾಶಂಕರ ಮಾಡಿಯಾಳ, ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘ ಜಿಲ್ಲಾ ಸಮಿತಿ ಮುಖಂಡ ಭೀಮಶೆಟ್ಟಿ ಯಂಪಳ್ಳಿ, ನವಕರ್ನಾಟಕ ರೈತ ಸಂಘ ರಾಜ್ಯ ಸಮಿತಿಯ ದಯಾನಂದ ಪಾಟೀಲ್, ಕರ್ನಾಟಕ ರಾಜ್ಯ ರೈತ ಸಂಘ ಪುಟ್ಟಣ್ಣಯ್ಯ ಬಣದ ನಾಗೇಂದ್ರಪ್ಪ ಥಂಬೆ, ಕರ್ನಾಟಕ ರಾಜ್ಯ ರೈತ ಸಂಘದ (ಕೋಡಿಹಳ್ಳಿ ಚಂದ್ರಶೇಖರ ಬಣ) ಮಲ್ಲಿನಾಥ ಪಾಟೀಲ್, ಕರ್ನಾಟಕ ರಾಜ್ಯ ಜನವಾದಿ ಮಹಿಳಾ ಸಂಘಟನೆ ಜಿಲ್ಲಾ ಸಮಿತಿ ಅಧ್ಯಕ್ಷೆ ಪದ್ಮನಿ ಕಿರಣಗಿ, ಕರ್ನಾಟಕ ರಾಜ್ಯ ರೈತ ಸಂಘ (ಕುರುಬೂರು ಶಾಂತಕುಮಾರ ಬಣ) ಜಿಲ್ಲಾ ಸಮಿತಿ ಪದಾಧಿಕಾರಿಗಳು ಹಾಗೂ ರೈತ, ದಲಿತ, ಕನ್ನಡ, ಕಾರ್ಮಿಕ ಮಹಿಳಾ, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಪದಾಧಿಕಾರಿಗಳು ಹಾಗೂ ವಿವಿಧೆಡೆಗಳಿಂದ ಆಗಮಿಸಿದ್ದ ರೈತ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಸಿಎಂ ಆಗಲು ಸಾಧ್ಯವಿಲ್ಲ:ಸಿಎಂ

ಅಗತ್ಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ನೀಡಿದ್ದ ಹೇಳಿಕೆಯ ಕುರಿತು ಕೇಳಿದ ಪ್ರಶ್ನೆಗೆ ಸಿಎಂ ಈ ರೀತಿ ಪ್ರತಿಕ್ರಿಯೆ ನೀಡಿದರು.

ನವೆಂಬರ್ ಕ್ರಾಂತಿಯ ಬಗ್ಗೆ ಕೇಳಿದಾಗ, ಕ್ರಾಂತಿ, ಬ್ರಾಂತಿ ಎಲ್ಲಾ ಇಲ್ಲ, ಎಲ್ಲಾ ಭ್ರಮೆ ಎಂದು ಹೇಳಿದರು.

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್

ಮಲ್ಲಮ್ಮ ನುಡಿ ವಾರ್ತೆ ಬೀದರ, ಅ.13 : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ) ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೊ?ರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೊ?ರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಪೌರಾಡಳಿತ ಸಚಿವ ರಹೀಂ ಖಾನ್ ಬೀದರಗೆ

ಮಲ್ಲಮ್ಮ ನುಡಿ ವಾರ್ತೆ ಬೀದರ, ಅ.13: ಪೌರಾಡಳಿತ ಮತ್ತು ಹಜ್ ಸಚಿವರಾದ ರಹೀಂ ಖಾನ್ ಅವರು ಅಕ್ಟೋಬರ್.14 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ. ಅಕ್ಟೋಬರ್.14 ರಂದು ಬೆಳಿಗ್ಗೆ 10.30ಕ್ಕೆ ಸರ್ಕಿಟ್ ಹೌಸ್ ಬೀದರದಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳ ಜೊತೆ ಕಾರ್ಮಿಕ ಸಚಿವರೊಂದಿಗೆ ಚರ್ಚೆಯಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಬೀದರ ಫಾಳೆ ಕಲ್ಯಾಣ ಮಂಟಪದಲ್ಲಿ ಕಾರ್ಮಿಕ ಸಚಿವರ ಜೊತೆ ಬೀದರ ಜಿಲ್ಲೆಯ ಅಸಂಘಟಿತ ವರ್ಗಗಳ ಕಾರ್ಮಿಕರಿಗೆ "ಸ್ಮಾರ್ಟ್ ಕಾರ್ಡ ವಿತರಣೆ ಮತ್ತು ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅಕ್ಟೋಬರ್.15 ರಂದು ಬೆಳಿಗ್ಗೆ 9 ರಿಂದ 12 ಗಂಟೆಯವರೆಗೆ ಬೀದರ ಜಿಲ್ಲೆಯಲ್ಲಿ ನಿಗಧಿಪಡಿಸಿದ ಸ್ಥಳೀಐ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12.30 ಗಂಟೆಗೆ ಬೀದರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ.18 ರಂದು ನರೇಂದ್ರಸ್ವಾಮಿ ಬೀದರಗೆ

ಮಲ್ಲಮ್ಮ ನುಡಿ ವಾರ್ತೆ ಬೀದರ, ಅ.13: ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರಾದ ಪಿ.ಎಂ.ರೇಂದ್ರಸ್ವಾಮಿ ಅವರು ಅಕ್ಟೋಬರ್.18 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ. ಅಕ್ಟೋಬ್.18 ರಂದು ಮಧ್ಯಾಹ್ನ 2.30 ಗಂಟೆಗೆ ಬೀದರ ನೆಹರು ಮೈದಾನದಲ್ಲಿ ಬೀದರ ಜಿಲ್ಲಾ ಮಟ್ಟದ ಮಂಡಳಿ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ಬೀದರನಿಂದ ನಿರ್ಗಮಿಸಲಿದ್ದಾರೆಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಮಾನಸಿಕ ಆರೋಗ್ಯ ದಿನಚರಣೆ ಕುರಿತು ಕಾನೂನು ಅರಿವು, ನೆರವು




ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.13:ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಘಟಕ ಹಾಗೂ ಬ್ರೀಮ್ಸ ಶುಶ್ರೂಷಾ ಮಹಾವಿಧ್ಯಾಲಯ ಬೀದರ ಅವರುಗಳ ಸಂಯುಕ್ತಾಶ್ರಯದಲ್ಲಿ ಸೋಮವಾರ ಬ್ರೀಮ್ಸ ಆಸ್ಪತ್ರೆ ಬೀದರನಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಚರಣೆ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮ ಮತ್ತು ಜಿಲ್ಲಾ ಮಾನಸಿಕ ಆರೋಗ್ಯ ಪುನರ ವಿಮರ್ಶಾ ಮಂಡಳಿಯ ದೂರು ಸ್ವೀಕರಿಸುವ ಸ್ಥಳವನ್ನು ಬೀದರನ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಕೆ. ಕೋಮಲಾ ಅವರು ಚಾಲನೆ ನೀಡಿ ನಂತರ ವಿಶ್ವ ಮಾನಸಿಕ ಆರೋಗ್ಯ ದಿನಚರಣೆ ಕಾರ್ಯಕ್ರಮವನ್ನು ದೀಪ ಬೆಳಗುವುದರ ಮೂಲಕ ಉದ್ಘಾಟನೆಯ ಭಾಷಣವನ್ನು ಮಾಡಿದ್ದರು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಬೀದರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಅವರು ವಿಶ್ವ ಮಾನಸಿಕ ಆರೋಗ್ಯ ಕುರಿತು ಮತ್ತು ಲೋಕ ಅದಾಲತನ ಮಹತ್ವ ಮತ್ತು ಅದರ ಕಾರ್ಯವೈಖರಿ ಬಗ್ಗೆ ಮಾತನಾಡಿದ್ದರು

ಕಾರ್ಯಕ್ರಮದಲ್ಲಿ ರಾಜಕುಮಾರ ಮಾಳಗೆ ಅವರು ಅಧ್ಯಕ್ಷತೆಯ ಭಾಷಣವನ್ನು ಮಾಡಿದ್ದರು, ಉಪನ್ಯಾಸಕರಾಗಿ ಡಾ. ಅಮಲ್ ಶರಿಫ ಮಾನಸಿಕ ಆರೋಗ್ಯದ ಕುರಿತು ಮಾತನಾಡಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ. ಕಿರಣ ಪಾಟೀಲ್, ಬೀದರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸನ್ಮುಖಯ್ಯಾ ಬಿ. ಸ್ವಾಮಿ, ಕಾರ್ಯದರ್ಶಿ ಧನರಾಜ ಬಿರಾದರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಿರಶೇಟ್ಟಿ ಚನ್ನಶೇಟ್ಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿ ಆಕಾಶ ಸಜ್ಜನಶೆಟ್ಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂಧಿ ವರ್ಗದವರು ಹಾಗೂ ಬ್ರೀಮ್ಸ ಶುಶ್ರೂಷಾ ಮಹಾವಿಧ್ಯಾಲಯ ಮಕ್ಕಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಮಯದ ಸದ್ಬಳಕೆಯಿಂದ ಜೀವನದಲ್ಲಿ ಯಶಸ್ಸು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 13 : ಸಮಯದ ಸದ್ಬಳಕೆಯಿಂದ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯವಿದೆ ಎಂದು ಕರ್ನಾಟಕ ಜಾನಪದ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಜಗನ್ನಾಥ ಹೆಬ್ಬಾಳೆ ಹೇಳಿದರು. ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಬಿ.ಎ, ಬಿ.ಎಸ್ಸಿ, ಬಿ.ಕಾಂ, ಬಿ.ಬಿ.ಎ ಹಾಗೂ ಬಿ.ಸಿ.ಎ. ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಹಾಗೂ 2025-26ನೇ ಸಾಲಿನ ಕಾಲೇಜಿನ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಯಾವ ಸಮಯದಲ್ಲಿ ಏನನ್ನು ಮಾಡಬೇಕೋ ಅದನ್ನು ಮೊದಲು ಮಾಡಬೇಕು. ವಿದ್ಯಾರ್ಥಿಗಳು ಓದಿಗೆ ಸ್ವಯಂ ವೇಳಾ ಪಟ್ಟಿ ಹಾಕಿಕೊಳ್ಳಬೇಕು. ಏಕಾಗ್ರತೆಯಿಂದ ಅಧ್ಯಯನ ಮಾಡಬೇಕು ಎಂದು ತಿಳಿಸಿದರು. ಪಠ್ಯಕ್ರಮದ ಜತೆಗೆ ಜ್ಞಾನ ವೃದ್ಧಿಗೆ ಅತ್ಯಾಧುನಿಕ ಕಲಿಕಾ ಮಾಧ್ಯಮಗಳನ್ನು ಬಳಸಿಕೊಳ್ಳಬೇಕು. ಸನ್ನಡತೆ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು. ಶಾರದಾ ಮಾಳಗೆ ಮಾತನಾಡಿ, ಮನಸ್ಸಿದ್ದಲ್ಲಿ ಮಾರ್ಗವಿದೆ. ವಿದ್ಯಾರ್ಥಿಗಳು ಪರಿಶ್ರಮ ವಹಿಸಿದರೆ ಏನನ್ನು ಬೇಕಾದರೂ ಸಾಧಿಸಬಹುದು. ಕೆಎಎಸ್‌ನಲ್ಲಿ ತೇರ್ಗಡೆಯಾದ ನಾನೇ ಇದಕ್ಕೆ ನಿದರ್ಶನ ಎಂದು ತಿಳಿಸಿದರು. ಸಾಧನೆಯತ್ತ ಹೆಜ್ಜೆ ಇಡಲು ವಿದ್ಯಾರ್ಥಿಗಳು ಓದಿನತ್ತ ಗಮನ ಕೇಂದ್ರೀಕರಿಸಬೇಕು. ಮೊಬೈಲ್‌ನಿಂದ ದೂರವಿರಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಪ್ರೊ.ಶಂಕರಕೆ.ಗಣಗೊಂಡ ಮಾತನಾಡಿ, ವಿದ್ಯಾರ್ಥಿಗಳು ಆದರ್ಶ ಗುಣಗಳನ್ನು ಮೈಗೂಡಿಸಿಕೊಳ್ಳಬೇಕು. ಪರಿಶ್ರಮ ವಹಿಸಿ ವ್ಯಾಸಂಗ ಮಾಡುವ ಮೂಲಕ ಉತ್ತಮ ಫಲಿತಾಂಶ ಪಡೆಯಲು ಪ್ರಯತ್ನಿಸಬೇಕು ಎಂದು ತಿಳಿಸಿದರು.

ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ಪ್ರೊ. ಅಮರೆಪ್ಪ, ಪ್ರೊ. ಅಶೋಕ್ ಪಾಟೀಲ, ಸೂರ್ಯಕಾಂತ್ ಸಾಧುರೆ ಕಾಲೇಜಿನ ಸಿಬ್ಬಂದಿ ಕಾರ್ಯದರ್ಶಿ ಡಾ. ರಾಜಕುಮಾರ ಅಲ್ಲೂರೆ, ಸಾಂಸ್ಕೃತಿಕ ವಿಭಾಗದ ಸಂಯೋಜಕ ಡಾ. ಎಲಿಷ ದೇವಿದಾಸ, ದೈಹಿಕ ಶಿಕ್ಷಣ ನಿರ್ದೇಶಕ ಬಾಲಸುಬ್ರಹ್ಮಣ್ಯ ಚಾಲಾಕ್ ಉಪಸ್ಥಿತರಿದ್ದರು. ವೈಭವಿ, ಯಶಸ್ವಿ ನಿರೂಪಿಸಿದರು. ಶಿವಾನಿ ವಂದಿಸಿದರು.

## ನಾಟ್ಯ ವೈಭವಕ್ಕೆ ಮನಸೋತ ಪ್ರೇಕ್ಷಕರು






ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 13 : ನಾಟ್ಯಶ್ರೀ ನೃತ್ಯಾಲಯವು ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಭಾನುವಾರ ಆಯೋಜಿಸಿದ್ದ ದಸರಾ ನೃತ್ಯೋತ್ಸವ ಹಾಗೂ ಹಾಸ್ಯೋತ್ಸವದಲ್ಲಿ ಕಲಾ ಲೋಕವೇ ಅನಾವರಣಗೊಂಡಿತು. ನೃತ್ಯವೈಭವವು ನೆರೆದಿದ್ದ ಪ್ರೇಕ್ಷಕರು ಮನ ಸೋಲುವಂತೆ ಮಾಡಿತು.

ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ನೇತೃತ್ವದ ಕಲಾವಿದರ ತಂಡವು ವಿವಿಧ ನೃತ್ಯಗಳನ್ನು ಪ್ರದರ್ಶಿಸಿ ಕಲಾ ಸಿರಿವಂತಿಕೆಯನ್ನು ಅನಾವರಣಗೊಳಿಸಿತು.

ಭರತ ನಾಟ್ಯ, ಗರ್ಭಾ ನೃತ್ಯ, ಜಾನಪದ ನೃತ್ಯ, ಮರಾಠಿ ನೃತ್ಯ, ದೇಶಭಕ್ತಿಗೀತೆನೃತ್ಯ, ಮಹಿಷಮರ್ದಿನಿ ನೃತ್ಯರೂಪಕ ಮನಸೂರೆಗೊಂಡವು. 30ಕ್ಕೂ ಹೆಚ್ಚು ಕಲಾವಿದರ 'ಹಚ್ಚೇವು ಕನ್ನಡದ ದೀಪ ' ಆಕರ್ಷಕ ನೃತ್ಯದೊಂದಿಗೆ ನೃತ್ಯೋತ್ಸವ ಆರಂಭಗೊಂಡಿತು.

ಅಷ್ಟಲಕ್ಷ್ಮಿ ನೃತ್ಯ, ವಿಷ್ಣು ದಶಾವತಾರ ನೃತ್ಯ, 'ನೀನೊಲಿದರೆ ಕೊರಡು ಕೊನರುವುದಯ್ಯ' ವಚನ ನೃತ್ಯ, 'ಭಾರತಾಂಬೆ ಹೆಮ್ಮೆಯ ಮಕ್ಕಳು ನಾವು' ದೇಶಭಕ್ತಿ ಗೀತೆ ನೃತ್ಯ, ನವ ದುರ್ಗೆಯರ ಮರಾಠಿ ನೃತ್ಯ, ಸಂತ ಶಿಶುನಾಳ ಷರೀಫರ 'ಏನ ಕೊಡ ಏನ್ ಕೊಡವ ಹುಬ್ಬಳ್ಳಿ ಮಾಟ' ಗೀತೆ ನೃತ್ಯ, ಅಘೋರಿಗ ನೃತ್ಯ, ಕೋಲಾಟ, ಖ್ಯಾತ ಗಾಯಕಿ ರೇಖಾ ಅಪ್ಪಾರಾವ್ ಸೌದಿ ಅವರ 'ಹಾಲಲ್ಲಾದರು ಹಾಕು ನೀರಲ್ಲಾದರು ಹಾಕು...' ಸುಮಧುರ ಗೀತೆ ಸಭಿಕರ ಮೆಚ್ಚುಗೆಗೆ ಪಾತ್ರವಾದವು.

ಭಾನುಪ್ರಿಯ ಅರಳಿ ನಾಡಗೀತೆ ಹಾಗೂ ಬೇಂದ್ರೆಯವರ ಕವನ 'ನೀ ಹಿಂಗ ನೋಡಬೇಡ ನನ್ನ, ನೀ ಹಿಂಗ ನೋಡಿದರೆ ನನ್ನ, ತಿರುಗಿ ನಾ ಹೆಂಗ ನೋಡಲಿ ನಿನ್ನ..' ಸುಶ್ರಾವ್ಯವಾಗಿ ಹಾಡಿ ರಂಜಿಸಿದರು.

ವಿವಿಧ ನೃತ್ಯಕಲಾ ಪ್ರದರ್ಶನದಲ್ಲಿ ಮಕ್ಕಳು, ಪಾಲಕರು ಸೇರಿದಂತೆ 78 ಕಲಾವಿದರು ಪಾಲ್ಗೊಂಡರು.

ಅನುಭವದ ಸಾಹಿತ್ಯ ರಚನೆಯಾಗಲಿ: ಅನುಭವದ ಸಾಹಿತ್ಯ ರಚಿಸುವ ಅಗತ್ಯವಿದೆ ಎಂದು ಬೇಂದ್ರ ದರ್ಶನ ಕುರಿತು ಉಪನ್ಯಾಸ ನೀಡಿದ ಧಾರವಾಡದ ಚಲನಚಿತ್ರ ನಟ ಅನಂತಕೃಷ್ಣ ದೇಶಪಾಂಡೆ (ಬೇಂದ್ರೆ) ಹೇಳಿದರು.

ದ.ರಾ. ಬೇಂದ್ರೆ ಅವರು ತಾವು ನೋಡಿದ, ಅನುಭವಿಸಿದ, ಗ್ರಹಿಸಿದ ಸಂಗತಿಗಳಿಗೆ ಕವನ, ಕಥೆ ಸ್ವರೂಪ ನೀಡುತ್ತಿದ್ದರು ಎಂದು ಸ್ಮರಿಸಿದರು.

ಬೇಂದ್ರೆ ಅವರು ತಮ್ಮ ಮಗಳ ಅನಾರೋಗ್ಯದ ವೇಳೆ ರಚಿಸಿದ ಗೀತೆ, ಬ್ರಿಟಿಷರು ಜೈಲಿಗೆ ಹಾಕಿದಾಗ ಕವನ ರಚನೆಗೆ ಕಾರಣವಾದವರು ಯಾರು ಎಂದು ವಿವರಿಸಿದ ಪರಿ ಮೊದಲಾದವುಗಳನ್ನು ಮೆಲುಕು ಹಾಕಿದರು.

ಕೆಲ ಹೊತ್ತು ಬೇಂದ್ರೆ ಅವರ ಧಾಟಿಯಲ್ಲೇ ಮಾತನಾಡಿ, ಗಾಯನ ಮಾಡಿ ಗಮನ ಸೆಳೆದರು.

ಕನ್ನಡ ಪ್ರಪಂಚದ ಅತ್ಯುತ್ತಮ ಭಾಷೆಯಾಗಿದೆ ಎಂದು ಕನ್ನಡವೆಂಬ ಸೊಬಗು ಕುರಿತು ಮಾತನಾಡಿದ ಮೈಸೂರಿನ ಖ್ಯಾತ ಸಾಹಿತಿ, ಹಾಸ್ಯ ಕಲಾವಿದ ಪ್ರೊ. ಕೃಷ್ಣೇಗೌಡ ಬಣ್ಣಿಸಿದರು.

ಕನ್ನಡ ಭಾಷೆಯೇ ಚೆಂದ ಆಗಿರುವುದರಿಂದ ಕವಿತೆಗಳೂ ಚೆಂದವಾಗಿಯೇ ಮೂಡಿ ಬರುತ್ತವೆ ಎಂದು ತಿಳಿಸಿದರು. ಆಂಗ್ಲ ಭಾಷೆ ವ್ಯಾಮೋಹದ ನಡುವೆಯೂ ಕನ್ನಡ ಭಾಷೆಯನ್ನು ಉಳಿಸಬೇಕಾದ ಅನಿವಾರ್ಯತೆಯನ್ನು ವಿವರಿಸಿದರು. ಗ್ರಾಮೀಣ ಸೊಗಡಿನಲ್ಲಿ ಹಾಸ್ಯ ಹಾಸು ಹೊಕ್ಕಿರುವುದನ್ನು ವಿವರಿಸಿ, ನೆರೆದವರನ್ನು ನಗೆಗಡಲಲ್ಲಿ ತೇಲಿಸಿದರು.

ಸಂಯುಕ್ತ ಕರ್ನಾಟಕ ಜಿಲ್ಲಾ ಹಿರಿಯ ವರದಿಗಾರ ಸದಾನಂದ ಜೋಶಿ, ಟಾಟಾ ಎಐಎ ಲೈಫ್ ಇನ್ಸುರೆ?????ನ ಕೆ. ಕಿರಣಮೂರ್ತಿ ಹಾಗೂ ಭರತ ನಾಟ್ಯ ಜೂನಿಯರ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ನಾಟ್ಯಶ್ರೀ ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ಅಧ್ಯಕ್ಷತೆ ವಹಿಸಿದ್ದರು. ವಚನಾಮೃತ ಕನ್ನಡ ಸಂಘದ ಅಧ್ಯಕ್ಷ ಪ್ರೊ. ಸಿದ್ರಾಮಪ್ಪ ಮಾಸಿಮಾಡೆ, ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಡಾ. ಜಗನ್ನಾಥ ಹೆಬ್ಬಾಳೆ, ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಡಾ. ಪೂರ್ಣಿಮಾ ಜಿ, ಸಮಾಜ ಸೇವಕಿ ನೀತಾ ಎಸ್. ಬೆಲ್ದಾಳೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಸಹಾಯಕ ಕೃಷಿ ನಿರ್ದೇಶಕಿ ಡಾ. ಆರತಿ ಪಾಟೀಲ ಉಪಸ್ಥಿತರಿದ್ದರು.

ನೃತ್ಯಾಲಯದ ನಿರ್ದೇಶಕ ಸತ್ಯಮೂರ್ತಿ ಸ್ವಾಗತಿಸಿದರು. ಬಸವರಾಜ ಮೂಲಗೆ, ರಾಘವೇಂದ್ರ ಅಡಿಗ, ದೇವಿದಾಸ ಜೋಶಿ ಹಾಗೂ ಸ್ವರೂಪರಾಣಿ ನಾಗೂರೆ ನಿರೂಪಿಸಿದರು.

ರಂಗಮಂದಿರ ಕಲಾಭಿಮಾನಿಗಳಿಂದ ತುಂಬಿ ತುಳುಕಿತ್ತು. ಅವರ ಚಪ್ಪಾಳೆ ಸದ್ದು ನೃತ್ಯ ಕಲಾವಿದರನ್ನು

## ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಗೆ ಅಧಿಸೂಚನೆ ಪ್ರಕಟ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 13 :ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ ಜಿಲ್ಲಾ ಘಟಕದ ಜಿಲ್ಲಾ ಚುನಾವಣಾ ಅಧಿಕಾರಿ ಕಚೇರಿಯನ್ನು ಬೀದರ ನಗರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯ ಮೊದಲ ಮಹಡಿಯಲ್ಲಿ ಅಕ್ಟೋಬರ್ 13ರಂದು ಬೆಳಿಗ್ಗೆ 11 ಕ್ಕೆ ಚಾಲನೆ ನೀಡಲಾಗಿದೆ. ಸಂವಿಧಾನ ಶಿಲ್ಪಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅಧಿಸೂಚನೆ ಹಾಗೂ ಸದಸ್ಯರ ಪಟ್ಟಿಯನ್ನು ಪ್ರಕಟಿಸಿ ಚುನಾವಣಾ ಪ್ರಕ್ರಿಯೆಗೆ ಚಾಲನೆ ಕೊಡಲಾಗಿದೆ.

ಜಿಲ್ಲಾ ಚುನಾವಣಾಧಿಕಾರಿ ಶಶಿಕಾಂತ ಎಸ್ ಶೆಂಬೆಳ್ಳಿ, ನೋಡಲ್ ಅಧಿಕಾರಿಗಳಾದ ಮಹೇಶ ಕುಲಳ್ಳಿ, ವಿಜಯಕೃಷ್ಣ, ಸಹ ದಣಾಧಿಕಾರಿ ಮಾತನಾಡಿ ಈ ಸಾಲಿನ ಅ. 13 ರಂದು ಮತದಾರರ ಕರಡು ಪಟ್ಟಿ ಪ್ರಕಟಿಸಲಾಗಿದೆ. ಅ. 16 ರಂದು ಮತದಾರರ ಪಟ್ಟಿಯಲ್ಲಿನ ತಿದ್ದುಪಡಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಇರುತ್ತದೆ. ಅ. 18ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ, ಅ. 19ರಂದು ನಾಮಪತ್ರ ಸಲ್ಲಿಕೆ ಆರಂಭ, ಅ. 27 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ, ಅ.28 ರಂದು ನಾಮಪತ್ರಗಳ ಪರಿಶೀಲನೆ, ಅ. 30 ರಂದು ನಾಮಪತ್ರಗಳನ್ನು ಹಿಂಪಡೆಯಲು ಕೊನೆಯ ದಿನವಾಗಿದೆ. ಅಂದೇ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಿಸಲಾಗುವುದು. ನ. 9 ರಂದು ಭಾನುವಾರ ಬೆ. 9 ರಿಂದ ಮ. 3ರ ವರೆಗೆ ಅಗತ್ಯ ಬಿದ್ದಲ್ಲಿ ಮತದಾನ, ಅಂದೇ ಮಧ್ಯಾಹ್ನ 3.30 ರ ನಂತರ ಮತಗಳ ಎಣಿಕೆ ಹಾಗೂ ಫಲಿತಾಂಶ ಪ್ರಕಟಣೆ ಮಾಡಲಾಗುವುದು ಎಂದರು.

ವಿಶೇಷ ಸೂಚನೆ: ಅ. 20 ರಿಂದ 22ರ ವರೆಗೆ ದೀಪಾವಳಿ ಹಬ್ಬದ ಪ್ರಯುಕ್ತ ರಜೆ ಇರುತ್ತದೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಪ್ರತಿದಿನ ಬೆ. 11 ರಿಂದ ಮ. 3ರ ವರೆಗೆ ಚುನಾವಣಾ ಕಚೇರಿ ತೆರೆದಿರುತ್ತದೆ. ಚುನಾವಣೆಗೆ ಸಂಬಂಧಿಸಿದಂತೆ ಯಾವುದಾದರೂ ಮಾಹಿತಿ ಬೇಕಿದ್ದಲ್ಲಿ ನೇರವಾಗಿ ಕಚೇರಿಗೆ ಬಂದು ಲಿಖಿತ ರೂಪದಲ್ಲಿ ಅರ್ಜಿ ಸಲ್ಲಿಸಬೇಕು. ಚುನಾವಣಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಜೊತೆ ಎಲ್ಲರೂ ಸಹಕಾರ ಕೊಡಬೇಕು. ಯಾರೂ ಕೂಡ ಅಶಿಸ್ತಿನಿಂದ ವರ್ತಿಸಬಾರದು. ಪಾರದರ್ಶಕ, ಕಾನೂನು ಬದ್ಧವಾಗಿ ಇಡೀ ಚುನಾವಣೆ ನಡೆಯಲಿದೆ. ಇಡೀ ಚುನಾವಣೆ ಪ್ರಕ್ರಿಯೆಯ ವಿಡಿಯೋ ಚಿತ್ರೀಕರಣ ನಡೆಯಲಿದೆ ಎಂದು ತಿಳಿಸಿದ್ದಾರೆ.

## ಇಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಬೀದರಗೆ

ಮಲ್ಲಮ್ಮ ನುಡಿ ವಾರ್ತೆ ಬೀದರ, ಅ.13 : ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಎಸ್.ಲಾಡ್ ಅವರು ಅಕ್ಟೋಬರ್.14 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ. ಅಕ್ಟೋಬರ್.14 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳ ಜೊತೆ ಬೀದರನ ಸರ್ಕೂಟ್ ಹೌಸ್‌ದಲ್ಲಿ ಚರ್ಚೆ ನಡೆಸಲಿದ್ದಾರೆ. ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ಬೀದರ ಜಿಲ್ಲಾ ಕಾಂಗ್ರೆಸ್ ಪಕ್ಷದ ಕಛೇರಿಗೆ ಭೇಟಿ ನೀಡಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಬೀದರನ ಫಾಳೆ ಕಲ್ಯಾಣ ಮಂಟಪದಲ್ಲಿ ಬೀದರ-ಜಿಲ್ಲೆಯ ಅಸಂಘಟಿತ ವರ್ಗಗಳ ಕಾರ್ಮಿಕರಿಗೆ "ಸ್ಮಾರ್ಟ್ ಕಾರ್ಡ್" ವಿತರಣೆ ಮತ್ತು ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ನಂತರ ಸಂಜೆ 6 ಗಂಟೆಗೆ ರಸ್ತೆ ಮೂಲಕ ಕಲಬುರಗಿಗೆ ಪ್ರಯಾಣಿಸಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಡಿಗೇರಾದಲ್ಲಿ ಗಮನ ಸೆಳೆದ ಪಥಸಂಚಲನ * ಆರ್ ಎಸ್ ಎಸ್ ಜನ್ಮ ಶತಾಬ್ಧಿ ಹಿನ್ನಲೆ

# ಜ್ಞಾನದ ಬಲದಿಂದ ಭಾರತ ವಿಶ್ವಗುರು ಆಗಿತ್ತು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಜನ್ಮ ಶತಾಬ್ಧಿ ಮತ್ತು ವಿಜಯದಶಮಿ ಹಿನ್ನಲೆಯಲ್ಲಿ ಜಿಲ್ಲೆಯ ವಡಿಗೇರಾ ಪಟ್ಟಣದಲ್ಲಿ ಗಣವೇಶಧಾರಿಗಳ ಪಥಸಂಚಲನ ಕಾರ್ಯಕ್ರಮ ಭಾನುವಾರ ಸಂಜೆ ಅದ್ದೂರಿಯಾಗಿ ನಡೆಯಿತು.

ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯಿಂದ ಬಸವೇಶ್ವರ ವೃತ್ತದ ಮೂಲಕ ಶ್ರೀದೇವಿ ದೇವಸ್ಥಾನ, ವಾಲ್ಮೀಕಿ ವೃತ್ತ ಮೂಲಕ ಸರ್ಕಾರಿ ಮಾದರಿ ಶಾಲೆ ಆವರಣದಲ್ಲಿ ಸಮಾವೇಶಗೊಂಡಿತು.

ಈ ವೇಳೆ ಬೌದ್ಧಿಕ ನೀಡಿದ ಸಂಘದ ಕಲಬುರಗಿ ವಿಭಾಗ ಕಾರ್ಯವಾಹ ಡಾ.ನಾಗರಾಜ ಮನ್ನೆ, ಜಗತ್ತಿನ ಯಾವುದೇ ವೈಜ್ಞಾನಿಕ ಸಾಧನೆಗಳಿದ್ದರೂ ನಮ್ಮ ಹಿರಿಯರು ಸಾಧನೆ ಮಾಡಿದ್ದಾರೆ. ನಮ್ಮಲ್ಲಿನ ಜ್ಞಾನದ ಬಲದಿಂದ ಭಾರತ ಈ ಹಿದೆಯೇ ವಿಶ್ವಗುರುವಾಗಿ ಮೆರೆದಿತ್ತು. ಜಗತ್ತನ್ನೇ ಗೆಲ್ಲುತ್ತೇನೆ ಎಂದು ಬಂದಿದ್ದ ಅಲೆಕ್ಸಾಂಡರ್ ಸೋತು ಸತ್ತುಹೋದ ಎಂದರು.

ಶೂರತ್ವ, ಸಮೃದ್ಧಿ ಹೀಗೆ ಎಲ್ಲ ರಂಗಗಳಲ್ಲಿ ನಮ್ಮ ಭಾರದ ಉಚ್ಛ್ರಾಯ ಸ್ಥಿತಿಯಲ್ಲಿತ್ತು. ಪಕ್ಕದಲ್ಲಿನ ಚಿತ್ತಾಪುರ ತಾಲೂಕಿನ ನಾಗಾವಿಯಲ್ಲಿ ವಿದ್ಯಾರ್ಥಿಗಳಿಗೆ ಜ್ಞಾನಾರ್ಜನೆ ಮಾಡಲು ವಿದ್ಯಾಲಯವಿತ್ತು. ನಾಟ್ಯ, ಚಿತ್ರಕಲೆ, ವಿಜ್ಞಾನ, ಖಗೋಳಶಾಸ್ತ್ರ ಹೀಗೆ ನಾವೆಲ್ಲೂ ಹಿಂದೆ ಬಿದ್ದವರಲ್ಲ. ಆದರೆ, ನೈಜ ಇತಿಹಾಸ ಮರೆ ಮಾಚುವ ಕೆಲಸ ಮಾಡಲಾಯಿತು ಎಂದು ಹೇಳಿದರು.

ವಿಜಯನಗರ ಸಾಮ್ರಾಜ್ಯದಲ್ಲಿ ಮುತ್ತು, ರತ್ನ, ಹವಳ ಮತ್ತು ಬಂಗಾರವನ್ನು ತರಕಾರಿ ಮಾರುವ ರೀತಿಯಲ್ಲಿ ಮಾರುಕಟ್ಟೆಯಲ್ಲಿ ಮಾರಾಟ ಮಾಡಲಾಗುತ್ತಿತ್ತು. ಆಯುರ್ವೇದ ವೈದ್ಯಶಾಸ್ತ್ರದಲ್ಲಿ ಭಾರತ ಎತ್ತಿದ ಕೈಯಿತ್ತು. ಆದರೆ, ನಮ್ಮ ಶ್ರೇಷ್ಠ ಇತಿಹಾಸ ಮತ್ತು ಪರಂಪರೆ ಮರೆತು ಬ್ರಿಟಿಷರ ಗುಲಾಮಗಿರಿಯಲ್ಲಿ ಬದುಕುವ ಅನಿವಾರ್ಯ ಸಂದರ್ಭ ಎದುರಾದಾಗ ಸ್ಥಾಪನೆಯಾಗಿದ್ದೇ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಎಂದು ವಿವರಿಸಿದರು.

ಹಿಂದೂ ಎಂದರೆ ಸಂಕುಚಿತ ಅಲ್ಲ. 33 ಕೋಟಿ ದೇವತೆಗಳನ್ನು ನಾವು ಪೂಜಿಸುತ್ತೇವೆ. ಆದರೆ ನಮ್ಮ ನಿಷ್ಠೆ ಇರುವುದು ನಮ್ಮ ದೇಶಕ್ಕೆ. ದೇಶಕ್ಕೆ ಒಳಿತಾಗಲಿ ಎಂಬ ಕಾಳಜಿ ಇರುವ ಪ್ರತಿಯೊಬ್ಬ ಪ್ರಜೆಯೂ ಹಿಂದೂ ಎಂದು ಸಂಘ ನಂಬುತ್ತದೆ. ಭಾರತವನ್ನು ಪರಮ ವೈಭವಕ್ಕೆ ಕರೆದುಕೊಂಡು ಹೋಗುವುದೇ ಸಂಘದ ಗುರಿ ಎಂದರು.

ರಾಷ್ಟ್ರಪಿತ ಗಾಂಧಿಜೀ ಹತ್ಯೆ ಸಂದರ್ಭದಲ್ಲಿ ಸಂಘದ ಮೇಲೆ ಆರೋಪ ಹೊರಸಿ, ನಿಷೇಧ ಹೇರುವ ಕೆಲಸ ಮಾಡಲಾಯಿತು. ಆದರೆ, ಕೆಲವೇ ದಿನಗಳಲ್ಲಿ ಹತ್ಯೆ ವಿಷಯದಲ್ಲಿ ಸಂಘದ ಪಾತ್ರವಿಲ್ಲ ಎಂದು ತಿಳಿದಾಗ ನಿಷೇಧ ವಾಪಸ್ ಪಡೆಯಲಾಯಿತು. ಈ ರೀತಿ ಆರ್ ಎಸ್ ಎಸ್ ಅನೇಕ ಕಠಿಣ ಸವಾಲುಗಳನ್ನು ಎದುರಿಸಿ ಶತಮಾನೋತ್ಸವ ಆಚರಿಸಿಕೊಂಡಿದೆ ಎಂದು ತಿಳಿಸಿದರು.

ಅಧ್ಯಕ್ಷತೆಯನ್ನು ರಾಚಯ್ಯ ಸ್ವಾಮಿ ಸ್ಥಾವರಮಠ ಅವರು ವಹಿಸಿದ್ದರು.

ಸಿದ್ದನಗೌಡ ಕಾಡಂನೂರ, ಸದಾಶಿವಪ್ಪಗೌಡ ರೊಟ್ನಡಗಿ, ಮಹೇಶರಡ್ಡಿ ಮುದ್ನಾಳ್, ಪರಶುರಾಮ ಕುರಕುಂದಿ, ಗೌರಿಶಂಕರ ಹಿರೇಮಠ, ಶಂಕ್ರಣ್ಣ ಸಾಹುಕಾರ ವಡಿಗೇರ, ಬಸವರಾಜ ಸೊನ್ನದ, ಸುರೇಶ ಅಂಬಿಗೇರ, ಗಂಗಾಧರ ಬಡಿಗೇರ, ಸಂಗಾರಡ್ಡಿಗೌಡ ಗಡ್ಡೆಸೂಗುರು, ವಿರೂಪಾಕ್ಷರಡ್ಡಿ ಮಾಚನೂರ, ಮಲ್ಲನಗೌಡ ಪೊಲೀಸ್ ಪಾಟೀಲ್, ಯಕಂಪ್ಪ ನಾಯಕ, ಶಿವುಕುಮಾರ ಕೊಂಕಲ್ ಇದ್ದರು.

# ಶ್ರೀ ಚನ್ನ ರೇಣುಕ ಬಸವ ಮಂಟಪದಲ್ಲಿ ವಿದ್ಯಾ ವಿಭೂಷಣ ಪ್ರಶಸ್ತಿ ಪ್ರಧಾನ




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :ಅ.13– ತಾಲೂಕಿನ ಶ್ರೀ ಚೆನ್ನಬಸವೇಶ್ವರ ಸಂಸ್ಥಾನ ಹಿರೇಮಠ, ಸುಕ್ಷೇತ್ರ ಹಾರಕೂಡ ವತಿಯಿಂದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸನ್ನಿಧಾನದಲ್ಲಿ ದಿನಾಂಕ 16. ರಂದು ಗುರುವಾರ ಮುಂಜಾನೆ 11.ಗಂಟೆಗೆ ಹಾರಕೂಡ ಶ್ರೀಮಠದಲ್ಲಿ ಶ್ರೀ ಚೆನ್ನರೇಣುಕಬಸವ ಮಂಟಪದಲ್ಲಿ "ವಿದ್ಯಾವಿಭೂಷಣ" ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ. ಅಧ್ಯಕ್ಷತೆ ಮಲ್ಲಿನಾಥ ಹಿರೇಮಠ ಹಾರಕೂಡ ವಹಿಸುವರು. ಕಾಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಾಬು ಹೊನ್ನಾ ನಾಯಕ ಸಮಾರಂಭ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಆನಂದ ಪಾಟೀಲ ಮಾಜಿ ಸದಸ್ಯರು, ಜಿಲ್ಲಾ ಪಂಚಾಯತ, ಕೋಹಿನೂರ. ಶಂಕರರಾವ ಮಾಣಿಕೆ ಹಾರಕೂಡ. ಪಂಡಿತರಾವ ಡಾವರೆ ಹಾರಕೂಡ. ಅಯ್ಯಪ್ಪ ಸಜ್ಜನಶೆಟ್ಟಿ ಹಾರಕೂಡ. ಶಶಿಧರ ಬಿರಾದಾರ ಸಿರಗಾಪೂರ. ಮಹಾದೇವ ಪೂಜಾರಿ ಗದಲೇಗಾಂವ. ವಿಜಯಕುಮಾರ ಅಟ್ನೂರೆ ಹಾರಕೂಡ ಭಾಗವಹಿಸಲಿದ್ದಾರೆ. ಚಿಂಚೋಳಿಯ ಬಸವರಾಜ ಐನೋಳಿ, ಪ್ರಶಸ್ತಿ ಪುರಸ್ಕೃತರ ಪರಿಚಯ ವಾಚನ ಮಾಡಲಿದ್ದಾರೆ. ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು. ವಿಧಾನ ಪರಿಷತ್ ಸದಸ್ಯ ಎಂ.ಜಿ. ಮುಳೆ. ಶಾಸಕರಾದ ಶರಣು ಸಲಗರ. ಪರಮೇಶ್ವರ ಹೊಳಕುಂದಿ ಬೆಳಮಗಿ. ಪಂಡಿತ ಪೂಜಾರಿ ಹಾರಕೂಡ. ಕಮಲಾಕರ ಧನ್ನೂರೆ ಹತ್ತರಗಾ. ಜ್ಯೋತಿ ಕೆರಗೋಟೆ ಹಾರಕೂಡ. ಮಂಜುಳಾ ಹರಕೆ ಹಾರಕೂಡ. ಬಸವರಾಜ ಪಡಶೆಟ್ಟಿ ಪ್ರಾಚಾರ್ಯರು, ಚಿಂಚೋಳಿ. ನೀಲಮ್ಮ ಮೋದಿನಪೂರ ಚಿಂಚೋಳಿ. ರವೀಂದ್ರಕುಮಾರ ಗೌನೂರ ಚಿಂಚೋಳಿ. ಸಂಗಮೇಶ ಕನಕಟ್ಟಾ ಚಿಂಚೋಳಿ. ಶಾಮಲಾಬಾಯಿ ಮಠಪತಿ ಚಿಂಚೋಳಿ. ಗುರುನಾಥ ರಾಠೋಡ ನಿಡಗುಂದಾ. ಹಣಮಂತರೆಡ್ಡಿ ಎಸ್. ಹಂದರಕಿ ನಿಡಗುಂದಾ. ಗುಂಡಪ್ಪಾ ಮಡಕೆ. ಶ್ರೀ ಭೀಮಾಶಂಕರ ಮಾಶಾಳಕರ. ತುಕಾರಾಮ ಬಸನಾಯಕ. ಅಪ್ಪಾಸಾಹೇಬ ಗುಂಡೆ ತಡಕಲ್. ಕಲ್ಪನಾ ದಯಾನಂದ ಶೀಲವಂತ. ವಿಠಲರಾವ ಮಂಡೆ ಕೊರಳ್ಳಿ. ಡಾ. ಚನ್ನವೀರ ಮಠಪತಿ ಯಲ್ಲದಗುಂಡಿ. ರಾಜಶೇಖರ ಮಿಣಜಗಿ ರುಕ್ಕಾಪೂರ. ಉಷಾದೇವಿ, ಪಿ. ಹಿರೇಮಠ ಹಾರಕೂಡ. ಸರೋಜಿನಿ. ಪಿ. ಹಿರೇಮಠ. ಕಮಲಾದೇವಿ. ಯಡಹಳ್ಳಿಮಠ ಕಲಬುರ್ಗಿ. ಲಲಿತಾ ಆಳಂದಿ ಬೀದರ. ಕಲ್ಯಾಣರಾವ ಹಾರಕೂಡ. ವಿಜಯಕುಮಾರ ಸಿರಗಾಪೂರ ವಿ. ಕೆ. ಸಲಗರ. ರಾಘವೇಂದ್ರರೆಡ್ಡಿ ಚಿಮ್ಮನಚೋಡ. ದಿಲೀಪಕುಮಾರ ಸ್ವಾಮಿ ರಾಜೇಶ್ವರ. ಶಂಕ್ರಯ್ಯ ಸ್ವಾಮಿ ದುಬಲಗುಂಡಿ. ದಯಾನಂದ ಹಿರೇಮಠ ರಾಮತೀರ್ಥ (ಡಿ). ಶಿವರಾಜ ಮಾಸ್ಟರ್ ಗೋಳಾ ಬಿ. ಕಲ್ಪನಾ ಶ್ರೀಶೈಲ ಚಿಟ್ಟೆ. ಪ್ರೊ. ರುದ್ರೇಶ ಗೋರ್ಟಾ ಬಿ. ರಾಚಯ್ಯಸ್ವಾಮಿ ನೀಲಹಳ್ಳಿ. ಮಲ್ಲಪ್ಪ ಕಾರಪೆಂಟರ್ ಚಿಂಚೋಳಿ. ಡಾ. ರಾಮಚಂದ್ರ ಗಣಾಪೂರ. ಡಾ. ಸಿದ್ದರಾಮ ಹೊನಕಲ್ ಶಹಾಪೂರ. ಶೋಭಾವತಿ ಶರಣಬಸಪ್ಪ ಹತ್ತೆ ಹಾರಕೂಡ. ಚನ್ನವೀರ ಜಮಾದಾರ ಗದಲೇಗಾಂವ, ಕುಮಾರಿ ಆಫ್ರೀನ್ ಬಿ ಮಹ್ಮದ್ ಖಾಸಿಂ ಹಾರಕೂಡ ಶ್ರೀದೇವಿ ಖಂಡಾಳೆ, ಕಾಪಸೆ. ಕಲ್ಪನಾ ಕಾಶಿನಾಥ ಸಿಂಧೆ ಎಕಲೂರ. ವಿಠಲ ಭಕ್ತಂಪಳ್ಳಿ ಚಿಂಚೋಳಿ. ಶಿವಲಿಂಗಪ್ಪ ರತ್ನಾಜಿ ಬೆಳಮಗಿ. ನೀಲಕಂಠ ಪತ್ತಾರ ಅಗರಖೇಡ. ಮಲಶೆಟ್ಟೆಪ್ಪಾ ಗಾದಗೆ ಜಾಂತಿ. ಕಲ್ಯಾಣರಾವ ಕಮಲಾಪೂರ. ಶಿವರಾಚಪ್ಪಾ ವಾಲಿ ನರೋಣಾ. ವಿಜಯಲಕ್ಷ್ಮೀ ನಾಗರಾಜ ವಾಲಿ. ರಾಜಣ್ಣ ಹುಡಗೀಕರ್ ಹಣಕುಣಿ. ಡಾ. ಬಸವರಾಜ ಬಾವಿ ರುಕ್ಕಾಪೂರ. ಸಂಗಮೇಶ ಚನ್ನಬಸಪ್ಪ ಕನಕಪೂರ. ಡಾ. ಮಾರುತಿ ಪೂಜಾರಿ ಬಗದೂರಿ. ಸಂಗೀತಾ ರಾಜಕುಮಾರ ಹಂಜಿಗೆ. ಡಾ. ಕರುಣಾ ಜಮದರಖಾನಿ ಕಲಬುರಗಿ. ಚಂದ್ರಕಲಾ ಶಶಿಧರ ಸಿರಗಾಪೂರ. ಡಾ. ವಿಜಯಕುಮಾರ ಬೇಲೂರೆ ಬೀದರ. ಅಂಬಾರಾಯ ಬೊಂಬಲೆ ಸೈದಾಪೂರ. ಚನ್ನಬಸಪ್ಪ ಶಿವರಾಜ ಬಿರಾದಾರ ಗೋನಳ್ಳಿ. ಬಾಬುರಾವ ಬಿರಾದಾರ ಖಾನಾಪೂರ (ಬಿ). ಸಂಗಪ್ಪ ಪಾಲಾಮೂರ ಚಿಂಚೋಳಿ. ಶರಣಬಸಪ್ಪ ಎಸ್ ಬಿರಾದಾರ ಹಿರನಾಗಾಂವ. ಗುರುಲಿಂಗಪ್ಪ ಮಾಸ್ಟರ್ ಕುದಮೂಡ. ಜಗದೇವಿ ಸಪಗೋಳ ನಿಡಗುಂದಾ. ಕಲ್ಲಪ್ಪ ಪೂಜಾರಿ ಪಂಢರಗೇರಿ ಇವರನ್ನು ವಿದ್ಯಾ ವಿಭೂಷಣ ಪ್ರಶಸ್ತಿ ಪ್ರದಾನ ಮಾಡಿ ಆಶೀರ್ವದಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಾಗತ ಸಮಿತಿ ಪದಾಧಿಕಾರಿಗಳಿಗೆ ಸನ್ಮಾನ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಅ 13 ಇಲ್ಲಿನ ಬಸವ ಧರ್ಮ ಪೀಠದ ಬಸವ ಮಹಾನೆಯ ಆವರಣದಲ್ಲಿ 24 ನೇಯ ಕಲ್ಯಾಣ ಪರ್ವ ಕಾರ್ಯಕ್ರಮದಲ್ಲಿ ಸ್ವಾಗತ ಸಮಿತಿ ಗೌರವಾಧ್ಯಕ್ಷರಾದ ಬಸವರಾಜ ಬುಳ್ಳಾ. ಅಧ್ಯಕ್ಷ ಕಂಟೆಪಾ ಗಂದಿಗುಡ. ಪ್ರಧಾನ ಕಾರ್ಯದರ್ಶಿಗಳಾದ ಶಿವರಾಜ ನರಶೆಟೆ. ಸೋಮನಾಥ ಪಾಟೀಲ ಗಾದಗಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಚಿವರಾದ ಈಶ್ವರ ಖಂಡ್ರೆ. ಪೂಜ್ಯ ಶ್ರೀ ಮಾತೆ ಗಂಗಾದೇವಿ. ಅನೇಕ ಪೂಜ್ಯರು. ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯ ವಿಜಯಸಿಂಗ. ಶಶಿಕಾಂತ ದುರ್ಗೆ. ರಾಷ್ಟ್ರೀಯ ಬಸವ ದಳ ತಾಲೂಕಾಧ್ಯಕ್ಷರಾದ ರವೀಂದ್ರ ಕೊಳಕೂರ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ‘ಮಹಿಳಾ ಸುರಕ್ಷತಾ ಅಕ್ಕಪಡೆ’

(ವರದಿ.ಡಿ.ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ :– ಅ 13 ಕಾಲೇಜಿನ ಸಮಯದಲ್ಲಿ ಪಾರ್ಕ್ ದೇವಾಲಯ ಗವಿ ಹೋಟಲಗಳಲ್ಲಿ ಸುತ್ತಾಡುವ ಬದಲು ವಿದ್ಯಾರ್ಥಿನಿಯರು ಓದಿನ ಕಡೆ ಗಮನ ಹರಿಸಬೇಕೆಂದು ಮಂಜುಳಾ ಮೇಡಂ ಹೇಳಿದರು. ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ, ಅಕ್ಕಮಹಾದೇವಿ ಮಹಿಳಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಸೋಮವಾರ ಮಹಿಳಾ ಸುರಕ್ಷತಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ವಿದ್ಯಾರ್ಥಿನಿಯರು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಕಾರ್ಯದಲ್ಲಿ ನಿರತನಾಗಿರಬೇಕು ತಂದೆ ತಾಯಿಯವರ ಹೆಸರು ತರುವ ಹಾಗೆ ಕಾಯಕದಲ್ಲಿ ತೊಡಗಿಸಿಕೊಳ್ಳಬೇಕು, ಆದಷ್ಟು ಮಟ್ಟಿಗೆ ಮೊಬೈಲ್ ಗಳಿಂದ ದೂರ ಇದ್ದು ತಮ್ಮ ಜೀವನವನ್ನು ರೂಪಿಸಿಕೊಳ್ಳಬೇಕೆಂದು ಹೇಳಿದರು. ಅಕ್ಕ ಪಡೆಯ ಇನ್ನೊಬ್ಬ ಅಧಿಕಾರಿಯ ಜನಬಾ ಮೇಡಂ ಅವರು ಮಾತನಾಡಿ ವಿದ್ಯಾರ್ಥಿನಿಯರಿಗೆ ತೊಂದ–ರೆ ಆದರೆ112 ನಂಬರಿಗೆ ಕರೆ ಮಾಡುವುದರ ಮೂಲಕ ತಮ್ಮ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕೆಂದು ಹೇಳಿದರು. ಶ್ರೀ ಬಸವೇಶ್ವರ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಭೀಮಾಶಂಕರ್ ಬಿರಾದರ್ ಅವರು ವಿದ್ಯಾರ್ಥಿನಿಯರನ್ನು ಉದ್ದೇಶಿಸಿ ಮಾತನಾಡಿದರು. ಅಧ್ಯಕ್ಷತೆ ಕಾಲೇಜಿನ ಪ್ರಾಚಾರ್ಯರಾದ ಮಾಯಾ ಮುರಾಳೆ ಅವರು ಮಾತನಾಡಿ ವಿದ್ಯಾರ್ಥಿನಿಯರು ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳಲಾರದೆ ಸಮಯದ ಉಪಯೋಗಪಡೆದುಕೊಳ್ಳಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಎಲ್ಲಾ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿದರು. ಉಪನ್ಯಾಸಕಿರಾದ ಡಾ. ಭುವನೇಶ್ವರಿ ಶ್ರೀವಾಸ್ತವ ನಿರೂಪಿಸಿದರು. ದಶರಥ. ಟಿ.ಹಳ್ಳಿಖೆಡೆ ವಂದಿಸಿದರು.

# ಅಂಬಿಗರ ಚೌಡಯ್ಯ ಮೂರ್ತಿ ಭಗ್ನ ಕ್ರಮಕ್ಕೆ ಅಶೋಕ ಕಾಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಕಲಬುರಗಿ ಜಿಲ್ಲೆಯ ಚಿತ್ತಾಪೂರ್ ತಾಲೂಕಿನ ಮುತ್ತಗಾ ಗ್ರಾಮದಲ್ಲಿರುವ ನಿಜ ಶರಣ ಅಂಬಿಗರ ಚೌಡಯ್ಯನವರ ಮೂರ್ತಿಯ ಎಡಗೈ ಒಡೆದು ಹಾಕಿ, ಬಲಗೈಯಲ್ಲಿದ್ದ ವಚನ ಪುಸ್ತಕದ ಭಾಗ ಕಟ್ ಮಾಡಲಾಗಿದೆ. ಹಾಗೂ ಮೂರ್ತಿಯ ಮುಖಕ್ಕೆ ಕೆಸರನ್ನು ಸಿಡಿಸಲಾಗಿದ್ದು, ಇಂತಹ ಕಿಡಿಗೇಡಿಗಳಿಗೆ ಕೂಡಲೇ ಬಂಧಿಸಬೇಕೆಂದು ಜನತಾದಳ ಜಾತ್ಯಾತೀತ ಪರಿಶಿಷ್ಟ ಪಂಗಡ ತಾಲೂಕಾಧ್ಯಕ್ಷ ಅಶೋಕ ಕಾಗೆ ಆಗ್ರಹಿಸಿದ್ದಾರೆ. ಮುತ್ತಗಾ ಗ್ರಾಮದಲ್ಲಿ ಮೂರ್ತಿ ಸ್ಥಾಪಿಸಿ ಒಂದು ವರ್ಷವಾಗಿದ್ದು, ಸಮಾಜಘಾತುಕ ಶಕ್ತಿಗಳು ಭಗ್ನಗೊಳಿಸಿರಿವುದು ಖಂಡನೀಯವಾಗಿದೆ. ಮಹಾ ಪುರುಷರು ಒಂದು ಜಾತಿ ಧರ್ಮಕ್ಕೆ ಸಿಮೀತವಾಗಿರದೆ ಮನುಕುಲಕ್ಕೆ ಆದರ್ಶಪ್ರಾಯರಾಗಿರುತ್ತಾರೆ. ಅಂತಹ ಮಹಾ ಪುರುಷರನ್ನು ಎಲ್ಲಾ ಸಮಾಜ ಗೌರವಿಸುತ್ತದೆ. ಚೌಡಯ್ಯನವರ ಮೂರ್ತಿ ಭಗ್ನಗೊಳಿಸಿರುವುದು ಟೋಕರೆ ಕೋಳಿ (ಕೋಲಿ–ಕಬ್ಬಲಿಗ) ಸಮುದಾಯಕ್ಕೆ ಭಾವನಾತ್ಮಕವಾಗಿ ದಾಳಿ ಮಾಡಿದಂತಾಗಿದ್ದು, ಸಮಾಜ ಘಾತುಕ ಶಕ್ತಿಯನ್ನು ತಕ್ಷಣವೇ ಬಂಧಿಸಿ, ಕಠಿಣ ಕಾನೂನು ಕ್ರಮ ಕೈಗೊಂಡು, ಸರಕಾರದಿಂದ ಕೂಡಲೇ ಮುತ್ತಗಾ ಗ್ರಾಮದಲ್ಲಿ ನಿಜ ಶರಣ ಅಂಬಿಗರ ಚೌಡಯ್ಯನವರ ಕಂಚಿನ ಮೂರ್ತಿ ಸ್ಥಾಪಿಸಬೇಕು ಎಂದು ಜನತಾದಳ ಜಾತ್ಯಾತೀತ ಪರಿಶಿಷ್ಟ ಪಂಗಡ ತಾಲೂಕಾಧ್ಯಕ್ಷ ಅಶೋಕ ಕಾಗೆ ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.



ಬಸವಕಲ್ಯಾಣ:–ಇಲ್ಲಿನ ಬಸವ ಧರ್ಮ ಪೀಠದ ಬಸವ ಮಹಾನೆಯ ಆವರಣದಲ್ಲಿ 24 ನೇಯ ಕಲ್ಯಾಣ ಪರ್ವ ಕಾರ್ಯಕ್ರಮದಲ್ಲಿ ಶೂನ್ಯ ಪೀಠಾರೋಹಣದ ವಾರ್ಷಿಕೋತ್ಸವ ನಿಮಿತ್ತವಾಗಿ ಪೂಜ್ಯ ಶ್ರೀ ಸಿದ್ದರಾಮೇಶ್ವರ ಸ್ವಾಮೀಜಿ ಅವರನ್ನು ಪೀಠದ ಲ್ಲಿ ಕೂಡಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)



ಬಸವಕಲ್ಯಾಣ :– ಇಲ್ಲಿನ ಬಸವ ಧರ್ಮ ಪೀಠದ ಬಸವ ಮಹಾನೆಯ ಆವರಣದಲ್ಲಿ 24 ನೇಯ ಕಲ್ಯಾಣ ಪರ್ವ ನಿಮಿತ್ತವಾಗಿ ಭಾನುವಾರ ಆಯೋಜಿಸಿದ್ದ ಮೆರವಣಿಗೆಯಲ್ಲಿ ಪೂಜ್ಯಶ್ರೀ ಮಾತೆ ಗಂಗಾದೇವಿ. ಪೂಜ್ಯಶ್ರೀ ಗಂಗಾಂಬಿಕಾ ಅಕ್ಕ. ಪೂಜ್ಯ ಶ್ರೀ ಮಾತೆ ಜ್ಞಾನೇಶ್ವರಿ. ರವೀಂದ್ರ ಕೊಳಕೂರ. ಆಕಾಶ ಖಂಡಾಳೆ. ಸೇರಿದಂತೆ ಅನೇಕರು ಭಾಗವಹಿಸಿದ್ದರು. (ಮಲ್ಲಮ್ಮ ನುಡಿ ಚಿತ್ರ)

ಅಭಿನವ ಶರಣ ಶಂಕರಲಿಂಗ ಮಹಾರಾಜರ ಜನ್ಮ ದಿನಾಚರಣೆ

# ಪ್ರಯುಕ್ತ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ




ಮಲ್ಲಮ್ಮ ನುಡಿ ವಾರ್ತೆ

(ರಾಜಕುಮಾರ ಆರ್.ಹಡಪದ)

ಚಿಟಗುಪ್ಪ:– ಕಮಲಾಪುರ ತಾಲೂಕಿನ ಸೊಂತ ಮುಲ್ಲಾಮಾರಿ ತೀರ ಕ್ಷೇತ್ರದ ಶರಣ ಶಂಕರಲಿಂಗ ಮಹಾರಾಜರ ಆಶ್ರಮದ ಪೀಠಾಧಿಪತಿಗಳಾದ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾಜರಾಜರ 35ನೇ ವರ್ಷದ ಜನ್ಮ ದಿನಾಚರಣೆ ಅಂಗವಾಗಿ ಮಠದ ಭಕ್ತಾಧಿಗಳು ಪಟ್ಟಣದ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿದರು. ನಂತರ ಮಲ್ಲಿಕಾರ್ಜುನ ಪಾಟೀಲ್, ಡಾ. ರವಿ ಸ್ವಾಮಿ ನಿರ್ಣಾ ಮತ್ತು ವಿಜಯಕುಮಾರ ಬೊಮಣಿ ಮಾತನಾಡಿ, ಶರಣ ಶಂಕರಲಿಂಗ ಮಹಾರಾಜರು ಧಾರ್ಮಿಕ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ. ಇವರ ಆಶೀರ್ವಾದದಿಂದ ಭಕ್ತರ ಕಷ್ಟಗಳನ್ನು ನಿವಾರಣೆ ಆಗುತ್ತಿವೆ ಎಂದರು. ಗುರುಗಳು ಶ್ರೀ ಮಠದಲ್ಲಿ ಅಕ್ಷರ ದಾಸೋಹ, ಅನ್ನದಾಸೋಹ ಕೈಗೊಳ್ಳುತ್ತಿರುವುದು ಮೆಚ್ಚುವಂತದಾಗಿದೆ ಎಂದರು. ಪೂಜ್ಯ ಗುರುಗಳು 100 ವರ್ಷಗಳ ಕಾಲ ಆರೋಗ್ಯವಂತರಾಗಿ ಬಾಳಿ ಧರ್ಮ ಸೇವೆ ಮಾಡಲಿ ಎಂದು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನರೆಡ್ಡಿ, ಪವನ ಪೂಜಾರಿ, ದತ್ತು ಹಲಗಿ, ಪ್ರಭು ಮುದನ್ನಾಳ, ಗುಂಡಪ್ಪ, ಮಹೇಶ್, ಶುಶೀಲ್, ಸತೀಶ ಗಂಜಿ, ಗುರುಬಸವ, ಸಂತೋಷ ಸೇರಿದಂತೆ ಭಕ್ತಾಧಿಗಳು ಉಪಸ್ಥಿತರಿದ್ದರು.

# ಶೂ ಎಸೆದ ವಕೀಲನ ಮೇಲೆ ಕ್ರಮ ಕೈಗೊಳ್ಳಲು ಮಾದಿಗ ದಂಡೋರ ಸಮಿತಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಭಾರತದ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳಾದ ಆರ್. ಗವಾಯಿ ಅವರ ಮೇಲೆ ವಕೀಲ ಕಿಶೋರ್ ರಾಕೇಶ್ ಶೂ ಎಸೆದ ಪ್ರಸಂಗ ಮಾಡಿರುವ ಅಮಾನವೀಯ ದುರ್ಘಟನೆಗೆ ಕಾನೂನು ಕ್ರಮ ಕೈಗೊಳ್ಳಬೇಕು ಆಗ್ರಹಿಸಿ ಮಾದಿಗ ದಂಡೋರ ಸಮಿತಿಯವರು ರಾಷ್ಟ್ರಪತಿ ಅವರ ಹೆಸರಿನ ಮೇಲೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಮಂಜುನಾಥ್ ಪಂಚಾಳ ಅವರಿಗೆ ಸಲ್ಲಿಸಿದರು. ಈ ಮನವಿ ಪತ್ರದಲ್ಲಿ ಕೃತ್ಯ ಎಸಗಿರುವ ವಕೀಲ ಕಿಶೋರ ರಾಕೇಶ ಅವರ ವಿರುದ್ಧ ದೇಶದ್ರೋಹ ಪ್ರಕರಣ ಹಾಗೂ ಕಠಿಣವಾದ ಜೀವಾವಧಿ ಶಿಕ್ಷೆ ನೀಡಬೇಕು ಎಂದು ಮನವಿ ಪತ್ರದಲ್ಲಿ ಅಗ್ರಹಿಸಲಾಗಿದೆ. ಈ ದಾಳಿಯ ಹಿಂದೆ ಬೆಂಬಲಕ್ಕೆ ನಿಂತಿರುವ ಮನಸ್ಥಿತಿ ಬಗ್ಗೆ ತನಿಖೆ ಆಗಬೇಕೆಂದು ಆಗ್ರಹಿಸಲಾಗಿದೆ. ಈ ಸಂದರ್ಭದಲ್ಲಿ ಮಾದಿಗ ದಂಡೋರ ತಾಲೂಕಾಧ್ಯಕ್ಷ ಲಾಲಪ್ಪ ರಾಂಪುರೆ, ಕಾರ್ಯದರ್ಶಿ ಬಸವರಾಜ ಶರಣಪ್ಪ, ರಾಜು ಮುಸ್ತರಿ, ಪುಟರಾಜ ಇಟಗಾ, ಧನರಾಜ ಮುಸ್ತರಿ, ವಿಠಲರಾಂಪುರೆ, ಸತೀಶ ಇಟಗಾ, ಸಂಜುಕುಮಾರ್ ರಾಂಪುರೆ, ರಾಜು ಚಾಂಗಲೇರಾ, ಸಂಜು ವಳಖಿಂಡಿ, ಬಸವರಾಜ ಬೆಳಕೇರಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

**PROCLAMATION**
**(NOTICE FOR APPEARANCE OF RESPONDENT)**
**IN THE COURT OF THE CIVIL JUDGE (JD) AT BHALKI**
**Crl. Misc. No: 1471/2025**

The Petitioners:-

1. Kallamma W/o Narasappa, Age: 61 Years, Occ: Housewife R/o Manna ekhelli Tq: Chitaguppa Dist: Bidar.
2. Narasappa S/o Prabhanna Kambari, age: 65 years, Occu: Agri R/o Manna ekhelli Tq: Chitaguppa Dist: Bidar.
3. Renuka D/o Narasappa Kambari, age: 34 years, Occu: Agri R/o Manna ekhelli Tq: Chitaguppa Dist: Bidar.

//Versus//

The Respondent:-

**The Tahasildar Bhalki,**

Subject: Petition U/S 13 (3) of Birth and Death Registration Act 1969.

To,

Respondent - The Tahasildar Bhalki.

Whereas the petitioners have filed the petition for issue of death certificate of deceased Late Prabhu S/o Narsappa Kambari R/O Manna ekhelli, Tq: Chitaguppa Dist: Bidar, who died on 17-01-2023 at village Dongargi Tq: Bhalki.

Therefore, the interested persons are hereby directed to appear this Court on 05-11-2025 at 11-00 A.M. in person or through your counsel. If you are failed to appear before the court on the above said date and time. The case will be heard and determined as per Law.

Given under my hand and seal of the court on this the day of October - 2025.

**//By Order of Court**
**Sheristedar/Chief Ministerial Officer,**
**Civil Judge and JMFC at Bhalki**

# ಋತು ಚಕ್ರ ರಜೆ ಘೋಷಣೆ ಸ್ವಾಗತ :ಖಾಸಗಿ ವಲಯದಲ್ಲಿ ಸಮರ್ಪಕ ಜಾರಿಗೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ:ಅ.13:ರಾಜ್ಯಸರ್ಕಾರವು ಮಹಿಳೆಯರ ಗೌರವ ಘನತೆ ಆರೋಗ್ಯದ ಹಿತದೃಷ್ಟಿಯಿಂದ ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಮಹಿಳೆಯರಿಗೆ ಋತು ಚಕ್ರದ ಸಮಯದಲ್ಲಿ ಒಂದು ದಿನ ರಜೆ ಘೋಷಣೆ ಮಾಡಿರುವ ಸರ್ಕಾರದ ಕ್ರಮವನ್ನು ನಮ್ಮ ಕರ್ನಾಟಕ ಸೇನೆ ಮಹಿಳಾ ಘಟಕದ ಯಾದಗಿರಿ ಜಿಲ್ಲಾಧ್ಯಕ್ಷೆ ಶ್ರೀದೇವಿ ಕಟ್ಟಿಮನಿ ಸ್ವಾಗತಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಮಹಿಳೆಯರಿಗೆ ಋತುಚಕ್ರದ ಸಮಯ ಮೂರರಿಂದ ಐದು ದಿನಗಳ ವರೆಗೆ ಇರುತ್ತೆ ಆದ್ದರಿಂದ ಕನಿಷ್ಠ ಮೂರು ದಿನಗಳವರೆಗೆ ವೇತನ ಸಹಿತ ರಜೆ ಘೋಷಣೆಯಾದರೆ ತುಂಬಾ ಅನುಕೂಲವಾಗುತ್ತದೆ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.ಈ ಕುರಿತು ಸರಕಾರ ಮತ್ತೊಮ್ಮೆ ಪರಿಶೀಲನೆ ಮಾಡಿ ವೇತನ ಸಹಿತ ಮೂರು ದಿನ ರಜೆ ಘೋಷಣೆಗೆ ಕ್ರಮ ಕೈಗೊಳ್ಳುವುದರ ಜೊತೆಗೆ ಖಾಸಗಿ ಕಂಪನಿಗಳು ಖಾಸಗಿ ಶಾಲಾ ಕಾಲೇಜುಗಳಲ್ಲಿ ಋತುಚಕ್ರದ ರಜೆ ಘೋಷಣೆ ಸಮರ್ಪಕವಾಗಿ ಜಾರಿ

ಯಾಗುವಲ್ಲಿ ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಖಾಸಗಿ ಶಾಲಾ ಕಾಲೇಜು, ಖಾಸಗಿ ಆಸ್ಪತ್ರೆಗಳು ಕಂಪನಿಗಳಿಗೆ ಸೂಕ್ತ ಆದೇಶ ಹೊರಡಿಸುವಂತೆ ನಮ್ಮ ಕರ್ನಾಟಕ ಸೇನೆ

ಮಹಿಳಾ ಘಟಕದ ಯಾದಗಿರಿ ಜಿಲ್ಲಾಧ್ಯಕ್ಷೆ ಶ್ರೀದೇವಿ ಕಟ್ಟಿಮನಿ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ

# ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಯಾಗಿ 50 ವರ್ಷ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 13 : ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಯಾಗಿ 50 ವರ್ಷ ಪೂರೈಸಲಾಗಿದೆ ಎಂದು ಜಿಲ್ಲಾ ಪರಿಸರ ಅಧಿಕಾರಿಗಳಾದ ಆದಮ್ ಪಟೇಲ್ ಅವರು ಹೇಳಿದರು.

ನಗರದಲ್ಲಿ ಜಿಲ್ಲಾ ಆರೋಗ್ಯ ಇಲಾಖೆಯ ಸಭಾಂಗಣದಲ್ಲಿ 2025ರ ಅಕ್ಟೋಬರ್ 9 ರಂದು ಇತ್ತೀಚಿನ ನಡೆದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಯಾಗಿ 50 ವರ್ಷ ಪೂರೈಸಿದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾದಗಿರಿ ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಯ ಶುಶ್ರೂಕರು ಮತ್ತು ಡಿ ಗ್ರೂಪ್ ಸಿಬ್ಬಂದಿಗಳಿಗೆ ಜೀವ ವೈದ್ಯಕೀಯ ತ್ಯಾಜ್ಯ ನಿರ್ವಹಣೆ ನಿಯಮ, 2016ರ ಕುರಿತು ಅರಿವು ನೀಡಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರಾದಾರ ಅವರು ಮಾತನಾಡಿ, ಜೀವ ವೈದ್ಯಕೀಯ ತ್ಯಾಜ್ಯ ನಿರ್ವಹಣೆ ನಿಯಮ ಮತ್ತು ವೈಜ್ಞಾನಿಕ ವಿಲೇವಾರಿ ಕುರಿತು ವಿಸ್ತೃತ ಕುರಿತು ವಿವರಿಸಿದರು. ಸಿಬ್ಬಂದಿಗಳಿಗೆ ತಮ್ಮ ಆರೋಗ್ಯ, ಆಸ್ಪತ್ರೆಯಲ್ಲಿ ಉತ್ಪತ್ತಿಯಾಗುವ ಜೀವ ವೈದ್ಯಕೀಯ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಗ್ರಹಿಸಿ, ಸಾಮೂಹಿಕ ಜೀವ ವೈದ್ಯಕೀಯ ತ್ಯಾಜ್ಯ ವಿಲೇವಾರಿ ಘಟಕಕ್ಕೆ ನೀಡುವಂತೆ ಹಾಗೂ ಸಂಬಂಧಿಸಿದ ದಾಖಲಾತಿಗಳನ್ನು ನಿರ್ವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಂಡಳಿಯ ಅಧಿಕಾರಿಗಳಾದ ಹನಮಪ್ಪ, ತಾಲ್ಲೂಕು ಆರೋಗ್ಯಧಿಕಾರಿ ಶಕುಂತಲಾ ಆರೋಗ್ಯ ಇಲಾಖೆಯ ಅಧಿಕಾರಿ ಡಾ.ಹಣಮಂತರೆಡ್ಡಿ ಉಪಸ್ಥಿತರಿದ್ದರು.



ಭಾಲ್ಕಿ: ಪಟ್ಟಣದ ಕುಂಬಾರ ಗುಂಡಯ್ಯಾ ಕಲ್ಯಾಣ ಮಂಟಪದಲ್ಲಿ ನಡೆದ ಪ್ರೌಢಶಾಲಾ ವಿಭಾಗದ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಉತ್ತಮ ಸ್ಥಾನ ಪಡೆದ ಮಹಾತ್ಮಾಗಾಂಧಿ ಪ್ರೌಢಶಾಲೆ ಕಲವಾಡಿಯ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣಾಧಿಕಾರಿ ರೋಹಿದಾಸ ರಾಠೋಡ ಶೀಲ್ಡ್ ವಿತರಿಸಿ ಗೌರವಿಸಿದರು. ಮುಖ್ಯಶಿಕ್ಷಕ ಕಿರಣಕುಮಾರ, ದೈಹಿಕ ಶಿಕ್ಷಕ ಆನಂದ ಖಂಡಗೊಂಡ, ಸೋಮನಾಥ ಹೊಸಾಳೆ ಇದ್ದರು.

# ಹೊನ್ನಿಕೇರಿ ಗ್ರಾಮದ ಸತೀಶ ಹೊಲದಲ್ಲಿ ಜರುಗಿದ ಟಿಫಿನ್ ಸಭೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 12 : ರಾಷ್ಟ್ರೀಯ ಮತ್ತು ರಾಜ್ಯ ಕಿಸಾನ್ ಮೋರ್ಚಾ ಅಧ್ಯಕ್ಷರ ಸೂಚನೆ ಮೇರೆಗೆ ಇಂದು ಟಿಫಿನ್ ಸಭೆಯು ಭಾಲ್ಕಿ ತಾಲೂಕಿನ ಹೊನೀಕೆರಿ ಗ್ರಾಮದ ಸತೀಶ ಎನ್ನುವ ರೈತರ ಹೊಲದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಇಲ್ಲಿಯವರೆಗೆ ರಾಜ್ಯ ಅಧ್ಯಕ್ಷರು ಕೊಟ್ಟಂತಹ 23 ಕಾರ್ಯ

ಕ್ರಮಗಳು ಅನುಷ್ಠಾನದ ಬಗ್ಗೆ

ಮತ್ತು ಮುಂದಿನ ರೈತ ಮೋರ್ಚ ಕಾರ್ಯ ಯೋಜನೆ ಬಗ್ಗೆ ಕುಲಂ ಕುಶವಾಗಿ ಚರ್ಚಿಸಿ ಮತ್ತು ಈ ಚರ್ಚೆಯಲ್ಲಿ ಜಿಲ್ಲಾಧ್ಯಕ್ಷರಾದ ಶ್ರೀ ಸೋಮನಾಥ್ ಪಾಟೀಲ್ ಅವರು ಭಾಗಿಯಾಗಿ ಮಾರ್ಗದರ್ಶನ ನೀಡಿದರು. ಮತ್ತು ಜಿಲ್ಲಾ ರೈತ ಮೋರ್ಚಾ ಬೀದರ್ ಅಧ್ಯಕ್ಷರಾದ ಶ್ರೀ ಶಿವರಾಜ ಅಲ್ಮಾಜೆ ಪ್ರಸ್ತಾವಿಕ ಮಾತಾಡಿ ಟಿಫಿನ್ ಸಭೆಯ ಮಹತ್ವ ಮತ್ತು ಅನು ಪಾಲನದ ಬಗ್ಗೆ ಮಾತನಾಡಿದರು.

ಸರ್ಕಾರದಿಂದ ಬೆಳೆ ಪರಿಹಾರ ಮತ್ತು ಬೆಳೆ ವಿಮೆಯನ್ನು ಶೀಘ್ರವಾಗಿ ರೈತರ ಖಾತೆಗೆ ಜಮಾ ಮಾಡುವಂತೆ ಸರ್ಕಾರಕ್ಕೆ ಒತ್ತಾಯಿಸಲಾಯಿತು. ಈ ವೇಳೆ ರೈತ ಮೋರ್ಚಾ ಪದಾಧಿಕಾರಿಗಳು ಮತ್ತು ರೈತ ಮೋರ್ಚ ವಿವಿಧ ಮಂಡಲ

ಅಧ್ಯಕ್ಷರು ಭಾಗವಹಿಸಿದರು. ರಾಮರಾವ್ ಕೆರು, ದತ್ತಾತ್ರಿಪಾಟೀಲ್, ಜಗನ್ನಾಥ್ ಜಾಗೀರ್ದಾರ್

ಬಸವರಾಜ್ ಹುಮ್ನಾಬಾದ್, ಚನ್ನಬಸವ ಸೋಪಣ್ಣ, ಬಾಬುರಾವ್ ಶೆಟ್ಟಪ್ಪ, ಅನಿಲ್ ಕರಂಜೆ, ಶಿವಕುಮಾರ್, ಜೈ ಭೀಮ್ ಬಂದು, ಜಗನ್ನಾಥ್ ಬಿರಾದಾರ್ ಸೇರಿದಂತೆ ರೈತ ಮೋರ್ಚಾ ಪದಾಧಿಕಾರಿಗಳು ಜೊತೆಯಲ್ಲಿ ತಂದ ಬುತ್ತಿ ಬಿಚ್ಚಿ ಸಂತೋಷದಿಂದ ಎಲ್ಲರೂ ಸೇರಿ ಊಟ ಮಾಡಲಾಯಿತು.

ಕೊನೆಯಲ್ಲಿ ದತ್ತಾತ್ರಿ ಪಾಟೀಲ್ ಭಾಲ್ಕಿ ಮಂಡಲದ ರೈತ ಮೋರ್ಚಾ ಅಧ್ಯಕ್ಷರು ಎಲ್ಲರನ್ನು ಬಂಧಿಸಿದರು. ಆನಂತರ ಶ್ರೀ ಹೊನ್ನೇಕೆರೆ

ಸಿದ್ದೇಶ್ವರ ದೇವರ ದರ್ಶನ ಪಡೆಯಲಾಯಿತು ಎಂದು

ಶಿವರಾಜ್ ಅಲ್ಮಾಜೆ ಜಿಲ್ಲಾಧ್ಯಕ್ಷರು ರೈತ ಮೋರ್ಚಾ ಬಿಜೆಪಿ ತಿಳಿಸಿದ್ದಾರೆ.

# ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 13 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯಾದಗಿರಿ ಕಾರ್ಮಿಕ ಇಲಾಖೆ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಕಾರ್ಯಕ್ರಮವನ್ನು ಯಾದಗಿರಿ ಶುಭಂ ಪೆಟ್ರೋಲ್ ಪಂಪ್ ಹಿಂದುಗಡೆ ಪಾಟೀಲ ಕನ್ವೆಷನ್ ಹಾಲ್‌ದಲ್ಲಿ 2025ರ ಅಕ್ಟೋಬರ್ 15ರ ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ಸರ್ಕಾರ ಸನ್ಮಾನ್ಯ ಮುಖ್ಯ ಮಂತ್ರಿಗಳು ಶ್ರೀ ಸಿದ್ದರಾಮಯ್ಯ, ಕರ್ನಾಟಕ ಸರ್ಕಾರ ಸನ್ಮಾನ್ಯ ಉಪ ಮುಖ್ಯ ಮಂತ್ರಿಗಳು ಶ್ರೀ ಡಿ.ಕೆ.ಶಿವಕುಮಾರ, ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಸಂತೋಷ ಎಸ್.ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಗೌರವ ಉಪಸ್ಥಿತಿಯಲ್ಲಿ ನೆರವೇರಲಿದೆ.

ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ, ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ ಅತಿಥಿಗಳಾಗಿ ಪಾಲ್ಗೊಳ್ಳುವರು.

**ಕಾರ್ಯಕ್ರಮದ ವಿವರ**

**ನಾಡಗೀತೆ, ಸ್ವಾಗತ, ಪ್ರಾಸ್ತಾವಿಕ ನುಡಿ, ಕಾರ್ಯಕ್ರಮದ ಉದ್ಘಾಟನೆ, ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ, ಮುಖ್ಯ ಅತಿಥಿಗಳ ಭಾಷಣ, ಅಧ್ಯಕ್ಷರ ಭಾಷಣ, ವಂದನಾರ್ಪಣೆ ನಡೆಯಲಿದೆ.**

ಬೆಂಗಳೂರು ಕಾರ್ಮಿಕ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮೊಹಮ್ಮದ್ ಮೊಹಸಿನ್, ಬೆಂಗಳೂರು ಸಾರಿಗೆ ಇಲಾಖೆ ಸರ್ಕಾರದ ಕಾರ್ಯದರ್ಶಿಗಳು ಡಾ.ಎನ್.ವಿ ಪ್ರಸಾದ, ಬೆಂಗಳೂರು ಕ.ಕ.&ಇ.ನಿ.ಕಾ.ಕ ಮಂಡಳಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಶ್ರೀಮತಿ ಭಾರತಿ, ಬೆಂಗಳೂರು ಸಾರಿಗೆ ಮತ್ತು ರಸ್ತೆ ಸುರಕ್ಷತೆ ಸಾರಿಗೆ ಇಲಾಖೆ ಆಯುಕ್ತರು ಯೋಗೀಶ್ ಎ.ಎಂ, ಬೆಂಗಳೂರು ಕಾರ್ಮಿಕ ಇಲಾಖೆ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳು ಆಯುಕ್ತರು ಹಾಗೂ ಕಾರ್ಮಿಕ ಆಯುಕ್ತರು ಡಾ.ಎಚ್.ಎನ್.ಗೋಪಾಲಕೃಷ್ಣ, ಯಾದಗಿರಿ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ, ಬೆಂಗಳೂರು ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳು ಡಾ.ಎಸ್.ಬಿ ರವಿಕುಮಾರ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಸರ್ವರಿಗೂ ಆದರದ ಸುಸ್ವಾಗತವನ್ನು ಯಾದಗಿರಿ ಜಿಲ್ಲೆಯ ಎಲ್ಲಾ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಗೌರವಾನ್ವಿತ ಸದಸ್ಯರುಗಳು, ಕಾರ್ಮಿಕ ಸಂಘ, ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಮಸ್ತ ನಾಗರಿಕರು, ಕಲಬುರಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತರು ಡಾ.ವೆಂಕಟೇಶ ಎ.ಶಿಂದಿಹಟ್ಟಿ ಕೆ.ಎಲ್.ಎಸ್, ಕಲಬುರಗಿ ವಿಭಾಗ ಸಹಾಯಕ ಕಾರ್ಮಿಕ ಆಯುಕ್ತರು ಮಹಮ್ಮದ ಬಶೀರ ಅನ್ಸಾರಿ ಕೆ.ಎಲ್.ಎಸ್, ಯಾದಗಿರಿ ಉಪವಿಭಾಗ ಕಾರ್ಮಿಕ ಅಧಿಕಾರಿ ಶ್ರೀಹರಿ ಆರ್. ದೇಶಪಾಂಡೆ, ಯಾದಗಿರಿ ವೃತ್ತ ಕಾರ್ಮಿಕ ನಿರೀಕ್ಷಕರು ಶ್ರೀಮತಿ ಸಂಗೀತಾ ಹೊನ್ನೂರ, ಶಹಾಪೂರ ವೃತ್ತ ಕಾರ್ಮಿಕ ನಿರೀಕ್ಷಕರು ಶ್ರೀಮತಿ ಸಾಬೇರಾ ಬೇಗಂ, ಸುರಪುರ ವೃತ್ತ ಕಾರ್ಮಿಕ ನಿರೀಕ್ಷಕರು ಶಿವಪ್ಪ ಜಮಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದರ ಜಿಲ್ಲಾ ಉಸ್ತುವಾರಿ ಸಚಿವ: ಖಂಡ್ರೆ ಬೀದರಗೆ

ಮಲ್ಲಮ್ಮ ನುಡಿ ವಾರ್ತೆ



ಬೀದರ, ಅ.13 : ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಅಕ್ಟೋಬರ್.14 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅಕ್ಟೋಬರ್.14 ರಂದು ಬೆಳಿಗ್ಗೆ 10.30 ಗಂಟೆಗೆ ಬೀದರ ಜಿಲ್ಲಾ ನೆಹರು ಕ್ರೀಡಾಣದಲ್ಲಿ ಕಲಬುರಗಿ ವಿಭಾಗದ ಮಟ್ಟದ 14/17 ವರ್ಷ ವಯೋಮಿತಿಯೊಳಗಿನ ಬಾಲಕ ಮತ್ತು ಬಾಲಕಿಯರ ವಾಲಿಬಾಲ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 2.30 ರವರೆಗೆ ಬೀದರ್ ಪಟ್ಟಣದ ಸರ್ಕಾರಿ ಮಹಿಳಾ ಪದವಿ ಪೂರ್ವ ಕಟ್ಟಡದ ಕಾಮಗಾರಿ ಸ್ಥಳ ಪರಿಶೀಲನೆ ಹಾಗೂ ಅತಿವಾಳ ಕ್ರಾಸ್ ರೇಷ್ಮೆ ಇಲಾಖೆ ಆವರಣ ಹೊಸ ಜಿಲ್ಲಾ ಕ್ರೀಡಾಂಗಣ ಕಾಮಗಾರಿ ಸ್ಥಳ ಪರಿಶೀಲನೆ ನಡೆಸಲಿದ್ದಾರೆ.

ಮಧ್ಯಾಹ್ನ 3 ಗಂಟೆಗೆ ಬೀದರ ಘಾಳೆ ಕಲ್ಯಾಣ ಮಂಟಪದಲ್ಲಿ ಬೀದರ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ "ಸ್ಮಾಟ್ ಕಾರ್ಡ್" ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಅಕ್ಟೋಬರ್.15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಬೀದರ ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ತೆ-ಗೆದುಕೆಂಡ ಕ್ರಮಗಳ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ 2025-26ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕ್ರೀಡಾ ಯೋಜನೆ ರೂಪಿಸಲು ಬೀದರ್ ಜಿಲ್ಲಾ ಸಲಹಾ ಸಮಿತಿ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 1.30ಕ್ಕೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಬೀದರ್ ಜಿಲ್ಲಾ ಮಟ್ಟದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ನಂತರ ಮಧ್ಯಾಹ್ನ 3.30 ರಇಂದ 7 ಗಂಟೆಗೆ ಬೀದರ್ ಜಿಲ್ಲೆಯ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 7 ಗಂಟೆಗೆ ಬೀದರನಿಂದ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು: ಮಡಿವಾಳಪ್ಪ ಪಾಟೀಲ್

ಶಾಲೆಯ ವಿದ್ಯಾರ್ಥಿಗಳು ಗುರುಗಳ ... ಇನ್ನೂ ಶಾಲೆಯ ಕೀರ್ತಿ ಹೆಚಿಸುವ



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ:ಅ.13: ಶಿಕ್ಷಕರು ದೇಶೆ ಕಟ್ಟುವಲ್ಲಿ ಪ್ರಮುಖ ಪಾತ್ರ ಇದೆ ವಿದ್ಯಾರ್ಥಿಗಳಿಗೆ ಶಿಕ್ಷಣ ಜೊತೆಗೆ ಜೊತೆಗೆ ಮಾನವೀಯ ಮೌಲ್ಯಗಳು ಮತ್ತು ಉತ್ತಮ ಸಂಸ್ಕಾರ ನೀಡುವುದು ಪ್ರತಿಯೊಬ್ಬ ಶಿಕ್ಷಕರ ಪಾತ್ರವಾಗಿದೆ ಎಂದು ಶಿಕ್ಷಕ ಹಾಗೂ ಸಾಹಿತಿಯಾದ ಮಡಿವಾಳಪ್ಪ ಪಾಟೀಲ್ ಹೆಗ್ಗಣದೊಡ್ಡಿ ಹೇಳಿದರು

ಕೆಂಭಾವಿ ಪಟ್ಟಣದಲ್ಲಿ ನಡೆಯುತ್ತಿರುವ ಸರ್ಕಾರಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಏರ್ಪಡಿಸಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ , ಅವರು ಸುಮಾರು ಹದಿನೈದು ವರ್ಷಗಳ ನಂತರ ಶಾಲೆಯ ಹಳೆಯ ವಿದ್ಯಾರ್ಥಿಗಳು ಸೇರಿ-ಕೊಂಡು ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದ ಆಯೋಜಿಸಿದ್ದು ತುಂಬಾ ಶ್ಲಾಘನೀಯ ಕಾರ್ಯ ಬೆಟ್ಟದ ಮೇಲಿರುವ ನೆಲ್ಲಿಕಾಯಿ ಸಮುದ್ರದಲ್ಲಿರುವ ಉಪ್ಪು ಎತ್ತಣ ದಿತ್ತ ಸಂಬಂಧವಯ್ಯ ಎನ್ನುವಂತೆ ವಸತಿ ಶಾಲೆಯಿಂದ ಹದಿನೈದು ವರ್ಷಗಳ ನಂತರ ದೂರ ದೂರ ಇದ್ದಾ ಎಲ್ಲಾ ಗುರು ಶಿಷ್ಯರು ಒಟ್ಟಿಗೆ ಸಮಾಗಮ ವಾಗಿದ್ದು ನನಗೆ ತುಂಬಾ ಖುಷಿ ಆಗಿದೆ ಇವತ್ತಿನ ದಿನಗಳಲ್ಲಿ ಗುರು ಶಿಷ್ಯರ ಸಂಭಂದ ಅಷ್ಟೊಂದು ಚೆನ್ನಾಗಿಲ್ಲ ಅಲ್ಲಮಪ್ರಭುಗಳವರು 12ನೇ ಶತಮಾನದಲ್ಲಿ ಹೇಳಿದ ವಚನ ಮಾತು ಇವತ್ತು ಅದು ನಿಜವೆನಿಸುತ್ತದೆ ಗುರುವೇನೂ ಮಹಾ ಅನ್ನುವ ಕಾಲದಲ್ಲಿ ವಸತಿ ಮೇಲೆ ಇಟ್ಟಿರುವ ಭಕ್ತಿ ನಮ್ಮೆಲ್ಲ ಗುರುಗಳಿಗೆ ಸಂತೋಷವೆನಿಸುತ್ತದೆ ಗುರುವಿನ ಗುಲಾಮನಾಗುವ ತನಕ ದೊರೆಯುವುದನ್ನ ಮುಕ್ತಿ ಎನ್ನುವ ವಾಣಿಯಂತೆ ಗುರುಗಳ ಪಾಠ ಪ್ರವಚನಗಳನ್ನ ಕೇಳಿಕೊಂಡು ಇವತ್ತು ಅದೆಷ್ಟು ವಿದ್ಯಾರ್ಥಿಗಳು ಡಾಕ್ಟರ್ಸ್ ಇಂಜಿನಿಯರ್ಸ್ ಪೊಲೀಸ್ ಪಿಎ??? ಶಿಕ್ಷಕರು ದೊಡ್ಡ ದೊಡ್ಡ ಉದ್ಯಮಿದರರಾಗಿದ್ದು ನೋಡಿದರೆ ಗುರುವಿಗೆ ತುಂಬಾ ಸಂತೋಷವಾಗುತ್ತದೆ ಇನ್ನು ಕೆಲವು ವಿದ್ಯಾರ್ಥಿಗಳು ಗುರುಗಳ ಮಾತನ್ನು ಕೇಳದೆ ಅವರ ಪರಿಸ್ಥಿತಿ ನೋಡಿದರೆ ನಮ್ಮ ಮನಸ್ಸಿಗೆ ತುಂಬಾ ನೋವಾಗುತ್ತದೆ ಅದಕ್ಕೆ ಕಲಿಯುವ ವಯಸ್ಸಿನಲ್ಲಿ 25 ವರ್ಷಗಳ ಕಾಲ ಯಾವ ವಿದ್ಯಾರ್ಥಿ ತದೆಕಚಿತ್ತದಿಂದ ಪಾಠ ಪ್ರವಚನ ಕೇಳುತ್ತಾನೋ ಅಂತ ವಿದ್ಯಾರ್ಥಿ 75 ವರ್ಷಗಳ ಕಾಲ ಸುಖಕರ ಜೀವನ ನಡೆಸಬಲ್ಲನು ದೇವನೂರು ಮಹದೇವರ ಹೇಳಿದಂತೆ ಎದೆಗೆ ಬಿದ್ದ ಅಕ್ಷರ ಭೂಮಿಗೆ ಬಿದ್ದ ಬೀಜ ಇವತ್ತಲ್ಲಾ ನಾಳೆ ಫಲ ಕೊಡುತ್ತವೆ ಅದಕ್ಕೆ ವಿದ್ಯಾರ್ಥಿಗಳು ಜ್ಞಾನ ಸಂಪಾದನೆ ಮೊದಲ ಗುರಿಯಾಗಬೇಕು ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡುವ ಕೆಲಸವಾಗಬೇಕು ಎಂದು ಹೇಳಿದರು . ಮುಂದೆ ಭೀಮರಾಯ ಪಾಟೀಲ್ ಅವರು ಮಾತನಾಡಿ ನಾನು ಸುಮಾರು ವರ್ಷಗಳ ಕಾಲ ಈ ಶಾಲೆಯಲ್ಲಿ ಪ್ರಾಂಶುಪಾಲನಾಗಿ ಸೇವೆ ಮಾಡಿ ತೃಪ್ತಿ ತಂದಿದೆ ಮತ್ತು ನನ್ನ ಹೊಳೆಯ ವಿದ್ಯಾರ್ಥಿಗಳು ಸಾಧನೆ ನೋಡಿ ನಾನಂತೂ ತುಂಬಾ ಖುಷಿ ಪಟ್ಟಿದ್ದೇನೆ ಕೆಲಸವಾಗಲಿ ನಾನು ಕೂಡ ಈ ವಸತಿ ಶಾಲೆಗೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದೇನೆ ಎಂದು ಹೇಳಿದರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಬಸಮ್ಮ ಪಾಟೀಲ್ ಅವರ ಮಾತನಾಡಿ ಇವತ್ತಿನ ದಿನಗಳಲ್ಲಿ ಗುರು ಶಿಷ್ಯರ ಕೂಡುವುದು ಬಹಳ ಅಪರೂಪ ಆದರೆ ಈ ಶಾಲೆಯ ನನ್ನ ಹಳೆಯ ವಿದ್ಯಾರ್ಥಿಗಳು ಸೇರಿಕೊಂಡು ತನು ಮನ ಧನ ಸಮಯ ಕೊಟ್ಟು ಇವತ್ತಿನ ಕಾರ್ಯಕ್ರಮ ಯಶಸ್ವಿ ಆಗಬೇಕಾದರೆ ನಿಮ್ಮೆಲ್ಲರ ಪ್ರಯತ್ನ ಸಾಕಷ್ಟು ಇದೆ ಎಂದು ಹೇಳಿದರು.

ಶ್ವೇತಾ ರಾಖಾ ಹಾಗೂ ವಗ್ಗರ ಸರ್ ಮಾತನಾಡಿದರು . ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಸತಿ ಶಾಲೆಯ ಪ್ರಾಂಶುಪಾಲರಾದ ಅಪ್ಪುರಾಠೋಡ ವಹಿಸಿದ್ದರು.

ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಯಲ್ಲಪ್ಪ ಸರ್, ಶಾಂತಲಿಂಗ ಪಾಟೀಲ್, ಮೈಹಿಬೂಬ ಪಟೇಲ್ ಪ್ರಕಾಶ್, ವಗ್ಗರ ಸರ್ ಭಾಗ್ಯಮ್ಮ ಪಾಟೀಲ್, ಶರಣಯ್ಯ ಸಗರ, ಶಿವಶರಣಪ್ಪ ಬಾಣಂತಿಹಾಳ, ದೇವೇಂದ್ರಪ್ಪ ಕರಡಕಲ್, ದೈಹಿಕ ಶಿಕ್ಷಕರಾದ ಮಡಿವಾಳಪ್ಪ ಹೆಗ್ಗನದೊಡ್ಡಿ,ಗ ಎತ್ತನಗೌಡ, ಪವನ್ ಕುಲಕರ್ಣಿ, ಗುರುಪಾದಪ್ಪ ಗೋಡ್ರಿಹಾಳ, ಬಸವಲಿಂಗಯ್ಯ ಹಿರೇಮಠ, ಶಿವುಕುಮಾರ ಬೈಬಾಳ ಆಸೀಫ್ ತಿಪ್ಪಣ್ಣ ಸಂಗೀತಾ ತೋಟೇಶ್ವರಿ ಸುವರ್ಣ ಸರಿತಾ, ಸವಿತಾ ತಿಪ್ಪಣ್ಣ, ಶ್ರೀಕಾಂತ್, ಇತರರು

ಉಪಸ್ಥಿತರಿದ್ದರು ಸಂಗೀತಾ ಸುರಪುರ ನಿರೂಪಿಸಿದರು ಬಸವಲಿಂಗಯ್ಯ ಹಿರೇಮಠ ಸ್ವಾಗತಿಸಿದರು ಶಿವಾನಂದ ವಂದಿಸಿದರು

# ಡಿ.7 ರಂದು ಉಸ್ಮಾನಾಬಾದನಲ್ಲಿ ಲಿಂಗಾಯತ ಮಹರ್ಯಾಲಿ: ಶ್ರೀಗಳು



**ಸ್ವಾಭಿಮಾನಿದಲ್ಲಿ ಆರು ನಿರ್ಣಯಗಳನ್ನು ಕೈಗೊಳ್ಳಲಾಯಿತು.**

1. ಡಿ. 7ರಂದು ಮಹಾರಾಷ್ಟ್ರದ ಉಸ್ಮಾನಾಬಾದನಲ್ಲಿ ಲಿಂಗಾಯತ ಮಹರ್ಯಾಲಿ ಆಯೋಜನೆ.
2.. 2026ರ ಜನವರಿ ತಿಂಗಳಲ್ಲಿ ಲಿಂಗಾಯತ ಧರ್ಮಕ್ಕೆ ಮಾನ್ಯತೆಗಾಗಿ ದಿಲ್ಲಿ ಚಲೋ ಆಯೋಜನೆ.
3. ನ್ಯಾ. ಗವಾಯಿ ಮೇಲೆ ಶೂ ಎಸೆದ ವಕೀಲ ಕಿಶೋರ ಮೇಲೆ ಕಾನೂನು ಕ್ರಮ ಕೈಗೊಳ್ಳದಿದ್ದರೆ ಹೋರಾಟ.
4. ಕನ್ಹೇರಿ ಮಠದ ಸ್ವಾಮಿಗಳು ಬಸವ ತತ್ವದ ಸ್ವಾಮಿಗಳಿಗೆ ಅವಹೇಳನ ಮಾಡಿದ್ದು ಖಂಡಿಸುತ್ತೇವೆ.
5 .ನವೆಂಬರ್ ನಿಂದ ಕರ್ನಾಟಕ ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ, ತಮಿಳುನಾಡು ಸೇರಿದಂತೆ
6. ಆರು ರಾಜ್ಯಗಳಲ್ಲಿ ಲಿಂಗಾಯತ ಧರ್ಮ ಜಾಗೃತಿ ಅಭಿಯಾನ ಆರಂಭಿಸುವುದು ಮತ್ತು ನವೆಂಬರ್

ಮಲ್ಲಮ್ಮ ನುಡಿ ವಾರ್ತೆ

ಬೀದರ. ಅ. 12 : ಡಿಸೆಂಬರ್ 7 ರಂದು ಮಹಾರಾಷ್ಟ್ರದ ಉಸ್ಮಾನಾಬಾದನಲ್ಲಿ ಅಖಿಲ ಭಾರತ ಲಿಂಗಾಯತ ಸಮನ್ವಯ ಸಮಿತಿ ವತಿಯಿಂದ ಲಿಂಗಾಯತ ಮಹರ್ಯಾಲಿ ಆಯೋಜಿಸಲಾಗಿದೆ ಎಂದು ಬೆಂಗಳೂರಿನ ಶ್ರೀ ಚನ್ನಬಸವೇಶ್ವರ ಜ್ಞಾನಪೀಠದ ಪೀಠಾಧ್ಯಕ್ಷರಾದ ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ನುಡಿದರು.

ಪಟ್ಟಣದ ಸಸ್ತಾಪುರ ಬಂಗ್ಲಾ ಸಮೀಪದ ಎಂ.ಎಮ್.ಬೇಗ್ ಸಭಾಮಂಟಪದಲ್ಲಿ ರಾಷ್ಟ್ರೀಯ ಬಸವ ದಳ, ಲಿಂಗಾಯತ ಧರ್ಮ ಮಹಾಸಭಾ ಹಾಗೂ ಕ್ರಾಂತಿಗಂಗೋತ್ರಿ ಅಕ್ಕನಾಗಲಾಂಬಿಕಾ ಮಹಿಳಾ ಗಣ ಇವರುಗಳ ಸಂಯುಕ್ತಾಶ್ರಯದಲ್ಲಿ ನಡೆಯುತ್ತಿರುವ 4ನೇ ಸ್ವಾಭಿಮಾನಿ ಕಲ್ಯಾಣ ಪರ್ವದ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ಪೂಜ್ಯ ಶ್ರೀ ಸದ್ಗುರು ಮಾತೆ ಸತ್ಯಾದೇವಿ ಬಸವ ಮಂಟಪ ಬೀದರ ಅವರು ಮಾತನಾಡಿ ಗುರು ಭಕ್ತಿಯನ್ನು ಮೈಗೂಡಿಸಿಕೊಂಡು ಶರಣರಿಗೆ ಶರಣಾರ್ಥಿ ಸಲ್ಲಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಸಂಘಟನೆ ಒಡೆಯದಂತೆ ಕಾರ್ಯಕರ್ತರು ನೋಡಿಕೊಳ್ಳಬೇಕು. ರಾಷ್ಟ್ರೀಯ ಬಸವ ದಳ ಇಂದಿಗೂ ಗಟ್ಟಿಯಾಗಿರಲು ಧರ್ಮಶೃದ್ಧೆ, ತತ್ವನಿಷ್ಠೆ ಹಾಗೂ ಲಿಂಗಾನಂದ ಸ್ವಾಮೀಜಿ ಮತ್ತು ಮಾತೆ ಮಹಾದೇವಿ ತಾಯಿ ಪರಿಶ್ರಮ ಕಾರಣವಾಗಿದೆ. ಸಂಘಟನೆಗೆ ಇನ್ನೂ ಹೆಚ್ಚಿನ ಒತ್ತುಕೊಡಿ ಎಂದರು.

ಚಿಕ್ಕಮುನವಳ್ಳಿಯ ಪೂಜ್ಯ ಶ್ರೀ ಶಿವಪುತ್ರ ಸ್ವಾಮೀಜಿ ಮಾತನಾಡಿ ದೇವನೊಬ್ಬನೇ ತಂದೆ ಮನುರೆಲ್ಲರೂ ಒಂದೇ ಎನ್ನುವ ಶರಣರ ಸಂದೇಶ ಎಲ್ಲಾ ಧರ್ಮಿಯರಿಗೂ ಅನ್ವಯಿಸುತ್ತದೆ. ಏಕದೇವೋಪಾಸಕರಾಗಿ ಬದುಕಬೇಕೆಂದು ಕರೆ ನೀಡಿದರು. ಬಸವ ಕಲ್ಯಾಣದ ಮಣ್ಣು ಹಣೆಗೆ ಹಚ್ಚಿಕೊಂಡರೆ ಬದುಕು ಸಾರ್ಥಕವಾಗುತ್ತದೆ. ಅವಿಮುಕ್ತ ಕ್ಷೇತ್ರ ಬಸವಕಲ್ಯಾಣವನ್ನು ಅಂತರಾಷ್ಟ್ರೀಯಾ ತಾಣವಾಗಿ ಮಾಡಲು ಎಲ್ಲರೂ ಪ್ರಯತ್ನಿಸಬೇಕೆಂದರು. ಖಾದ್ರಿವೆಲ್ಫೇರ್ ಸೊಸೈಟಿ ಧಾರವಾಡದ ಉಪಾಧ್ಯಕ್ಷರಾದ ಪೂಜ್ಯ ಸೂಫಿ ಸಂತ ಪಿರೆ ತರಿಕತ್ ಅಬ್ದುಲ್ ರಜಾಕ್ ಮಾತನಾಡಿ ಚನ್ನಬಸವಾನಂದ ಸ್ವಾಮೀಜಿ ಕಾರ್ಯ ಶ್ಲಾಘನೀಯವಾಗಿದೆ. ಅವರ ಹೋರಾಟಕ್ಕೆ ಎಲ್ಲರೂ ಸಹಕರಿಸಬೇಕೆಂದು ತಿಳಿಸಿದರು.

ನಿವೃತ್ತ ಕೃಷಿ ವಿವಿ ಡೀನ್ ಡಾ.ಸುರೇಶ ಪಾಟೀಲ ಧ್ವಜಾರೋಹಣ ನೆರವೇರಿಸಿದರು. ಅಕ್ಕನಾಗಲಾಂಬಿಕಾ ಮಹಿಳಾ ಗಣದ ಶರಣೆಯರಿಂದ ಬಸವ ಪೂಜೆ ನೆರವೇರಿತು. ಕು. ವಚನ ಸಾಹಿತ್ಯ ಅವರಿಂದ ವಚನ ನೃತ್ಯ ಜರುಗಿತು. ಶಿವಕುಮಾರ ಪಾರಾ ನಿರೂಪಿಸಿದರು. ಜ್ಯೋತಿ ಕಟಾಳೆ ಸ್ವಾಗತಿಸಿದರು. ದಿಪಾಲಿ ಬಿರಾದಾರ ವಂದಿಸಿದರು. ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಬಸವಪ್ರಭು ಸ್ವಾಮೀಜಿ ಕಲ್ಯಾಣಮಹಾಮನೆ ಗುಣ ತೀರ್ಥವಾಡಿ, ಪೂಜ್ಯ ಮಾತೆ ಶಾಂತಾದೇವಿ, ಭಾಗ್ಯವಂತಿ ಮಾತಾಜಿ ಬೀದರ, ಪ್ರಮುಖರಾದ ಎಸ್.ದಿವಾಕರ್, ಬಸವರಾಜ ಪಾಟೀಲ ಶಿವಪುರ, ಶಶಿಕುಮಾರ ಪಾಟೀಲ, ಬಸವರಾಜ ಪಾಟೀಲ ಚಿಕ್ಕಪೇಟ, ಶಿವರಾಜ ಪಾಟೀಲ ಅತಿವಾಳ, ಶಿವಶರಣಪ್ಪ ಪಾಟೀಲ ಹಾರೂರಗೇರಿ, ಕೆ.ಶರಣಪ್ರಸಾದ ಬೆಳಗಾವಿ, ಜೈರಾಜ ಹತ್ತಿ, ಸೇರಿದಂತೆ ಹಲವರಿದ್ದರು 14ಕ್ಕೆ ದುಬೈನಲ್ಲಿ ಚನ್ನಬಸವೇಶ್ವರ ಜಯಂತಿ ಆಚರಣೆ ಮಾಡುವ ನಿರ್ಣಯಗಳನ್ನು ಕೈಗೊಳ್ಳಲಾಯಿತು. ಈ ನಿರ್ಣಯಗಳನ್ನು ಪೂಜ್ಯ ಶ್ರೀ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಂಡಿಸಿದರು . ಸಭೀಕರು ಕರತಾಡನ ಮೂಲಕ ಒಪ್ಪಿಗೆ ಸೂಚಿಸಿದರು.

ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ 'ದಿಶಾ' ಸಭೆಯಲ್ಲಿ ಸಂಸದ ಈ.ತುಕಾರಾಮ್ ಹೇಳಿಕೆ

# ಜಿಲ್ಲೆಯ ಅಭಿವೃದ್ಧಿಗೆ ಒಗ್ಗೂಡಿ ಕೆಲಸ ಮಾಡೋಣ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಲ್ಲೆಯಲ್ಲಿ ಕೇಂದ್ರ ಮತ್ತು ರಾಜ್ಯದ ಅನುದಾನ ಸೇರಿದಂತೆ ವಿವಿಧ ಬಗೆಯ ಅನುದಾನ ಲಭ್ಯವಿದ್ದು, ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಜನಪ್ರತಿನಿಧಿಗಳು, ಅಧಿಕಾರಿಗಳು ಒಡಗೂಡಿ ಜಿಲ್ಲೆಯನ್ನು ದೇಶದಲ್ಲಿಯೇ ಮಾದರಿ ಜಿಲ್ಲೆಯನ್ನಾಗಿಸಲು ಒಗ್ಗಟ್ಟಿನಿಂದ ಕೆಲಸ ಮಾಡೋಣ ಎಂದು ಬಳ್ಳಾರಿ ಲೋಕಸಭಾ ಸಂಸದ ಈ.ತುಕಾರಾಮ್ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಮಿತಿಯ ದ್ವಿತೀಯ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿಗಳು ಸಂವಿಧಾನ ಆಶಯಗಳ ಜೊತೆಗೆ ಮಾನವೀಯ ದೃಷ್ಟಿಯಿಂದ ಸಹ ಕೆಲಸ ಮಾಡಬೇಕು. ಅಂದಾಗ ಜನರಿಗೆ ಉತ್ತಮ ಆಡಳಿತ ನೀಡಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

*ಕಳ್ಳರ ಏಜೆನ್ಸಿಗಳಿಗೆ ಕಡಿವಾಣ ಹಾಕಿ:*

ಕೆಲವೇ ತಿಂಗಳುಗಳಲ್ಲಿ ಭತ್ತದ ಫಸಲು ರೈತರ ಕೈಸೇರಲಿದೆ. ಖರೀದಿಸುವ ಏಜೆನ್ಸಿಗಳು ಅನಧಿಕೃತವಾಗಿದ್ದು, ರೈತರಿಂದ ಭತ್ತ ಖರೀದಿಸಿ, ಅಲ್ಪ ಮೊತ್ತ ಪಾವತಿಸಿ, ನಂತರ ಪಾವತಿಸಲಾಗುವುದು ಎಂದು ರೈತರನ್ನು ನಂಬಿಸಿ, ಮೊಬೈಲ್ ಆಫ್ ಮಾಡಿಕೊಳ್ಳುತ್ತಿದ್ದಾರೆ. ಇಂತಹ ಪ್ರಕರಣ ಗಂಗಾವತಿ ದರೋಜಿ ಭಾಗಗಳಲ್ಲಿ ಕಂಡುಬರುತ್ತಿದ್ದು, ಇಂತಹ ಪ್ರಕರಣಗಳಿಗೆ ಕಡಿವಾಣ ಹಾಕಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಹೇಳಿದರು.

ಸಂಡೂರು ಶಾಸಕಿ ಈ.ಅನ್ನಪೂರ್ಣ ಅವರು ಮಾತನಾಡಿ, ಸಂಡೂರು ಭಾಗದಲ್ಲಿ ಒಬ್ಬ ರೈತ ಒಂದು ಬೆಳೆ ಬೆಳೆದರೆ, ಉಳಿದ ರೈತರೆಲ್ಲರೂ ಅದೇ ಬೆಳೆ ಬೆಳೆಯಲು ಮುಂದಾಗುತ್ತಿದಾರೆ. ಇದರಿಂದ ಅಸಮತೋಲನವಾಗುತ್ತಿದ್ದು, ಬಹುವಾರು ಬೆಳೆ ಬೆಳೆಯಲು ರೈತರಿಗೆ ಅರಿವು ಮೂಡಿಸಬೇಕು. ಅದೇರೀತಿಯಾಗಿ ಯೂರಿಯಾ ಗೊಬ್ಬರ ಬಳಕೆಯಿಂದಾಗುವ ಪರಿಣಾಮ ಕುರಿತು ರೈತರಲ್ಲಿ ಮನವರಿಕೆ ಮಾಡಿಕೊಡಬೇಕು ಎಂದರು. ಇದಕ್ಕೆ ದನಿಗೂಡಿಸಿದ ಸಂಸದರು, ರೈತರಿಗೆ ಸಂಯುಕ್ತ ಗೊಬ್ಬರ ಬಳಕೆಯ ಕುರಿತು ಅರಿವು ಮೂಡಿಸಬೇಕು. ಹಿಂದಿನ ಪದ್ಧತಿಯ ಸಗಣಿ, ಎಲೆ ಗೊಬ್ಬರ ಬಳಸುವಂತೆ ಸಲಹೆ ನೀಡಬೇಕು ಎಂದು ಜಂಟಿ ಕೃಷಿ ನಿರ್ದೇಶಕರಿಗೆ ಸೂಚಿಸಿದರು.

ಅಖಂಡ ಜಿಲ್ಲೆಗೆ 24 ಅಂಚೆ ಕಚೇರಿ ಮಂಜೂರು:

ನನ್ನ ಇಲ್ಲಿಯವರೆಗಿನ ಸಂಸದನ ಅಧಿಕಾರಾವಧಿಯಲ್ಲಿ ಕೇಂದ್ರದಿಂದ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ ಒಳಗೊಂಡು ಒಟ್ಟು 24 ಅಂಚೆ ಕಚೇರಿಗಳನ್ನು ಮಂಜೂರು ಮಾಡಿಸಲಾಗಿದೆ. ಇದು ಹೆಮ್ಮೆಯ ಸಂಗತಿಯಾಗಿದ್ದು, ಒಂದೊಂದು ಕಚೇ–ರಿಯು 50 ರಿಂದ 60 ಲಕ್ಷ ರೂ. ವೆಚ್ಚದಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣಗೊಳ್ಳಲಿವೆ. ಬ್ಯಾಂಕಿಂಗ್ ಸೇವೆಯು ಒದಗಿಸಲಾಗುತ್ತದೆ. ಇದರಿಂದ ಅಂಚೆ ಸೌಲಭ್ಯಕ್ಕೆ ಇನ್ನಷ್ಟು ವೇಗ ನೀಡಿದಂತಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬಿಎಸ್ಎನ್ಎಲ್ ಸೇವೆಗೆ ಚುರುಕು:

ಜಿಲ್ಲೆಯ ಬಿಎಸ್ಎನ್ಎಲ್ ಕಚೇರಿಗೆ ಕೇಂದ್ರದಿಂದ 12.5 ಲಕ್ಷ ರೂ. ಅನುದಾನ ಒದಗಿಸಲಾಗಿದ್ದು, ಜಿಲ್ಲೆಯಲ್ಲಿ ವಿವಿಧೆಡೆ ನೆಟ್ ವರ್ಕ್ ಅನ್ನು 2ಜಿ, 3ಜಿ ಮತ್ತು 4ಜಿ ಸೇವೆಗಳಿಗೆ ಇನ್ನಷ್ಟು ಚುರುಕು ನೀಡಲು, ಬೇಕಾದ ವಿದ್ಯುತ್ ಸಂಪರ್ಕ, ಕೇಬಲ್ ಲೈನ್ ಅಳವಡಿಕೆ ಕಾಮಗಾರಿ ಕೈಗೊಳ್ಳಬೇಕು. ಇದರಿಂದ ಹಳ್ಳಿ ಭಾಗದ ವಿದ್ಯಾರ್ಥಿಗಳಿಗೆ, ಸರ್ಕಾರಿ ಕಚೇರಿಗಳು ಸುಗಮವಾಗಿ ಕಾರ್ಯನಿರ್ವಹಿಸಲು ಅನುಕೂಲವಾಗುತ್ತದೆ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಪರಿಷ್ಕೃತ ರೈಲ್ವೆ ಅಲೈನ್ಮೆಂಟ್ ವರದಿ ಸಲ್ಲಿಸಿ:

ಕಳೆದ ಹಲವಾರು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ನಗರದ ರೇಡಿಯೋ ಪಾರ್ಕ್ ನ 2 ನೇ ರೈಲ್ವೆ ಮೇಲ್ಸೇತುವೆ ಕಾಮಗಾರಿ ಪುನಾರಂಭಕ್ಕೆ ರೈಲ್ವೆ ರಾಜ್ಯ ಖಾತಾ ಸಚಿವರಾದ ವಿ.ಸೋಮಣ್ಣ ಅವರು ದೀಪಾವಳಿ ಹಬ್ಬದ ನಂತರ ಭೂಮಿಪೂಜೆ ನೆರವೇರಿಸುವರು. ಇದಕ್ಕೆ ಅರಣ್ಯ ಇಲಾಖೆಯ ಜಾಗಕ್ಕೆ ಸಂಬಂಧಿಸಿದಂತೆ ಹಣ ಪಾವತಿಸಿದರೆ, ಕಾಮಗಾರಿ ಆರಂಭವಾಗಲಿದೆ. ಈ ಕುರಿತು ರೈಲ್ವೆ ಕೇಂದ್ರ ಕಚೇರಿಯ ಗಮನಕ್ಕೆ ತರಬೇಕು. ಇದಕ್ಕೆ ಬೇಕಾದ ಅಗತ್ಯ ಅನುದಾನ ಕೂಡ ಒದಗಿಸಲಾಗುವುದು. ಹಾಗಾಗಿ ಪರಿಷ್ಕೃತ ರೈಲ್ವೆ ಅಲೈನ್ಮೆಂಟ್ ಯೋಜನಾ ವರದಿ ಸಲ್ಲಿಸಬೇಕು ಎಂದು ರೈಲ್ವೆ ಅಧಿಕಾರಿಗಳಿಗೆ ಸೂಚಿಸಿದರು. ಇದೇ ವೇಳೆ ಹೆಚ್.ಆರ್. ಗವಿಯಪ್ಪ ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತಕ್ಕೆ ಸಂಪರ್ಕ ಕಲ್ಪಿಸುವ ರೈಲ್ವೆ ಮೇಲ್ಸೇತುವೆ ವಿಸ್ತರಣೆ ಕುರಿತಂತೆ ಪರಿಶೀಲನೆ ನಡೆಸುವರು ಎಂದು ತಿಳಿಸಿದರು.

ನವೆಂಬರ್ ಅಂತ್ಯಕ್ಕೆ ರಿಂಗ್ ರೋಡ್ ಪೂರ್ಣಗೊಳಿಸಲು ತಾಕೀತು:

ನಗರದೊಳಗೆ ಭಾರೀ ಗಾತ್ರದ ವಾಹನಗಳು ಸಂಚಾರಕ್ಕೆ ಕಡಿವಾಣ ಹಾಕಲು ಈಗಾಗಲೇ ಪ್ರಗತಿಯಲ್ಲಿರುವ ರಿಂಗ್ ರೋಡ್ ಕಾಮಗಾರಿಯು ನವೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಎನ್ಹೆಚ್ಐಎ ಅಧಿಕಾರಿಗಳಿಗೆ ತಾಕೀತು ಮಾಡಿದರು. ಅದರಂತೆ ಬಳ್ಳಾರಿ–ಹೊಸಪೇಟೆಗೆ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿಯೂ ಪೂರ್ಣಗೊಳ್ಳುವ ಹಂತದಲ್ಲಿದ್ದು, ಕೇವಲ 4–5 ಕಿ.ಮೀ ಉದ್ದ ಬಾಕಿ ಇದ್ದು, ತ್ವರಿತವಾಗಿ ಪೂರ್ಣಗೊಳಿಸಬೇಕು. ಸಿರುಗುಪ್ಪಗೆ ಸಂಪರ್ಕ ಕಲ್ಪಿಸುವ ರಸ್ತೆಯ ಕಾಮಗಾರಿಗೆ ಸಹ ವೇಗ ನೀಡಬೇಕು ಎಂದರು. ಇದೇವೇಳೆ ನಗರದ ಹೊರವಲಯದ ಬಿಐಟಿಎಂ ಬಳಿಯ ರಾಷ್ಟ್ರೀಯ ಹೆದ್ದಾರಿ ಬಳಿಯಿಂದ ಸುಧಾಕ್ರಾಸ್ ವರೆಗೆ ಕೈಗೊಳ್ಳಲು ಉದ್ದೇಶಿಸಲಾಗಿರುವ 4 ಲೈನ್ ರಸ್ತೆಗೆ ಸೂಕ್ತ ಸರ್ವೆ ನಡೆಸಿ ನೀಡಬೇಕು ಎಂದು ಲೋಕೋಪಯೋಗಿ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಇಎಸ್ಐ ಆಸ್ಪತ್ರೆ ನಿರ್ಮಾಣ ಕಾಮಗಾರಿಗೆ ಕೇಂದ್ರದಿಂದ ಟೆಂಡರ್ ಅನುಮೋದನೆ ಪಡೆದುಕೊಳ್ಳಲಾಗಿದೆ. ಕಾಮಗಾರಿ ಕೈಗೆತ್ತಿಗೊಳ್ಳುವಂತೆ ಇಎಸ್ಐ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅದೇರೀತಿಯಾಗಿ ಸಂಡೂರಿನಲ್ಲಿ ಸಹ ಇಎಸ್ಐ ಆಸ್ಪತ್ರೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಕ್ರಮವಹಿಸಬೇಕು ಎಂದರು.

ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್, ಇಂಡಿಯನ್ ಆಯಿಲ್ ಕಾರ್ಪೊರೇಷನ್ ಕಂಪನಿಗಳಲ್ಲಿ ಸಾರ್ವಜನಿಕರಿಗಿರುವ ವಿವಿಧ ಯೋಜನೆ ಸೌಲಭ್ಯಗಳ ಕುರಿತು ಸಭೆಗೆ ಸೂಕ್ತ ಮಾಹಿತಿ ಒದಗಿಸುವಂತೆ ಸಂಸದರು, ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಂಡೂರು ಶಾಸಕಿ ಈ.ಅನ್ನಪೂರ್ಣ ಅವರು ಮಾತನಾಡಿ, ಸಂಡೂರು ಭಾಗದಲ್ಲಿ ಹೆಚ್ಚಾಗಿ ವಿವಿಧ ಬಗೆಯ ಕ್ಯಾನ್ಸರ್ ಪ್ರಕರಣ ಕಂಡುಬರುತ್ತಿವೆ. ಸೂಕ್ತ ಕ್ರಮ ವಹಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಡಿಹೆಚ್ಓ, 9–18 ಮತ್ತು 16–18 ಒಳಗೆ 3 ಡೋಸ್ ಗಳ ಹೆಚ್ ಪಿವಿ ವ್ಯಾಕ್ಸಿನ್ ಲಭ್ಯವಿದ್ದು, ಸರಬರಾಜು ಮಾಡಲಾಗುವುದು ಎಂದರು. ಮಧ್ಯಪ್ರವೇಶಿಸಿದ ಸಂಸದರು, ಪ್ರಸ್ತುತದ ಜೀವನದ ಶೈಲಿಯಲ್ಲಿ ರೋಗ ಕಂಡುಬರುತ್ತಿದ್ದು, ಸೂಕ್ತ ಅನುದಾನದಲ್ಲಿ ಎರಡು ಮೊಬೈಲ್ ವ್ಯಾನ್ ಗಳ ಮೂಲಕ ಐದು ತಾಲ್ಲೂಕುಗಳಲ್ಲಿ ಕ್ಯಾನ್ಸರ್ ರೋಗ ಕುರಿತು ಅರಿವು ಮೂಡಿಸಬೇಕು. ಇಂತಹ ಪ್ರಕರಣಗಳಿಗೆ ಪ್ರಧಾನಮಂತ್ರಿಗಳ ಪರಿಹಾರ ನಿಧಿಯಿಂದ ರೂ.46.75 ಲಕ್ಷ ಅನುದಾನ ಜಿಲ್ಲೆಗೆ ನೀಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಅಧಿಕಾರಿಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವಾಗ ಸ್ಥಳೀಯ ಶಾಸಕರ–ಜನ ಪ್ರತಿನಿಧಿಗಳ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಆಯೋಜಿಸಿ ನೀಡಬೇಕು ಎಂದರಲ್ಲದೇ, ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲ್ಲೂಕುವಾರು ಕ್ಷೇತ್ರ ಭೇಟಿ ನಡೆಸುವಾಗ ಸ್ಥಳೀಯ ಶಾಸಕರ ಗಮನಕ್ಕೆ ಮಾಹಿತಿ ತರಬೇಕು. ಆಯಾ ತಾಪಂ ಅಧಿಕಾರಿಗಳು ಹಾಜರಾತಿ ಇಟ್ಟುಕೊಳ್ಳಬೇಕು ಎಂದು ತಿಳಿಸಿದರು.

ವಿಧಾನಪರಿಷತ್ ಸದಸ್ಯ ವೈ.ಎಂ.ಸತೀಶ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದರೆ, ಹತ್ತಿರದ ಶಾಲೆಯ ಖಾಲಿ ಇರುವ ಕೊಠಡಿಗಳಿಗೆ ಸ್ಥಳಾಂತರಿಸಬೇಕು, ನಿರ್ವಹಣೆಯು ಸುಲಭವಾಗಲಿದೆ ಎಂದು ಸಲಹೆ ನೀಡಿದರು.

ಸಭೆಯಲ್ಲಿ ಜೆಜೆಎಂ ಕಾಮಗಾರಿ, ಲೋಕೋಪಯೋಗಿ ಇಲಾಖೆ, ವಿಶೇಷಚೇತನರಿಗೆ ನೀಡುವ ಸಾಮಗ್ರಿ–ಸಲಕರಣೆ, ಪ್ರಧಾನಮಂತ್ರಿ ಆವಾಸ್ ಯೋಜನೆ, ಸರ್ವಶಿಕ್ಷಣ ಅಭಿಯಾನ ಕುರಿತಂತೆ ವಿವಿಧ ಕೇಂದ್ರ ಸರ್ಕಾರದ ಯೋಜನೆಗಳು ಕುರಿತು ಸಮಗ್ರವಾಗಿ ಚರ್ಚಿಸಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಪಂ ಸಿಇಒ ಮಹಮ್ಮದ್ ಹ್ಯಾರಿಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಬಳ್ಳಾರಿ ವಲಯ ಉಪಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ

# ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣಾ ಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಿತೇಶಕುಮಾರ್ ಸಿಂಗ್ ಸೂಚನೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 13–ಜಿಲ್ಲೆಯಲ್ಲಿ ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮಕೈಗೊಂಡು ಈ ಬಾರಿ ಫಲಿತಾಂಶದಲ್ಲಿ ಬದಲಾವಣೆ ಮಾಡಬೇಕೆಂದು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಆಗಿರುವ ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಿತೇಶಕುಮಾರ್ ಸಿಂಗ್ ಅವರು ಹೇಳಿದರು.

ಅಕ್ಟೋಬರ್ 13ರ ಸೋಮವಾರ ದಂದು ನಗರದ ಜಿಲ್ಲಾ ಪಂಚಾಯತ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಎಸ್ಎಸ್ಎಲ್ಸಿ, ಪಿಯುಸಿ ಫಲಿತಾಂಶ ಕುಸಿತ ಕಂಡಿದೆ. ದೇವದುರ್ಗ ತಾಲೂಕಿನಲ್ಲಿ 17 ಶಾಲೆಗಳಲ್ಲಿ ಶೇ.40ಕ್ಕಿಂತ ಕಡಿಮೆ ಫಲಿತಾಂಶ ಬಂದಿದೆ. ಈ ತಾಲೂಕಿನಲ್ಲಿನ ಮಕ್ಕಳಿಗೆ ಬರವಣಿಗೆ ಕೌಶಲ್ಯವಿಲ್ಲ ಎಂಬ ಮಾಹಿತಿಯಿದೆ. ರಾಯಚೂರು ನಗರ ವ್ಯಾಪ್ತಿಯಲ್ಲಿ 60 ಶಾಲೆಗಳಲ್ಲಿ ಶೇ.40ಕ್ಕಿಂತ ಕಡಿಮೆ ಫಲಿತಾಂಶ ದಾಖಲಾಗುತ್ತದೆ. ನಗರ ವ್ಯಾಪ್ತಿಯ ಸಾಕಷ್ಟು ಮಕ್ಕಳು ಶಾಲೆಗೆ ಬರುವುದಿಲ್ಲ ಎಂಬ ಮಾಹಿತಿಯೂ ಇದ್ದು, ಫಲಿತಾಂಶ ಸುಧಾರಣೆಗೆ ಸೂಕ್ತ ಕ್ರಮಕೈಗೊಳ್ಳಬೇಕು. ವಾರದಲ್ಲಿ 2–3 ಶಾಲೆಗಳಿಗೆ ಆಯಾ ತಾಲೂಕು ವ್ಯಾಪ್ತಿಯ ನೋಡೆಲ್ ಅಧಿಕಾರಿಗಳು ಭೇಟಿ ನೀಡಲೇಬೇಕು ಎಂದು ಸೂಚನೆ ನೀಡಿದರು.

ಕಲಿಕೆಯಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳನ್ನು ಗುರುತಿಸುವುದಕ್ಕೆ ಆದ್ಯತೆ ನೀಡಬೇಕು. ಮಕ್ಕಳು ಶಾಲೆಯಿಂದ ಹೊರಗಡೆ ಉಳಿಯದಂತೆ ನೋಡಿಕೊಳ್ಳಬೇಕು. ಫಲಿತಾಂಶ ಸುಧಾರಣಾ ಕ್ರಮಗಳು ಪ್ರತಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಹ ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಗೃಹಲಕ್ಷ್ಮೀ ಯೋಜನೆಯ ಪ್ರಗತಿಯ ಬಗ್ಗೆ ಕೇಳಿದ ಕಾರ್ಯದರ್ಶಿಗಳು, ಗೃಹಲಕ್ಷ್ಮಿ ಫಲಾನುಭವಿಗಳಿಗೆ ಪ್ರತಿ ಮಾಹೆ 2000 ರೂ. ಹಣ ಬಿಡುಗಡೆಗೆ ವಿಳಂಬವಾಗದಂತೆ ಕ್ರಮವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಯೋಮೆಟ್ರಿಕ್ ಯಂತ್ರ ಅಳವಡಿಕೆಗೆ ಸೂಚನೆ: ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ನಿಲಯಗಳಿಗೆ ಪೂರೈಕೆಯಾಗುವ ಆಹಾರ ಧಾನ್ಯಗಳು ಮತ್ತು ಅದರ ಗುಣಮಟ್ಟದ ಬಗ್ಗೆ ಕಾರ್ಯದರ್ಶಿಗಳು ಕೇಳಿದರು.

ಇದರಲ್ಲಿ ಯಾವುದೇ ರೀತಿಯ ವ್ಯತ್ಯಾಸವಾಗಬಾರದು. ಕಡ್ಡಾಯವಾಗಿ ಬಯೋಮೆಟ್ರಿಕ್ ನಲ್ಲಿನ ಮಕ್ಕಳ ಹಾಜರಾತಿಯನ್ನೇ ಪರಿಗಣನೆಗೆ ಪಡೆಯಬೇಕು. ರಿಜಿಸ್ಟರನಲ್ಲಿನ ಹಾಜರಾತಿಗೂ ಬಯೋಮೆಟ್ರಿಕನಲ್ಲಿ ಹಾಜರಾತಿಗೂ ವ್ಯತ್ಯಾಸವಾಗಕೂಡದು. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ವಸತಿ ನಿಲಯಗಳಲ್ಲಿ ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸಿ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯಗೊಳಿಸಬೇಕು ಎಂದು ಸೂಚನೆ ನೀಡಿದರು.

ಬಾಕಿ ಸಮೀಕ್ಷೆ ಪೂರ್ಣಗೊಳಿಸಿ: ರಾಯಚೂರು ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಹೆಚ್ಚಾಗಿ ಭತ್ತ, ಹತ್ತಿ ಮತ್ತು ತೊಗರಿ ಬೆಳೆ ಬಿತ್ತನೆಯಾಗಿದೆ. ವಿಪರೀತ ಸುರಿದ ಮಳೆಯಿಂದಾಗಿ ಹತ್ತಿ, ಭತ್ತ, ತೊಗರಿ, ಜೋಳ ಸೇರಿದಂತೆ ಅನೇಕ ಬೆಳೆಗಳಿಗೆ ಹಾನಿಯಾಗಿದೆ. ಇದಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಈಗಾಗಲೇ ಜಂಟಿ ಸರ್ವೆ ಕಾರ್ಯ ಪ್ರಗತಿಯಲ್ಲಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಸಭೆಗೆ ವಿವರಿಸಿದರು. ಬಾಕಿ ಸರ್ವೆ ಕಾರ್ಯವನ್ನು ಶೀಘ್ರವೇ ಪೂರ್ಣಗೊಳಿಸಬೇಕು ಎಂದು ಕಾರ್ಯದರ್ಶಿಗಳು ಸೂಚನೆ ನೀಡಿದರು.

ಸ್ಯಾನಿಟರಿ ಪ್ಯಾಡ್ ಪೂರೈಕೆಗೆ ಸೂಚನೆ: ಬಿಸಿಎಂ ವಸತಿ ನಿಲಯದಲ್ಲಿನ ವಿದ್ಯಾರ್ಥಿನಿಯರಿಗೆ ಅನುಕೂಲವಾಗುವಂತೆ ಆರೋಗ್ಯ ಇಲಾಖೆಯಿಂದ ಸ್ಯಾನಿಟರಿ ಪ್ಯಾಡ್ ವಿತರಣೆಯಾಗಬೇಕಿದೆ ಎಂದು ಬಿಸಿಎಂ ಇಲಾಖೆಯ ಅಧಿಕಾರಿ ಸಭೆಗೆ ತಿಳಿಸಿದರು. ಸ್ಯಾನಿಟರಿ ಪ್ಯಾಡ್ ಪೂ–ರೈಕೆಗೆ ಸಂಬಂಧಿಸಿದಂತೆ ಇಲಾಖೆಯೊಂದಿಗೆ ಸಮನ್ವಯ ಮಾಡಲು ಕಾರ್ಯದರ್ಶಿಗಳು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೂಲಸೌಕರ್ಯಕ್ಕೆ ಒತ್ತು ಕೊಡಿ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ಸ್ಥಿತಿಗತಿಯ ಬಗ್ಗೆ ಕಾರ್ಯದರ್ಶಿಗಳು ಕೇಳಿದರು. 03 ಅಲ್ಪಸಂಖ್ಯಾತರ ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ. ಅವುಗಳಲ್ಲಿ 02 ವಸತಿ ನಿಲಯಗಳಿಗೆ ನಿವೇಶನ ಲಭ್ಯವಿದ್ದು, ಒಂದಕ್ಕೆ ನಿವೇಶನ ಬೇಕು ಎಂದು ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯು ತಿಳಿಸಿದರು. ವಿದ್ಯಾರ್ಥಿಗಳ ಅಗತ್ಯಕ್ಕೆ ತಕ್ಕಂತೆ ಮೂಲ ಸೌಕರ್ಯ ಕಲ್ಪಿಸಲು ಅಧಿಕಾರಿಗಳು ಒತ್ತು ಕೊಡಬೇಕು ಎಂದು ಸೂಚನೆ ನೀಡಿದರು.

ಪಿಡಿಒಗೆ ಪ್ರಶಸ್ತಿ ವಿತರಣೆ: ಪ್ರತಿ ತಿಂಗಳ ಕಾರ್ಯಕ್ಷಮತೆಯ ಆಧಾರದ ಮೇಲೆ ಅತ್ಯುತ್ತಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಎಂದು ರಾಯಚೂರು ತಾಲೂಕಿನ ಬಿಚ್ಚಾಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಾಳಮ್ಮ ಅವರಿಗೆ

ಸೆಪ್ಟೆಂಬರ್ ತಿಂಗಳಿನ ಪ್ರಶಂಸನೀಯ ಪ್ರಮಾಣ ಪತ್ರವನ್ನು ಕಾರ್ಯದರ್ಶಿಗಳು ನೀಡಿ ಪ್ರೋತ್ಸಾಹಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೊಹಪಾತ್ರ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಮುಖ್ಯಯೋಜನಾಧಿರಿಗಳಾದ ಡಾ.ಟಿ.ರೋಟಿ, ಯೋಜನಾ ನಿರ್ದೇಶಕರಾದ ಶರಣಬಸವರಾಜ ಕೆ. ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.

# ಸಚಿವರಾದ ಸಂತೋಷ ಲಾಡ್ ರಾಯಚೂರು ಜಿಲ್ಲೆಯಲ್ಲಿ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 13–ಕಾರ್ಮಿಕ ಸಚಿವರಾದ ಸಂತೋಷ ಲಾಡ್ ಅವರು ಅಕ್ಟೋಬರ್ 15ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಅಂದು ಮಧ್ಯಾಹ್ನ 1.30ಗಂ–ಟೆಗೆ ಯಾದಗಿರಿ ಜಿಲ್ಲೆಯಿಂದ ನಿರ್ಗಮಿಸಿ ಮಧ್ಯಾಹ್ನ 2.30 ಗಂಟೆಗೆ ರಾಯಚೂರಿಗೆ ಆಗಮಿಸಿ, ಸರ್ಕ್ಯೂಟ್ ಹೌಸ್ ನಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ.

ಮಧ್ಯಾಹ್ನ 3 ಗಂಟೆಗೆ ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ನಡೆಯುವ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತ ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 5.30ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುದಗಲ್ ನವೋದಯದಿಂದ 9, 11ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 13–ಜಿಲ್ಲೆಯ ಲಿಂಗಸುಗೂರು ತಾಲೂಕಿನ ಮುದಗಲ್ ಪಿಎಮ್ಶ್ರೀ ನವೋದಯ ವಿದ್ಯಾಲಯದಿಂದ 9 ಹಾಗೂ 11ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯ ಅವಧಿ ಅಕ್ಟೋಬರ್ 21ರವರೆಗೆ ವಿಸ್ತರಿಸಲಾಗಿದೆ. 9ನೇ ತರಗತಿ ಪ್ರವೇಶಕ್ಕೆ 8ನೇ ತರಗತಿ ಓದುತ್ತಿರುವ ಹಾಗೂ 11 ತರಗತಿ ಪ್ರವೇಶಕ್ಕೆ 10ನೇ ತರಗತಿ ಓದುತ್ತಿರುವ ಆಸಕ್ತರು ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ವೆಬ್ಸೈಟ್ ವಿಳಾಸ: ჳಣಣಠಿ://ಛಿಛ–, ಜುಣಛ.ಡಿಛಿಟ.ರಠಡಿ.ಟಿ/ಟಿ೩11 &ತಿತಿತಿ.ಟಿಚಿತಿಂಜಚಿಥಿಚಿ.ರಠತ.ಟಿ ನಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 7204109046, 7899009900.9703473495ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮುದಗಲ್ ಪಿಎಮ್ಶ್ರೀ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಕಾರ್ಯಕ್ರಮ ಅಕ್ಟೋಬರ್ 15ಕ್ಕೆ ಮುಂದೂಡಿಕೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 13–:ಕಾರ್ಮಿಕ ಇಲಾಖೆಯಿಂದ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ರಾಯಚೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ವಿವಿಧ ವರ್ಗದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮವನ್ನು ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಅಕ್ಟೋಬರ್ 15ರ ಮಧ್ಯಾಹ್ನ 03ಗಂಟೆಗೆ ಮುಂದೂಡಲಾಗಿದೆ.

ಈ ಹಿಂದೆ ಅಕ್ಟೋಬರ್ 13ರ ಬೆಳಿಗ್ಗೆ 11ಗಂಟೆಗೆ ಕಾರ್ಯಕ್ರಮವನ್ನು ನಿಗದಿ ಮಾಡಲಾಗಿತ್ತು. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಕಾರ್ಮಿಕ ಸಚಿವರು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಘನ ಉಪಸ್ಥಿತಿ ವಹಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್.ಬೋಸರಾಜು ಅವರು ಗೌರವ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಾರ್ಮಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಮೊಹಮ್ಮದ್ ಮೊಹಸಿನ್, ಕಾರ್ಮಿಕ ಆಯುಕ್ತರು ಹಾಗೂ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳು ಆಯುಕ್ತರಾದ ಡಾ.ಎಚ್.ಎನ್.ಗೋಪಾಲಕೃಷ್ಣ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಭಾರತಿ ಡಿ, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾ–ರೆ ಎಂದು ಕಾರ್ಮಿಕ ಇಲಾಖೆಯ ಪ್ರಕಟಣೆಯಲ್ಲಿ ತಿಳಿಸಿದೆ.

# ರಾಯಚೂರು ಮಹಾನಗರ ಪಾಲಿಕೆಯಿಂದ ಟಿ.ಎಸ್.ಪಿ ಕಲ್ಯಾಣ ಕಾರ್ಯಕ್ರಮದಡಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 13– ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019–20, 2022–23 ಹಾಗೂ 2023–24, 2024–25ನೇ ಸಾಲಿನ ಎಸ್.ಎಫ್.ಸಿ ನಿಧಿ & ನಗರಸಭೆ ನಿಧಿಯ ಶೇ.29ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ಟಿ.ಎಸ್.ಪಿ ಕಲ್ಯಾಣ ಕಾರ್ಯಕ್ರಮಗಳಲ್ಲಿ ಪಾಲಿಕೆ ವ್ಯಾಪ್ತಿಯ ಅರ್ಹ ಫಲಾನುಭವಿಗಳಿಂದ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ವೈಯಕ್ತಿಕ ಹರಿಯುವ ನೀರು ಶೌಚಾಲಯ ಹೊಂದಿರದ ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ಸೇರಿದ ಪ್ರತಿ ಕುಟುಂಬಕ್ಕೆ ಸ್ವಂತ ಸೆಪ್ಟಿಕ್ ಟ್ಯಾಂಕ್ ಶೌಚಾಲಯ ನಿರ್ಮಾಣಕ್ಕೆ ಗರಿಷ್ಟ 15,000ರೂ.ಗಳಿಗೆ ಮಿತಿಗೊಳಿಸಿ ಮತ್ತು ಯು–ಜಿಡಿ ಸಂಪರ್ಕ ಹೊಂದುವ ಶೌಚಾಲಯ ನಿರ್ಮಾಣಕ್ಕೆ ಗರಿಷ್ಟ 10,000ರೂ.ಗಳಿಗೆ ನಿಗದಿಪಡಿಸಲಾಗಿದೆ.

ದಾಖಲಾತಿಗಳು: ನಿಗದಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಆದಾಯ ಪ್ರಮಾಣ ಪತ್ರ (ಪ್ರಸಕ್ತ ಚಾಲ್ತಿ ಸಾಲು), ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ್, ಪಾಸ್ ಪೋ–ಟೋ ಅಳತೆಯ ಭಾವ ಚಿತ್ರ–2, ಬ್ಯಾಂಕ್ ಪಾಸ್ ಪುಸ್ತಕ ಹಾಗೂ ಐ.ಎಫ್.ಎಸ್.ಸಿ ಕೋಡ್ ನೊಂದಿಗೆ ಬ್ಯಾಂಕ್ ವಿವರ, ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಜಾಗದ ಛಾಯಾಚಿತ್ರ ಹಾಗೂ ಮೊಬೈಲ್ ನಂಬರ್ ನೊಂದಿಗೆ ಅಕ್ಟೋಬರ್ 29ರ ಸಂಜೆ 5ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅವದಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿಯ ನೋಟಿಸ್ ಬೋರ್ಡ್ ನೋಡಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎನ್‌ಆರ್‌ಎಲ್‌ಎಂ ಸ್ವಸಹಾಯ ಸಂಘ ಉತ್ಪನ್ನ ಮಾರಾಟ ಮಳಿಗೆ ಉದ್ಘಾಟಿಸಿ ಸಂಸದ ಈ.ತುಕಾರಾಮ್ ಹೇಳಿಕೆ

# ಸ್ಥಳೀಯ ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತರಣೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಕೇಂದ್ರಸರ್ಕಾರದ ಒಂದು ನಿಲ್ದಾಣ–ಒಂದು ಉತ್ಪನ್ನ ಯೋಜನೆಯಿಂದ ಎನ್‌ಆರ್‌ಎಲ್‌ಎಂ ಸ್ವಸಹಾಯ ಸಂಘಗಳಿಗೆಅನುಕೂಲವಾಗಲಿದೆ. ಆರ್ಥಿಕ ಪ್ರಗತಿಗೂ ಇದು ಸಹಕಾರಿಯಾಗಲಿದೆ ಎಂದು ಬಳ್ಳಾರಿ ಲೋಕಸಭಾ ಸಂಸದ ಈ.ತುಕಾರಾಮ್ ಅವರು ಹೇಳಿದರು.

ಸೋಮವಾರ ನಗರದ ಮುಖ್ಯ ರೈಲು ನಿಲ್ದಾಣದಲ್ಲಿ ಒಂದು ನಿಲ್ದಾಣ–ಒಂದು ಉತ್ಪನ್ನ ಯೋಜನೆಯಡಿ ಎನ್‌ಆರ್‌ಎಲ್‌ಎಂ ಸ್ವಸಹಾಯ ಸಂಘದ ಉತ್ಪನ್ನ ಮಾರಾಟ ಮಳಿಗೆ ಉದ್ಘಾಟಿಸಿ ಮಾತನಾಡಿದ ಅವರು, ಈ ಯೋಜನೆಯಿಂದ ಸ್ಥಳೀಯ ಉತ್ಪನ್ನಗಳನ್ನುಜನಪ್ರಿಯಗೊಳಿಸಲು ಅನುಕೂಲವಾಗಲಿದೆ ಎಂದರು.

ಜಿಪಂ ನ ಎನ್‌ಆರ್‌ಎಲ್‌ಎಂ ಯೋಜನೆಯಡಿ ನೋಂದಣಿ ಮಾಡಿಕೊಂಡಿದ್ದ ಸ್ವ ಸಹಾಯ ಸಂಘಗಳ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆಆದ್ಯತೆನೀಡಲಾಗುತ್ತಿದೆ ಎಂದರು.

ಪಾಶ್ಚಾತ್ಯ ಉತ್ಪನ್ನ ತೊರೆದು, ದೇಶಿ ಉತ್ಪನ್ನಗಳನ್ನು ಬಳಸುವ ಮೂಲಕ ಸಾರ್ವಜನಿಕರು ತಮ್ಮ ಆರೋಗ್ಯ ಕಾಳಜಿ ವಹಿಸಬೇಕು ಎಂದು ಕರೆ ನೀಡಿದ ಸಂಸದರು, ಸ್ಥಳೀಯ ಉತ್ಪನ್ನಗಳ ಆಹಾರ ಪದಾರ್ಥಗಳಿಗೆ ಮಾರುಕಟ್ಟೆ ವಿಸ್ತರಣೆಯಾಗಲಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ವಿಜಯನಗರ ಜಿಲ್ಲೆ ಸೇರಿದಂತೆ ಜಿಲ್ಲಾ ವ್ಯಾಪ್ತಿಯ ಎಲ್ಲಾ ರೈಲು ನಿಲ್ದಾಣಗಳಲ್ಲಿ ಮತ್ತು ನಗರ ಕೇಂದ್ರ ಬಸ್ ನಿಲ್ದಾಣಗಳಲ್ಲಿ ಉತ್ಪನ್ನ ಮಾರಾಟ ಮಳಿಗೆಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

*ಸಾರ್ವಜನಿಕರ ಅಹವಾಲು ಸ್ವೀಕಾರ:*

ಸಂವಿಧಾನದ ಧ್ಯೇಯೋದ್ದೇಶ ಈಡೇರಬೇಕೆಂದರೆ ಜನಪ್ರತಿನಿಧಿಗಳು, ಅಧಿಕಾರಿಗಳು ಸಾರ್ವಜನಿಕರ ಕುಂದು–ಕೊರತೆಆಲಿಸಿ,ಪರಿಹರಿಸುವ ಸಂಯಮ ಇರಬೇಕು ಎಂದು ಸಂಸದ ಈ.ತುಕಾರಾಮ್ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಆಯೋಜಿಸಿದ್ದ ಸಾರ್ವಜನಿಕರ ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ಈಗಾಗಲೇ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಗಂಭೀರವಾಗಿ ಪರಿಗಣಿಸಬೇಕು.ಕಾನೂನಿನಾತ್ಮಕವಾಗಿ ಬಗೆಹರಿಸಬಹುದಾದವುಗಳನ್ನು ಕಾಲಮಿತಿಯಲ್ಲಿ ಬಗೆಹರಿಸಬೇಕು. ಉಳಿದವುಗಳನ್ನು ಸಂಸದರ ಗಮನಕ್ಕೆ ತರಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಬಳಕ ಸಂಸದರು, ಕೇಂದ್ರ ಮತ್ತು ಕೇಂದ್ರಪುರಸ್ಕೃತ ಹಾಗೂ ಇತರೆ ಯೋಜನೆಗಳ ಕುರಿತಂತೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆ ಮೇಯರ್ ಮುಲ್ಲಂಗಿ ನಂದೀಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಪಂ ಸಿಇಒ ಮಹಮ್ಮದ್ ಹ್ಯಾರಿಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್,ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪೂರೆ, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಪಂ ಮಾಜಿ ಸದಸ್ಯರು, ರೈಲ್ವೆ ಅಧಿಕಾರಿಗಳು, ಸ್ವಸಹಾಯ ಸಂಘದ ಮಹಿಳಾ ಸದಸ್ಯರು,ಸಾರ್ವಜನಿಕರು ಹಾಗೂ ಇತರರು ಇದ್ದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.12–ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ (https://sevasindhu.karnataka.gov.in) ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.

ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು"ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಬಳ್ಳಾರಿ(ಗ್ರಾಮಾಂತರ) ಶಿಶು ಅಭಿವೃದ್ಧಿ ಯೋಜನೆಯಡಿ 2006–07ನೇ ಸಾಲಿನಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿ ನೋಂದಾಯಿಸಲ್ಪಟ್ಟ 18 ವರ್ಷ ಪೂರ್ಣಗೊಂಡಿರುವ ಫಲಾನುಭವಿಗಳಲ್ಲಿ ಅರ್ಹರಾದ ಫಲಾನುಭವಿಗಳಿಗೆ ಪರಿಪಕ್ವಮೊತ್ತ ರೂ.32,351/–ಗಳನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 31ರ ಒಳಗಾಗಿ ಸಂಬಂಧಿಸಿದ ದಾಖಲೆಗಳನ್ನು ನಗರದ ದೇವಿನಗರ ಕ್ಲಬ್ ರಸ್ತೆಯ ಮಹಿಳಾ ಪೋಲಿಸ್ ಠಾಣೆ ಪಕ್ಕದ ಕಾಂಪೌಂಡ್ ಶಿಶು ಅಭಿವೃದ್ಧಿ ಯೋಜನಾ ಕಚೆunde-finedÃjಬಳ್ಳಾರಿ(ಗ್ರಾಮಾಂತರ) ಕಾರ್ಯಾಲಯಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಅವಧಿ ಮುಗಿದ ಬಂದ ನಂತರ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಬಳ್ಳಾರಿ ನಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಟ್ಟಡ ಕಾರ್ಮಿಕರಿಗೆ ವಿವಿಧ ಸೇಫ್ಟಿ ಕಿಟ್ ವಿತರಣೆ: ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ವಿವಿಧ ಸೇಫ್ಟಿಕಿಟ್ ವಿತರಿಸಲು ಉದ್ದೇಶಿಸಲಾಗಿದ್ದು, ಅರ್ಹ ಕಟ್ಟಡ ಕಾರ್ಮಿಕರು ಆಯಾ ಕಾರ್ಮಿಕ ನಿರೀಕ್ಷಕರ ಕಚೇರಿಯಲ್ಲಿ ನೋಂದಾಯಿಸಕೊಳ್ಳಬೇಕು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜಿ.ಖೈನೂರು ಅವರು ತಿಳಿಸಿದ್ದಾರೆ. ಜೇಷ್ಠತೆ ಆಧಾರದಲ್ಲಿ ಮೇಸನ್ ಕಿಟ್, ವೆಲ್ಡಿಂಗ್ ಕಿಟ್, ಕಾರ್ಪೇಂಟರ್ ಕಿಟ್, ಪ್ಲಂಬರ್ ಕಿಟ್, ಪೇಂಟರ್ ಕಿಟ್ ಮತ್ತು ಎಲೆಕ್ಟ್ರಿಷಿಯನ್ ಕಿಟ್ ಸೇರಿದಂತೆ ವಿವಿಧ ಸೇಫ್ಟಿ ಕಿಟ್‌ಗಳನ್ನು ವಿತರಿಸಲಾಗುವುದು.

ಅರ್ಹರು ತಮ್ಮ ಆಧಾರ್ ಕಾರ್ಡ್, ಮೊಬೈಲ್ ಸಂಖ್ಯೆ ಹಾಗೂ ನೋಂದಾಯಿತ ಕಟ್ಟಡ ಕಾರ್ಮಿಕರ ಚಾಲ್ತಿಯಲ್ಲಿರುವ ಗುರುತಿನ ಚೀಟಿ ಇತರೆ ದಾಖಲೆಗಳೊಂದಿಗೆ ತಮ್ಮ ವ್ಯಾಪ್ತಿಯ ಕಾರ್ಮಿಕ ನಿರೀಕ್ಷಕರ ಕಚೇರಿಯಲ್ಲಿ ಅ.31 ರೊಳಗಾಗಿ ನೋಂದಾಯಿಸಿಕೊಳ್ಳಬೇಕು. ಅವಧಿ ಮುಗಿದು ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರ ಕಚೇರಿ ಹಾಗೂ ಕೌಲ್‌ಬಜಾರ್‌ನ ಮೊದಲನೇ ಗೇಟ್‌ನ ಮೊಹಮ್ಮದೀಯ ಕಾಲೇಜಿನ ಹಿಂಭಾಗದ ಬಳ್ಳಾರಿ ಉಪವಿಭಾಗದ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.27 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಕಾರ್ಮಿಕರ ಭವಿಷ್ಯ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮವನ್ನು ಅ.27 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ಬಳ್ಳಾರಿ ಜಿಲ್ಲೆಯ ಶಿಡಿಗಿನಮೊಳ ಗ್ರಾಮದ ಜಾನಕಿ ಸ್ಟಿಲ್ ಲಿಮಿಟೆಡ್ ಫ್ಯಾಕ್ಟರಿಯಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರ ಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು. ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರು ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಕ್ರಮವಾಗಿದೆ.

ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಅ.27 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈದ್ಯಾಧಿಕಾರಿಗಳು ಗರ್ಭಿಣಿ ತಾಯಿಯ ಆರೈಕೆಗೆ ಹೆಚ್ಚು ಒತ್ತು ನೀಡಿ: ಡಾ.ಶಂಕ್ರಪ್ಪ ಮೈಲಾರಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಆರ್‌ಸಿಹೆಚ್ ಕಾರ್ಯಕ್ರಮದಡಿ ಗರ್ಭಿಣಿ ತಾಯಿಯ ಆರೈಕೆಗೆ ಹೆಚ್ಚು ಒತ್ತು ನೀಡಿ, ಗರ್ಭಿಣಿ ತಾಯಿಯ ಆರೋಗ್ಯ ತಪಾಸಣೆ ನಡೆಸಿದ ನಂತರ ಆರೋಗ್ಯ ಕುರಿತು ಅವರಿಗೆ ಸರಿಯಾದ ಮಾಹಿತಿ ನೀಡಬೇಕು ಎಂದು ಕಲಬುರಗಿ ವಿಭಾಗೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಸಹನಿರ್ದೇಶಕ ಡಾ.ಶಂಕ್ರಪ್ಪ ಮೈಲಾರಿ ಅವರು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗರ್ಭಿಣಿ ತಾಯಿಯ ತಪಾಸಣೆ ನಡೆಸಿದ ತಾಯಿ ಕಾರ್ಡ್ನಲ್ಲಿ ಎಲ್ಲಾ ವರದಿ ತುಂಬಿ ಹಾಗೂ ಕಬ್ಬಿಣಾಂಶ ಮಾತ್ರೆ, ಕ್ಯಾಲ್ಸಿಯಂ ಮಾತ್ರೆ ತಪ್ಪದೇ ತೆಗೆದುಕೊಳ್ಳಬೇಕು ಎಂದು ಗರ್ಭಿಣಯರಿಗೆ ಮನವರಿಕೆ ಮಾಡಬೇಕು. ರಕ್ತಹೀನತೆಯಿಂದ ಆಗುವ ಸಮಸ್ಯೆಗಳನ್ನು ಅವರಿಗೆ ತಿಳಿಸಿ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಹೇಳಿದರು.

ತೊಡಕಿನ ಗರ್ಭಿಣಿಯರಿಗೆ ಕಡ್ಡಾಯವಾಗಿ ಪಿ.ಎಮ್.ಎಸ್.ಎಮ್.ಎ ಹಾಗೂ ಇ.ಪಿ.ಎಮ್.ಎಸ್.ಎಮ್.ಎ ಕಾರ್ಯಕ್ರಮದಡಿ ಪ್ರಸೂತಿ ತಜ್ಞರಿಂದ ಹಾಗೂ ವೈದ್ಯಾಧಿಕಾರಿಗಳಿಂದ ಆರೋಗ್ಯ ತಪಾಸಣೆ ಮಾಡಬೇಕು. ಕ್ಷಯಮುಕ್ತ ಕರ್ನಾಟಕವನ್ನಾಗಿಸಲು ಪ್ರತಿಯೊಬ್ಬರೂ ಜಾಗುರಕರಾಗಿ ಸಂಘ ಸಂಸ್ಥೆಗಳ ಜೊತೆಗೆ ಕೈ ಜೋಡಿಸಿ ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದರು. ಕುಟುಂಬ ಕಲ್ಯಾಣ ಕಾರ್ಯಕ್ರಮದಡಿಯಲ್ಲಿ ಅರ್ಹ ದಂಪತಿಗಳಿಗೆ ಅಂತರ ವಿಧಾನಗಳನ್ನು ಅನುಸರಿಸುವ ಬಗ್ಗೆ ಜಾಗೃತಿ ಮೂಡಿಸಿಬೇಕು.

ಎನ್.ಸಿ.ಡಿ ಕಾರ್ಯಕ್ರಮದಡಿಯಲ್ಲಿ 30ವರ್ಷ ಮೇಲ್ಪಟ್ಟ ಎಲ್ಲರಿಗೂ ಎನ್.ಸಿ.ಡಿ ಪೋರ್ಟಲ್‌ನಲ್ಲಿ ದಾಖಲಿಸಿದ ಬಗ್ಗೆ ಹಾಗೂ ಆರೋಗ್ಯ ತಪಾಸಣೆ ನಡೆಸಿರುವ ಕುರಿತು ಚರ್ಚಿಸಿದ ಅವರು, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಡೆಂಗ್ಯೂ ಪ್ರಕರಣಗಳ ಬಗ್ಗೆ ಹಾಗೂ ಲಾರ್ವಾ ಸಮೀಕ್ಷೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಕುಷ್ಟರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಎಲ್ಲಾ ತಾಲ್ಲೂಕಗಳಲ್ಲಿ ಈಗಾಗಲೇ ಚಾಲ್ತಿಯಲ್ಲಿರುವ ಪ್ರಕರಣಗಳನ್ನು ಒಳಗೊಂಡು ಅಬ್ಸಲ್ಸ್ ಸಮೀಕ್ಷೆ ಮತ್ತು ಪ್ರತಿ ಗ್ರಾಮಗಳಲ್ಲಿ ಗುಂಪು ಸಭೆಗಳ ಮೂಲಕ ಪತ್ತೆ ಹಚ್ಚಬೇಕು. ಎಲ್.ಸಿ.ಡಿ.ಸಿ ಕಾರ್ಯಕ್ರಮವನ್ನ ನವೆಂಬರ್ 3 ರಿಂದ 19 ರವರೆಗೆ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಡಿಯಲ್ಲಿ ಆರೋಗ್ಯ ತಪಾಸಣೆ ಜೊತೆಗೆ ಟೆಲಿಮನಸ್ ಕುರಿತು ವ್ಯಾಪಕ ಪ್ರಚಾರ ನೀಡಬೇಕು ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಕಾರ್ಯಕ್ರಮಗಳ ಕುರಿತು ಶಾಲಾ ಕಾಲೇಜುಗಳಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಡಾ.ಎನ್.ಬಸರೆಡ್ಡಿ, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ.ಇಂದ್ರಾಣಿ ವಿ., ಜಿಲ್ಲಾ ಕುಷ್ಟರೋಗ ನಿರ್ಮೂಲನಾ ಅಧಿಕಾರಿ ಡಾ.ವೀರೇಂದ್ರಕುಮಾರ್, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್, ಡಿಎನ್‌ಒ ಗಿರೀಶ್ ಸೇರಿದಂತೆ ಎಲ್ಲಾ ತಾಲ್ಲೂಕ ಆರೋಗ್ಯ ಅಧಿಕಾರಿಗಳು, ಆಡಳಿತ ವೈದ್ಯಾಧಿಕಾರಿಗಳು, ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಹಾಗೂ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಇತರರು ಉಪಸ್ಥಿತರಿದ್ದರು.

# ಅ.14 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಗೆ ಬರುವ 11ಕೆವಿ ಫೀಡರ್‌ನಿಂದ ವಿದ್ಯುತ್ ಸರಬರಾಜಾಗುವ ಎಫ್–09 ರ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಅ.14 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ನೆಹರು ಕಾಲೋನಿ, ಎಸ್.ಎನ್. ಪೇಟೆ 1, 2, 4, 5, 6ನೇ ಅಡ್ಡ ರಸ್ತೆ, ಶಂಕರ್ ಕಾಲೋನಿ, ಡಿ.ಆರ್ ಗ್ರೌಂಡ್, ಕೂಲ್ ಕಾರ್ನರ್, ಡಬಲ್ ರಸ್ತೆ, ಕೋಲಾಂಚಾಲಂ ಕಾಂಪೌಂಡ್, ರಾಯಲ್ ಸರ್ಕಲ್, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್, ತಾಲ್ಲೂಕು ಕಚೇರಿ, ಡಿಸಿ ಕಚೇರಿ, ಸ್ಟೇಷನ್ ರೋಡ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹಾಗಾಗಿ ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಮಾಪಕವನ್ನು 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಲು ಜೆಸ್ಕಾಂನಿಂದ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಬಳ್ಳಾರಿ ನಗರ ಉಪವಿಭಾಗ–1 ಜೆಸ್ಕಾಂ ವ್ಯಾಪ್ತಿಯಲ್ಲಿ ಕಂಪನಿಯ ನಿಯಮಾನುಸಾರ ಎಲ್ಲಾ ಸ್ಥಾವರದಲ್ಲಿರುವ ಮೀಟರ್‌ಗಳನ್ನು ಆಪ್ಟಿಕಲ್ ಪ್ರೋಬ್ ಡಿವೈಸ್ ಮೂಲಕವೇ ರೀಡಿಂಗ್ ಮಾಡಬೇಕಾಗಿದ್ದು, ವಿದ್ಯುತ್ ಗ್ರಾಹಕರು ತಮ್ಮ ಸ್ಥಾವರದ ವಿದ್ಯುತ್ ಮಾಪಕವನ್ನು ಕಡ್ಡಾಯವಾಗಿ ನೆಲದಿಂದ 5 ಅಡಿ ಎತ್ತರದಲ್ಲಿ ಅಳವಡಿಸಿಕೊಳ್ಳಬೇಕು. ವಿದ್ಯುತ್ ಮಾಪಕಗಳು ಗೋಚರಿಸುವ ಹಾಗೂ ಓದಲು ಅನುಕೂಲವಾಗುವ ಸ್ಥಳದಲ್ಲಿ ಇರಬೇಕು. ಮೀಟರ್ ಓದುವವರಿಗೆ ಸ್ಥಳವಿಲ್ಲದಿದ್ದಲ್ಲಿ ಸ್ಥಳ ಒದಗಿಸುವ ಹಾಗೆ ಅ.25 ರೊಳಗಾಗಿ ಅಳವಡಿಸಿಕೊಳ್ಳಬೇಕು.

ಈ ನಿಯಮ ಪಾಲನೆ ಮಾಡದಿದ್ದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುವುದು ಎಂದು ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1 ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಬರಿ ಭಾಷೆ ಅಲ್ಲ, ಅದು ನಮ್ಮ ಬದುಕಿನ ಮೂಲ ಬೇರು: ಪ್ರೊ.ಕೃಷ್ಣೇಗೌಡರು




ಮಲ್ಲಮ್ಮ ನುಡಿ ವಾರ್ತೆ

ಬೀದರ್: ಕನ್ನಡ ಬರಿ ಭಾಷೆಗೆ ಸೀಮಿತವಾಗಿರದೆ ಅದು ನಮ್ಮ ಬದುಕಿನ ಮೂಲಬೇರಾಗಿದೆ ಎಂದು ನಿವೃತ್ತ ಪ್ರಾಚಾರ್ಯರು ಹಾಗೂ ಹಾಸ್ಯ ಕಲಾವಿದರಾದ ಪ್ರೊ.ಕೃಷ್ಣೇಗೌಡರು ತಿಳಿಸಿದರು.

ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಕರ್ನಾಟಕ ಸಾಹಿತ್ಯ ಸಂಘದ ಅವರಣದಲ್ಲಿ ಸಾಹಿತಿಗಳೊಂದಿಗೆ ಸಂವಾದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಕನ್ನಡವು ನಮ್ಮ ಸರ್ವಸ್ವ. ಅದರ ಪ್ರತಿಫಲ ಏನಾಗುತ್ತೊ ಅನ್ನುವುದಕ್ಕಿಂತ ಮುಖ್ಯವಾಗಿ ಅದನ್ನು ಮುಟ್ಟಿಬರಬೇಕು. ಅದು ನಮಗೆ ಎಲ್ಲವನ್ನು ಕೊಟ್ಟಿದೆ. ಕನ್ನಡ ಓದು ಹಾಗೂ ಚಿಂತನೆ ನಮ್ಮ ಬುದ್ಧಿ ಹಾಗೂ ಕಣ್ಣುಗಳಿಗೆ ಭಾವನೆ ದೊರಕಿಸಿದೆ. ತಾನು ವಿದೇಶಕ್ಕೂತೆರಳಿದರೂ ಕನ್ನಡವನ್ನು ಆಸ್ವಾದಿಸುವ ಸಂದರ್ಭ ಒದಗಿ ಬಂದಿರುವುದು ನಮ್ಮ ಪುಣ್ಯ. ಅದು ನಮ್ಮ ಭಾವಕೋಶ ಹಾಗೂ ಬುದ್ಧಿಕೋಶವನ್ನು ನಿಯುಕ್ತಿಗೊಳಿಸಿದೆ ಎಂದರು.

ಎಐ ತಂತ್ರಜ್ಞಾನದಿಂದ ಮನುಷ್ಯ ಸೋಮಾರಿಯಾದ: ಇಂದು ಎಐ ತಂತ್ರಜ್ಞಾನವು ಮನುಷ್ಯನಿಗೆ ಹಲವಾರು ಮಾರ್ಗೋಪಾಯಗಳನ್ನು ಕಲ್ಪಿಸಿಕೊಡುತ್ತಿರುವ ಹಿನ್ನೆಲೆ ಆತ ಸೋಮಾರಿಯಾಗುತ್ತಿರುವುದು ದರಂತವೇ ಸರಿ.

ನಮ್ಮ ಬುದ್ಧಿಮತ್ತೆಗೆ ಕೆಲಸ ಕೊಡದೇ ಎಲ್ಲವೂ ತಂತ್ರಜ್ಞಾನದ ಮೇಲೆ ನಿರ್ಭರವಾಗುತ್ತಿದ್ದೇವೆ. ಗೂಗಲ್ ಮ್ಯಾಪ್ ನಮಗೆ ಮರುಹು ಹೆಚ್ಚಿಸಿದೆ. ಅತಿಯಾದ ಮಯಬೈಲ್ ಬಳಿಕೆ ನಮ್ಮ ಮೊಬೈಲ್ ನಂಬರ್‌ಗಳನ್ನೆ ಮರೆತು ಹೋಗುವಂತೆ ಮಾಡಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಇಂದು ಸ್ವಂತದ ಐಷಾರಾಮಿ ವಾಹನಗಳಲ್ಲಿ ಓಡಾಡುತ್ತಿರುವುದರಿಂದ ಏಕಾಂಗಿತನ ಜಾಸ್ತಿಯಾಗಿ ಕಮ್ಯುನಿಕೆಶನ್ ಕಡಿಮೆಯಾಗಿದೆ. ಶಬ್ದರಹಿತ ಕಿಟಕಿಗಳು ನಿರ್ಮಿಸಿ ಹೊರಗಿನಿಂದ ಬರುವ ನಾಯಿ, ಬೆಕ್ಕು, ಪಕ್ಷಿ, ಹಾಗೂ ಇತರೆ ಪ್ರಾಣಿಗಳ ಶಬ್ದ ಕೇಳದೆ ಮೌನ ಅನುಭವಿಸುತ್ತಿರುವನು. ದೊಡ್ಡ ದೊಡ್ಡ ಬಂಗಲೆಗಳು ನಿರ್ಮಿಸಿ ಇಂದು ಸೂರ್ಯೋದಯ ಹಾಗೂ ಸೂರ್ಯಾಸ್ತವೇ ನೋಡದಂತಹ ಪರಿಸ್ಥಿತಿ ನಮ್ಮದಾಗಿದೆ ಎಂದರು.

ಸಾಹಿತಿಗಳಾದ ಪ್ರೊ.ಪ್ರಭುಶೆಟ್ಟಿ ಮೂಲಗೆ, ಶಾಂತಕುಮಾರ ಪಾಟೀಲ, ವೀರಭದ್ರಪ್ಪ ಉಪ್ಪಿನ್, ಮಲ್ಲಿಕಾರ್ಜುನ ಪ್ರಭಾ, ಜಗನ್ನಾಥ ಪಾರಾ, ದೇವಿದಾಸ ಜೋಷಿ, ಡಾ.ಸಾವಿತ್ರಿಬಾಯಿ ಹೆಬ್ಬಾಳೆ, ಶಾಂತಮ್ಮ ಬಲ್ಲೂರ್, ಅಶೋಕ ಕೋರೆ, ಶಿವಶರಣಪ್ಪ ಗಣೇಶಪುರ, ಪ್ರಕಾಶ ಕನ್ನಾಳೆ ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.

ಆರಂಭದಲ್ಲಿ ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೊ.ಜಗನ್ನಾಥ ಹೆಬ್ಬಾಳೆ ಪ್ರಾಸ್ತಾವಿಕ ಮಾತನಾಡಿದರು. ರಾಷ್ಟ್ರೀಯ ಜನಪದ ಬುಡಕಟ್ಟು ಹಾಗೂ ಕಲಾಪರಿಷತ್ ಪ್ರಧಾನ ಕಾರ್ಯದರ್ಶಿ ಡಾ.ರಾಜಕುಮಾರ ಹೆಬ್ಬಾಳೆ ಸ್ವಾಗತಿಸಿ, ಪ್ರಾಧ್ಯಾಪಕಿ ಡಾ.ಸುನಿತಾ ಕೂಡ್ಲಿಕರ್ ಕಾರ್ಯಕ್ರಮ

# ಕೌಶಲ್ಯ ಕಲಿಕೆಗೆ ಆದ್ಯತೆ ನೀಡಿ: ಪ್ರೊ.ಎನ್.ಎಂ.ಸಾಲಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.13–ಪ್ರಸ್ತುತ ದಿನಮಾನಗಳಲ್ಲಿ ಔದ್ಯೋಗಿಕ ರಂಗದಲ್ಲಿ ವಿಷಯ ಜ್ಞಾನದ ಜೊತೆಗೆ ಕೌಶಲ್ಯ ಆಧಾರಿತ ಕಲಿಕೆಗೆ ಒತ್ತು ನೀಡುವುದರಿಂದ ವಿದ್ಯಾರ್ಥಿಗಳು ತಮಗೆ ಬೇಕಾದ ಉದ್ಯೋಗ ಪಡೆಯಲು ಸಾಧ್ಯವಾಗುತ್ತದೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಪ್ರೊ.ಎನ್.ಎಂ. ಸಾಲಿ ಅವರು ಹೇಳಿದರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಅಂಬೇಡ್ಕರ್ ಸಭಾಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ 7 ದಿನಗಳ ಕಾಲ ಆಯೋಜಿಸಿರುವ ವಿದ್ಯಾರ್ಥಿಗಳ ಕಲಿಕಾ ಪುಷ್ಟೀಕರಣ ಕಾರ್ಯಕ್ರಮ ಹಾಗೂ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ಈ ಮಾದರಿ ಕಾರ್ಯಕ್ರಮಗಳು ಅವರ ನ್ಯೂನತೆ ಅರಿತುಕೊಳ್ಳಲು ಮತ್ತು ಸಾಮರ್ಥ್ಯ ವೃದ್ಧಿಸಿಕೊಳ್ಳಲು ಅನುಕೂಲವಾಗುತ್ತವೆ ಎಂದರು.

ಬೆಂಗಳೂರಿನ ಲಿವಿ ಲರ್ನಿಂಗ್ ಸೆಂಟರ್‌ನ ಸಂಸ್ಥಾಪಕರು ಹಾಗೂ ನಿರ್ದೇಶಕರಾದ ಪ್ರೊ.ವಿನೋದ್ ಕುಮಾರ್ ಮೂರ್ತಿ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿ, ಕೃತಕ ಬುದ್ಧಿಮತ್ತೆಯ ಕಾಲಮಾನದಲ್ಲಿ ಇಂದು ಅನೇಕ ನೌಕರರು ಕೌಶಲ್ಯಯುತ ಕಲಿಕೆ ಇಲ್ಲದೆ ತಮ್ಮ ಉದ್ಯೋಗ ಕಳೆದುಕೊಳ್ಳುತ್ತಿದ್ದಾರೆ. ಸಾಂಪ್ರದಾಯಿಕ ಕಲಿಕೆಯ ಜೊತೆಯಲ್ಲಿ ಕೌಶಲ್ಯಯುತ ಶಿಕ್ಷಣ ಇಂದಿನ ಆದ್ಯತೆಯಾಗಿದ್ದು, ವಿದ್ಯಾರ್ಥಿಗಳು ಇವುಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದ ಸಂಯೋಜಕರು ಹಾಗೂ ಶುದ್ಧ ವಿಜ್ಞಾನ ನಿಕಾಯದ ಡೀನರಾದ ಪ್ರೊ. ಉದಯ್ ಕುಮಾರ್ ಖಡ್ಕೆ ಅತಿಥಿಗಳನ್ನು ಸ್ವಾಗತಿಸಿ ಕಾರ್ಯಕ್ರಮದ 7 ದಿನಗಳ ರೂಪುರೇಷೆಗಳ ಹಾಗೂ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ವಿವರಿಸಿದರು. ಪ್ರಥಮ ದಿನದ ವಿಷಯದ ಭಾಗವಾಗಿ ವಿವಿಯ ವಾಣಿಜ್ಯಶಾಸ್ತ್ರ, ನಿರ್ವಹಣಾಶಾಸ್ತ್ರ, ಎಂಸಿಎ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಚೆನ್ನೈನ ಸಿಎಸ್‌ಐಆರ್–ಎನ್‌ಎಂಎಲ್ ಮದ್ರಾಸ್ ಕೇಂದ್ರದ ಮಾಜಿ ವಿಜ್ಞಾನಿಗಳಾದ ಪ್ರೊ.ಟಿ.ವಿ ವಿಜಯಕುಮಾರ್, ತಾಂತ್ರಿಕ ಗೋಷ್ಠಿಯ ಸಹಾಯಕ ವೃಂದದ ಪ್ರೊ.ಜೀಲನ್ ಬಾಷಾ, ಪ್ರೊ ಸದ್ಯೋಜಾತಪ್ಪ ಸೇರಿದಂತೆ ವಿವಿಯ ಎಲ್ಲ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರು, ಸಂಯೋಜಕರು ಹಾಗೂ ಬೋಧಕ–ಬೋಧಕೇತರ ಸಿಬ್ಬಂದಿಗಳು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ದೇಶಿ ಕ್ರೀಡೆಗಳಿಗೆ ಪ್ರಾಮುಖ್ಯತೆ ಅಗತ್ಯ-ಡಾ.ಚರಂತಿಮಠ

# ಬಾಗಲಕೋಟೆ ಮೆಡಿಕಲ್ ಕಾಲೇಜಿಗೆ ರಾಜ್ಯಮಟ್ಟದ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ಬಾಗಲಕೋಟೆ ನವನಗರದ ಮೆಡಿಕಲ್ ಕಾಲೇಜಿನ ಕ್ರೀಡಾಂಗಣದಲ್ಲಿ ಬೆಂಗಳೂರಿನ ರಾಜೀವಗಾಂಧಿ ವಿಶ್ವವಿದ್ಯಾಲಯದ ಅಡಿಯಲ್ಲಿ ನಡೆದ ಎರಡು ದಿನಗಳ ರಾಜ್ಯಮಟ್ಟದ ಹಾಕಿ ಕ್ರೀಡಾಕೂಟದಲ್ಲಿ ಬಿವಿವಿ ಸಂಘದ ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಹಾಕಿ ತಂಡ ಪ್ರಥಮ ಸ್ಥಾನ ಪಡೆಯಿತು.

ಸಮಾರೋಪ ಸಮಾರಂಭದಲ್ಲಿ ವಿಜೇತ ಹಾಕಿ ಕ್ರೀಡಾ ಪಟುಗಳಿಗೆ ಬಹುಮಾನ ವಿತರಿಸಿ ಮಾತನಾಡಿದ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ, ಇಂದಿನ ಯುವ ಜನಾಂಗದಲ್ಲಿ ಕ್ರೀಡಾಸಕ್ತಿ ಕುಸಿಯುತ್ತಿರುವ ಸಂದರ್ಭದಲ್ಲಿ ರಾಜ್ಯ ಮಟ್ಟದ ಹಾಕಿ ಪಂದ್ಯಾವಳಿಯನ್ನು ಬಾಗಲಕೋಟೆಯ ಎಸ್. ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನಲ್ಲಿ ಆಯೋಜಿಸಿದ್ದು ಶ್ಲಾಘನೀಯ. ಇಂತಹ ಕ್ರೀಡೆಗಳನ್ನು ಮೇಲಿಂದ ಮೇಲೆ ಆಯೋಜಿಸುವುದರಿಂದ ದೇಶಿ ಕ್ರೀಡೆಗಳಿಗೆ ಪ್ರಾಮುಖ್ಯತೆ ದೊರೆಯುತ್ತದೆ ಎಂದರು.

ಪಂದ್ಯಾವಳಿಯಲ್ಲಿ ರಾಜ್ಯದ ವಿವಿಧ ಕಾಲೇಜುಗಳಿಂದ ಒಟ್ಟು 11 ತಂಡಗಳು ಪಾಲ್ಗೊಂಡಿದ್ದವು. ಇದರಲ್ಲಿ ಬಾಗಲಕೋಟೆಯ ಎಸ್. ಎನ್. ಮೆಡಿಕಲ್ ಕಾಲೇಜಿನ ತಂಡಕ್ಕೆ ಪ್ರಥಮ ಬಹುಮಾನ ಲಭಿಸಿತು. ದ್ವಿತೀಯ ಬಹುಮಾನ ಬೆಂಗಳೂರಿನ ಸೇಂಟ್ ಜಾನ್ಸ್ ಮೆಡಿಕಲ್ ಕಾಲೇಜು ತಂಡ ಪಡೆಯಿತು. ತೃತೀಯ ಬಹುಮಾನ ಬೆಂಗಳೂರಿನ ಸಪ್ತಗಿರಿ ಮೆಡಿಕಲ್ ಕಾಲೇಜು ತಂಡ ಪಡೆದುಕೊಂಡಿತು. ಆಯ್ಕೆ ಸಮಿತಿ ಸದಸ್ಯರು ಹಾಗೂ ವೀಕ್ಷಕರಾಗಿ ಬೆಂಗಳೂರಿನ ರಾಜೀವ ಗಾಂಧಿ ವಿಶ್ವವಿದ್ಯಾಲಯದ ಗೋವಿಂದಕುಮಾರ ಆಗಮಿಸಿದ್ದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಮೆಡಿಕಲ್ ಕಾಲೇಜ್ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಯಳಮಲಿ, ಮೆಡಿಕಲ್ ಕಾಲೇಜಿನ ಕ್ರೀಡಾ ಸಂಯೋಜಕ ಡಾ.ಸಂತೋಷ ಶೀಲವಂತ, ವಿವಿಧ ವಿಭಾಗಗಳ ಮುಖ್ಯಸ್ಥರಾದ ಡಾ.ಸಿ.ಎಸ್ ಹಿರೇಮಠ, ಡಾ.ಸಂಜೀವ ಕೊಳಗಿ, ಡಾ.ಅಶೋಕ ಡೋರ್ಲೆ ಹಾಗೂ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪಂಚಮಸಾಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ತಾಲೂಕಿನ ಶಿರೂರ ಪಟ್ಟಣದ ಟಿ.ಎಂ.ಭಗವತಿ ಶಿಕ್ಷಣ ಸಂಸ್ಥೆ ಹಾಗೂ ತುಂಗಳದ ಸಿಂಧೂರ ಪ್ರತಿಷ್ಠಾನ ಸಹಯೋಗದಲ್ಲಿ ಅ.27 ರಂದು ಬಾಗಲಕೋಟೆಯ ವಿದ್ಯಾಗಿರಿ ಸಾಯಿ ಮಂದಿರದಲ್ಲಿ ಬಾಗಲಕೋಟೆ ಜಿಲ್ಲೆಯ ಪಂಚಮಸಾಲಿ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

2024-25 ನೇ ಸಾಲಿನಲ್ಲಿ ಪಿಯುಸಿ ದ್ವಿತೀಯ ಹಾಗೂ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರತಿಶತ 90 ಕ್ಕಿಂತ ಹೆಚ್ಚು ಅಂಕ ಗಳಿಸಿದ ಜಿಲ್ಲೆಯ ಪಂಚಮಸಾಲಿ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಲಾಗುವುದು. ಅರ್ಹ ವಿದ್ಯಾರ್ಥಿಗಳು ಪೋಟೋ, ಆಧಾರ ಕಾರ್ಡ ಹಾಗೂ ಅಂಕ ಪಟ್ಟಿಯ ಪ್ರತಿಗಳೊಂದಿಗೆ ಅಕ್ಟೋಬರ್ 24 ರೊಳಗೆ ಅಂತ್ಯೋದಯ ಸೌಹಾರ್ದ ಪತ್ತಿನ ಸಹಕಾರಿ ಸಂಘ, ಕೈಗಾರಿಕಾ ವಸಾಹತು, ವಿದ್ಯಾಗಿರಿ ಬಾಗಲಕೋಟೆ-587102 ವಿಳಾಸಕ್ಕೆ ಕಳುಹಿಸುವಂತೆ ಶ್ರೀಶೈಲ ಕರಿಶಂಕರಿ(ಮೊ.9611484456) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೋಟರಿ ವತಿಯಿಂದ ಕಣ್ಣು ತಪಾಸಣೆ ಶಿಬಿರ: ಹೆರಕಲ್




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ರೋಟರಿ ಸಂಸ್ಥೆಯ ಅಡಿಯಲ್ಲಿ ಬಾಗಲಕೋಟೆಯ ಡಾ.ಮಾಸೂರಕರ ಅವರ ಕಣ್ಣಿನ ಆಸ್ಪತ್ರೆಯ ಆಶ್ರಯದಲ್ಲಿ ಬಡವರಿಗೆ ಉಚಿತವಾಗಿ ಕಣ್ಣು ತಪಾಸಣೆ ಶಿಬಿರ ಆಯೋಜಿಸಲಾಗುವುದು. ಶೇ 50ರ ರಿಯಾಯಿತಿ ದರದಲ್ಲಿ ಕನ್ನಡಕ ವಿತರಿಸಲಾಗುವುದು. ರೋಟರಿ ಸಂಸ್ಥೆ ಸೂಚಿಸುವ ಕಡೆ ಶಿಬಿರವನ್ನು ಆಯೋಜಿಸಲಾಗುವುದು ಎಂದು ರೋಟರಿ ಜಿಲ್ಲೆ 3170ದ ಸಹಾಯಕ ಗವರ್ನರ ನಾರಾಯಣ ಹೆರಕಲ್ ಹೇಳಿದರು. ಜಿಲ್ಲೆಯ ಜಮಖಂಡಿಯ ವಿಜಯಪುರ ರಸ್ತೆಯ ಹೊರವಲಯದಲ್ಲಿರುವ ರೋಟರಿ ಭವನದಲ್ಲಿ ರೋಟರಿ ಸಂಸ್ಥೆಯ ಆಶ್ರಯದಲ್ಲಿ ನಡೆದ ವಾರದ ಸಭೆಯ ಮುಖ್ಯ ಅತಿಥಿ-ಯಾಗಿ ಅವರು ಮಾತನಾಡಿದರು.

ಪಲ್ಸ್ ಪೋಲಿಯೋ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ವಿಶೇಷ ಉಪನ್ಯಾಸ ವ್ಯವಸ್ಥೆ ಮಾಡಬೇಕು. ಮಳೆ ನೀರು ಕೊಯ್ಲು, ಚೆಕ್ ಡ್ಯಾಂ ನಿರ್ಮಾಣದ ಮಹತ್ವ ಕುರಿತು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ, ಶಾಲಾ-ಕಾಲೇಜು ಮಕ್ಕಳಿಗೆ ಗಣಕಯಂತ್ರ ಮತ್ತು ಸೈಕಲ್ ವಿತರಿಸುವಂತ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವಂತೆ ಹೆರಕಲ್ ಸಲಹೆ ನೀಡಿ, ರೋಟರಿ ಜಿಲ್ಲೆ ಗವರ್ನರ ಆಗುವ ಅರ್ಹತೆವುಳ್ಳ ವ್ಯಕ್ತಿಗಳನ್ನು ಗುರುತಿಸಿ ರೋಟರಿ ಸದಸ್ಯರನ್ನಾಗಿ ಮಾಡಿಕೊಳ್ಳಬೇಕು. ಮುಂಬರುವ ದಿನಗಳಲ್ಲಿ ಹೊಸ ಮತ್ತು ವಿನೂತನವಾದ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಸಲಹೆ ನೀಡಿದರು.

ಜಮಖಂಡಿ ರೋಟರಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಕೋವಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ರೋಟರಿ ಸಂಸ್ಥೆ ನಿರ್ಮಿಸುತ್ತಿರುವ ಅಡುಗೆ ಕೋಣೆಯ ಉದ್ಘಾಟನೆಗೆ ರೋಟರಿ ಗವರ್ನರ ಅವರನ್ನು ಆಹ್ವಾನಿಸಲು ಹಾಗೂ ರೋಟರಿ ಜಿಲ್ಲಾ ಮಟ್ಟದ ಕಾರ್ಯಕ್ರಮಗಳನ್ನು ಜಮಖಂಡಿಗೆ ವಹಿಸಿಕೊಡಲು ಸಹಾಯಕ ಗವರ್ನರ ಅವರಲ್ಲಿ ಮನವಿ ಮಾಡಿದರು. ಖಜಾಂಚಿ ಶಂಕರ ತೇಲಿ ರೋಟರಿ ಸಂಸ್ಥೆಯ ಫೋರ್ ವೇ ಟೆಸ್ಟ್ ಓದಿದರು. ಕಾರ್ಯದರ್ಶಿ ಎಂ.ಎಚ್.ಕಡ್ಲಿಮಟ್ಟಿ

# ಕಮತಗಿಯಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ಆರ್‌ಎಸ್‌ಎಸ್ ಶತಮಾನೋತ್ಸವ ಮತ್ತು ವಿಜಯದಶಮಿ ಹಬ್ಬದ ಅಂಗವಾಗಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ವತಿಯಿಂದ ಶನಿವಾರ ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿ ಪಟ್ಟಣದಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ವಿಜೃಂಭಣೆಯಿಂದ ಜರುಗಿತು.

ಶಾಖಾಂಬರಿ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಿಂದ ಆರಂಭವಾದ ಪಥಸಂಚಲನ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಪುನ: ಶಾಖಾಂಬರಿ ಪದವಿ ಪೂರ್ವ ಮಹಾವಿದ್ಯಾಲಯದ ಆವರಣಕ್ಕೆ ಆಗಮಿಸಿತು. ಪಥ ಸಂಚಲನ ಹಿನ್ನಲೆಯಲ್ಲಿ ಪಟ್ಟಣವು ಮದುವಣಗಿತ್ತಿಯಂತೆ ಶೃಂಗಾರಗೊಂಡಿತ್ತು. ಬೀದಿ ಬೀದಿಗಳಲ್ಲಿ ಕೇಸರಿ ಬಾವುಟಗಳು ರಾರಾಜಿಸುತ್ತಿದ್ದವು. ರಸ್ತೆ, ಮನೆಗಳ ಮುಂದೆ ರಂಗೋಲಿಯ ಚಿತ್ತಾರ ಗಮನಸೆಳೆದವು. ಕೇಸರಿ ಕಮಾನ್‌ಗಳು ಹಬ್ಬದ ವಾತಾವರಣ ಸೃಷ್ಠಿಸಿತು.

ಪಥ ಸಂಚಲನದ ವೇಳೆ ಚಿಕ್ಕ ಚಿಕ್ಕ ಮಕ್ಕಳು ದೇಶಭಕ್ತರು, ಧಾರ್ಮಿಕ ಮುಖಂಡರು, ರಾಜ ಮಹಾರಾಜರು, ರಾಣಿಯರ ವೇಷಭೂಷಣ ಧರಿಸಿ, ಗಣವೇಶಧಾರಿಗಳಿಗೆ ಪುಷ್ಪ ಚಿಂಚನಗೈಯುವುದು ಗಮನಸೆಳೆಯಿತು. ಪಥ ಸಂಚಲನ ಆಗಮಿಸುತ್ತಿದ್ದಂತೆ ರಸ್ತೆ ಪಕ್ಕದಲ್ಲಿ ನಿಂತಿದ್ದ ಸಾರ್ವಜನಿಕರು ಭಾರತ್ ಮಾತಾಕೀಜೈ, ಶಿವಾಜಿ ಘೋಷಣೆಗಳು ಬೀದಿ ಪ್ರತಿಧ್ವನಿಸಿದವು.

ಅಮೀನಗಡ ಪೊಲೀಸ್ ಠಾಣೆ ಸಿಬ್ಬಂದಿ ಪಥಸಂಚಲನದ ಸುರಕ್ಷತೆಗೆ ಸೂಕ್ತ ಬಂದೋಬಸ್ತ್ ಒದಗಿಸಿದ್ದು, ಸಾರ್ವಜನಿಕರು ಹಾಗೂ ಸ್ವಯಂಸೇವಕರ ಭದ್ರತೆಗೆ ವಿಶೇಷ ಕಾಳಜಿ ವಹಿಸಲಾಯಿತು.

# ಮಹಿಳೆಯರಿಂದ ದೇಶದ ಆರ್ಥಿಕತೆ ಸುಧಾರಣೆ: ಕಾಮತ್



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ಭಾರತದಲ್ಲಿ ಗೃಹಣಿಯರು ಕುಟುಂಬದ ಆರ್ಥಿಕತೆಯನ್ನು ಕಟ್ಟುವಲ್ಲಿ ಯಶಸ್ವಿಯಾಗಿದ್ದು, ಮುಂದಿನ 50ರಿಂದ 100 ವರ್ಷಗಳಲ್ಲಿ ಮಹಿಳೆಯರಿಂದಲೇ ಭಾರತದ ಆರ್ಥಿಕತೆ ಸುಧಾರಿಸಲಿದೆ. ಎಂದು ಜ್ಯೋತಿ ಲ್ಯಾಬ್ಸ್ ಲಿಮಿಟೆಡ್ ನಿಕಟಪೂರ್ವ ಜಂಟಿ ನಿರ್ವಹಣಾ ನಿರ್ದೇಶಕರು ಹಾಗೂ ಯುಕೆ ಮತ್ತು ಕಂಪನಿ ಸಂಸ್ಥಾಪಕ ಕೆ,ಉಲ್ಲಾಸ ಕಾಮತ್ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಬಸವೇಶ್ವರ ಇಂಜನೀಯರಿಂಗ್ ಕಾಲೇಜು ಸಭಾಭವನದಲ್ಲಿ ಸೋಮವಾರ ನಡೆದ ಬಿ.ವಿ.ವಿ.ಎಸ್ ಇನ್ಸ್ಟಿಟ್ಯೂಟ್ ಮ್ಯಾನೇಜಮೆಂಟ್ ಸ್ಟಡೀಸ್ ಪದವಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಎಂಬಿಎ ಸ್ನಾತಕೋತ್ತರ ಶಿಕ್ಷಣ ಮುಗಿಸಿ ಪದವಿ ಪಡೆಯುವುದು ಮುಖ್ಯ. ಆದರೆ ಜೀವನದಲ್ಲಿ ನಿತ್ಯ ಓದು, ಪರೀಕ್ಷೆಗಳು ನಿರಂತರ. ಇಂದಿನ ಮಕ್ಕಳಿಗೆ ಮೊಬೈಲ ಮುಖ್ಯವಾದರೂ, ಅದರ ಮೇಲೆ ಅವಲಂಬಿತವಾಗಬಾರದು. ಜ್ಞಾನಕ್ಕಾಗಿ ಬಳಸಿ, ಸ್ಟೆಟಸ್.ಸೆಲ್ಫಿ, ರೀಲ್ಸಗಳಿಂದ ಯಾವುದೆ ಪ್ರಯೋಜನವಿಲ್ಲ ಎಂದರು.

ಕರ್ನಾಟಕದಲ್ಲಿ ಪ್ರತಿವರ್ಷ 21ಲಕ್ಷ ಪದವೀಧರರು ಔದ್ಯೋಗಿಕ ಕ್ಷೇತ್ರಕ್ಕೆ ಬರುತ್ತಾರೆ, ಸುಮಾರು 20ಲಕ್ಷ ಉದ್ಯೋಗಳು ಸೃಷ್ಟಿಯಾಗುತ್ತಲೇ ಇವೆ, ಈ ಉದ್ಯೋಗಳು ನಮಗೆ ಸಿಗಬೇಕಾದರೆ ನಾವುಗಳು ಉದ್ಯೋಗ ಸಂದರ್ಶನದಲ್ಲಿ ಕೌಶಲ್ಯಗಳನ್ನು ಪ್ರದರ್ಶಿಸಬೇಕಾಗುತ್ತದೆ ಎಂದು ಕಾಮತ್ ಹೇಳಿದರು.

ಗೌರವ ಅತಿಥಿಗಳಾಗಿ ಆಗಮಿಸಿದ್ದ ಬಾಗಲಕೋಟೆ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ, ಆನಂದ ದೇಶಪಾಂಡೆ ಮಾತನಾಡಿ, ಬಿ.ವಿ.ವಿ.ಸಂಘದ ಎಲ್ಲ ಶಿಕ್ಷಣ ಸಂಸ್ಥೆಗಳಲ್ಲಿ ಉತ್ತಮ ಶಿಕ್ಷಕರ ತಂಡ ಇದೆ, ಒಳ್ಳೆಯ ಮೂಲಭೂತ ಸೌಕರ್ಯವಿದೆ, ಒಳ್ಳೆಯ ವಿದ್ಯಾರ್ಥಿಗಳಿದ್ದಾರೆ. ರಾಜ್ಯಕ್ಕೆ ಇದೊಂದು ಮಾದರಿ ಸಂಸ್ಥೆಯಾಗಿದೆ, ಶಿಕ್ಷಣದ ಜೊತೆ-ಗೆ ವಿದ್ಯಾರ್ಥಿಗಳಿಗೆ ಬದುಕಿನ ಅನುಭವದ ಮೌಲ್ಯಗಳ ಅರಿವು ಮುಖ್ಯವಾಗಿವೆ, ಬಾಗಲಕೋಟೆ ವಿಶ್ವವಿದ್ಯಾಲಯದಿಂದ ಉತ್ತಮ ಶೈಕ್ಷಣಿಕ ಕ್ಷೇತ್ರ ಬೆಳವಣಿಗೆಯಲ್ಲಿ ತನ್ನದೆಯಾದ ಪಾತ್ರವನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಮಾತನಾಡಿ, ಈ ಭಾಗದ ವಿದ್ಯಾರ್ಥಿಗಳಿಗೆ ಅನಕೂಲವಾಗಿ ವ್ಯಾಪಾರ ವ್ಯವಹಾರ ಹಾಗೂ ಮಾರ್ಕೆಟ ಕ್ಷೇತ್ರ ಬೆಳೆಯಬೇಕೆಂಬ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಆಶಯದಂತೆ ಎಂಬಿಎ ಉತ್ತಮ ವಿದ್ಯಾರ್ಥಿಗಳನ್ನು ನಾಡಿಗೆ ನೀಡುತ್ತಿದೆ ಎಂದರು. ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಬಾವಿ, ನಿರ್ದೇಶಕ ಡಾ.ಪ್ರಕಾಶ ವಡವಡಗಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಇನ್ಸ್ಟಿಟ್ಯೂಟ್ ಮ್ಯಾನೇಜಮೆಂಟ್ ಸ್ಟಡೀಸ್‌ನ ಸುಮಾರ 60 ಜನ ಪದವಿದರರಿಗೆ ಪದವಿ ಪ್ರದಾನ ಮಾಡಲಾಯಿತು.

ಶ್ರೀನಿಧಿ ಸಂಗಡಿಗರಿಂದ ಪ್ರಾರ್ಥನೆ. ನಿರ್ದೇಶಕ ಡಾ.ಪ್ರಕಾಶ ವಡವಡಗಿ ಸ್ವಾಗತಿಸಿದರು. ಡಾ.ಪವನ ಬೆನಕಟ್ಟಿ ಕಾಲೇಜು ನಡೆದ ಬಂದ ದಾ-ರಿಯ ಬಗ್ಗೆ ವಿವರಣೆ ನೀಡಿದರು. ಡಾ.ಅಮರೇಶ ಚರಂತಿಮಠ ಹಾಗೂ ಸಂತೋಷ ಕುಮಾರ ನಿರೂಪಿಸಿದರು.

# ಪಿಎಂ ಧನ್-ಧಾನ್ಯ ಕೃಷಿ ಯೋಜನೆಗಳಿಗೆ ಚಾಲನೆ ಕಾರ್ಯಕ್ರಮ ವೀಕ್ಷಿಸಿದ ರಾಜ್ಯಸಭಾ ಸದಸ್ಯ ಭಾಂಡಗೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.13-ಭಾರತ ಸರ್ಕಾರದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಹಾಗೂ ಗ್ರಾಮೀಣ ಅಭಿವೃದ್ಧಿ ಸಚಿವಾಲಯದಿಂದ 2025 ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಧನ್-ಧಾನ್ಯ ಕೃಷಿ ಯೋಜನೆ ಮತ್ತು ದ್ವಿದಳ ಧಾನ್ಯಗಳ ಸ್ವಾವಲಂಬನೆ ಮಿಷನ್ ಶುಭಾರಂಭ ಮತ್ತು ಕೃಷಿ ಮೂಲ ಸೌಕರ್ಯ ನಿಧಿ, ಪಶು ಸಂಗೋಪನೆ, ಮೀನುಗಾರಿಕೆ ಮತ್ತು ಆಹಾರ ಸಂಸ್ಕರಣ ವಲಯದ 2100 ಕ್ಕೂ ಹೆಚ್ಚು ಯೋಜನೆಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ಕಾರ್ಯಕ್ರಮದ ನೇರ ಪ್ರಸಾರವನ್ನು ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ವೀಕ್ಷಣೆ ಮಾಡಿ ಜಿಲ್ಲೆಯಲ್ಲಿ ಚಾಲನೆ ನೀಡಿದರು.

ಕೃಷಿ ವಿಜ್ಞಾನ ಕೇಂದ್ರದಲ್ಲಿ ಆಯೋಜಿಸಲಾದ ಪಿಎಂ ಧನ್-ಧಾನ್ಯ ಕೃಷಿ ಯೋಜನೆಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ನೇರ ಪ್ರಸಾರದಲ್ಲಿ ಮಾತನಾಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಈ ಯೋಜನೆಯು ಕೃಷಿ ಕ್ಷೇತ್ರದಲ್ಲಿ ಸಮಗ್ರ ಅಭಿವೃದ್ಧಿಯನ್ನು ಹೊಂದುವ ಗುರಿಯೊಂದಿದ್ದು, ರೈತರಿಗೆ ಆರ್ಥಿಕ ಬಲ, ಉತ್ಪಾದಕತೆ, ಸಂಗ್ರಹಣಾ ಸೌಲಭ್ಯ ಮತ್ತು ಮಾರುಕಟ್ಟೆ ಸಂಪರ್ಕವನ್ನು ಬಲಪಡಿಸುವುದು ಈ ಯೋಜನೆಯ ಮುಖ್ಯ ಗು-ರಿಯಾಗಿದೆ ಎಂದರು.

ಕೃಷಿ ಮೂಲ ಸೌಕರ್ಯ ನಿಧಿ ಯೋಜನೆಯಲ್ಲಿ ರೈತರ ಉತ್ಪಾದನಾ ವ್ಯವಸ್ಥೆಗೆ ಅಗತ್ಯವಾದ ಗೋದಾಮು, ಸಂಸ್ಕರಣಾ ಘಟಕಗಳು ಮತ್ತು ಮಾರುಕಟ್ಟೆ ಮೂಲ ಸೌಕರ್ಯ ನಿರ್ಮಿಸಲು ಸಾಲ ಸೌಲಭ್ಯ ಒದಗಿಸುವ ಗುರಿ ಹೊಂದಿದೆ. ಈ ನಿಧಿಯಡಿ ಪ್ರಾರಂಭವಾಗುವ 2100 ಕ್ಕೂ ಹೆಚ್ಚು ಯೋಜನೆಗಳು ಗ್ರಾಮೀಣ ಪ್ರದೇಶದಲ್ಲಿ ಕೃಷಿಯ ಮೌಲ್ಯ ಬಲಪಡಿಸುತ್ತವೆ. ಪಶುಸಂಗೋಪನೆ, ಮೀನುಗಾರಿಕೆ ಮತ್ತು ಆಹಾರ ಸಂಸ್ಕರಣಾ ವಲಯಗಳನ್ನು ಒಳಗೊಂಡಂತೆ ಸಮಗ್ರ ಕೃಷಿಯ ಅಭಿವೃದ್ಧಿಯು ಈ ಯೋಜನೆಯ ಉದ್ದೇಶವಾಗಿದೆ ಎಂದು ರೈತರಿಗೆ ತಿಳಿಸಿದರು.

ಕಾರ್ಯಕ್ರಮ ವೀಕ್ಷಣೆ ನಂತರ ಮಾತನಾಡಿದ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಆಧುನಿಕ ವಿಜ್ಞಾನ ಆಧಾರಿತ ತಂತ್ರಜ್ಞಾನಗಳನ್ನು ಕೃಷಿಯಲ್ಲಿ ಅಳವಡಿಸಿಕೊಳ್ಳುವ ಅಗತ್ಯತೆಯನ್ನು ರೈತರಿಗೆ ಒತ್ತಿ ಹೇಳಿದರು. ನವೀನ ಕೃಷಿ ವಿಧಾನಗಳನ್ನು ಅನುಸರಿಸುವ ಮೂಲಕ ಉತ್ಪಾದನೆ ಹಾಗೂ ಆದಾಯವನ್ನು ಹೆಚ್ಚಿಸಬಹುದು ಎಂಬ ಸಲಹೆಯನ್ನು ರೈತರಿಗೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಮಹಾಂತೇಶ್ ಹಟ್ಟಿ ಮತ್ತು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆಣ್ಣವರ್ ಅವರು ಮುಖ್ಯ ಅತಿಥಿಗಳಾಗಿ ನೇರ ಪ್ರಸಾರದ ಕಾರ್ಯಕ್ರಮವನ್ನು ವಿಕ್ಷೀಸಿ ರೈತರನ್ನು ಪ್ರೋತ್ಸಾಹಿಸಿದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ.ಗುರುದತ್ತ ಹೆಗಡೆ ಪ್ರಾಸ್ತಾವಿಕವಾಗಿ ಮಾಹಿತಿಯನ್ನು ನೀಡಿ ನೇರ ಪ್ರಸಾರದ ಮಾಹಿತಿಯನ್ನು ಕನ್ನಡದಲ್ಲಿ ಅನುವಾದ ಮಾಡಿ ರೈತರಿಗೆ ತಿಳಿಸಿದರು. ಸುಮಾರು 150ಕ್ಕೂ ಹೆಚ್ಚು ರೈತರು ಕೇಂದ್ರದಲ್ಲಿ ನೇರ ಪ್ರಸಾರ ವೀಕ್ಷಿಸಿದರು ಹಾಗೂ 500ಕ್ಕೂ ಹೆಚ್ಚು ರೈತರು ಮತ್ತು ರೈತ ಮಹಿಳೆಯರು ವಾಟ್ಸಪ್ ಲಿಂಕ್‌ಗಳ ಮೂಲಕ ಆನ್‌ಲೈನ್‌ನಲ್ಲಿ ಪ್ರಧಾನಮಂತ್ರಿಗಳ ಕಾರ್ಯಕ್ರಮವನ್ನು ವೀಕ್ಷಿಸಿದರು.

ಈ ಸಂದರ್ಭದಲ್ಲಿ ಮುಂಚೂಣಿ ಪ್ರಾತ್ಯಕ್ಷತೆಯಡಿಯಲ್ಲಿ ಅತ್ಯಾವಶ್ಯಕ ಕೃಷಿ ಪರಿಕರಗಳ ವಿತರಣೆ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಡಾ. ವೆಂಕಣ್ಣ ಬಳಗಾನೂರ, ಡಾ. ಭವ್ಯ ಎಂ. ಆರ್, ಡಾ. ರಮಿತಾ ಬಿ.ಇ., ಡಾ. ಸಿದ್ದಪ್ಪ ಅಂಗಡಿ ಮತ್ತು ಡಾ. ಬಸವರಾಜ ನಾಗಲೀಕರ ಸೇರಿದಂತೆ ಕೃಷಿ ವಿಜ್ಞಾನ ಕೇಂದ್ರದ ಎಲ್ಲಾ ವಿಜ್ಞಾನಿಗಳು ಉಪಸ್ಥಿತರಿದ್ದರು.

# ನೂತನ ನಿರ್ದೇಶಕ ಮಲ್ಲನಗೌಡ ಬಿರಾದಾರಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಮುದ್ದೇಬಿಹಾಳ ತಾಲೂಕ ಹುಟ್ಟುವಳಿ ಮಾರಾಟ ಸಹಕಾರ ಸಂಘದ ನಿರ್ದೇಶಕ ಮಂಡಳಿಗೆ ನಡೆದ ಚುನಾವಣೆಯಲ್ಲಿ ಕೊಡಗಾನೂರ ಗ್ರಾಮದ ಮಲ್ಲನಗೌಡ ನಿಂಗನಗೌಡ ಬಿರಾದಾರ ಇವರು ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಅವರನ್ನು ಗೆಳೆಯರ ಬಳಗದ ವತಿಯಿಂದ ಸೋಮವಾರ ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲನಗೌಡ ಬಿರಾದಾರ ಅವರು ಎಲ್ಲರ ಸಹಕಾರದೊಂದಿಗೆ ನಾನು ಅವಿರೋಧವಾಗಿ ಆಯ್ಕೆಯಾಗಲು ಸಾಧ್ಯವಾಗಿದೆ ನನಗೆ ಬೆಂಬಲಿಸಿದ ಎಲ್ಲರನ್ನು ಹಾಗೂ ಪ್ರೀತಿಯಿಂದ ನನ್ನನ್ನು ಸನ್ಮಾನಿಸಿದ ನಿಮ್ಮನ್ನು ಅಭಿನಂದಿಸುತ್ತೇನೆ ಎಂದರು. ಈ ಸಮಯದಲ್ಲಿ ಮಿತ್ರ ಬಳಗದವರಾದ ಶಂಕರಗೌಡ ಕಂತಲಗಾಂವಿ, ಸಂಗನಗೌಡ ಹೆಗರೆಡ್ಡಿ, ಪ್ರಭುಗೌಡ ನಾಡಗೌಡ, ಸಂಗನಗೌಡ ಅಸ್ಕಿ, ಬಸನಗೌಡ ನಾಡಗೌಡ ಮಲ್ಲನಗೌಡ ಬಿರಾದಾರ ಶಾಂತಗೌಡ ಬಿರಾದಾರ, ಮಲ್ಲನಗೌಡ ಯಾದಗಿರಿ, ಬಸನಗೌಡ ನಾಡಗೌಡ, ಪ್ರವೀಣ ರೆಡ್ಡಿ, ಎಚ್.ಬಿ.ಬಿರಾದಾರ, ಅಪ್ಪು ಆನೇಸೂರ, ತಿಪ್ಪಣ್ಣ ಅದೋನಿ ಮತ್ತಿತರರು ಇದ್ದರು.

# ಖ್ಯಾತ ರಂಗ ಕಲಾವಿದ ರಾಜು ತಾಳಿಕೋಟಿ ಇನ್ನಿಲ್ಲ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ತಾಳಿಕೋಟಿ ಪಟ್ಟಣದ ನಿವಾಸಿ ಉತ್ತರ ಕರ್ನಾಟಕದ ಜನಪ್ರಿಯ ರಂಗ ಕಲಾವಿದ ಚಲನಚಿತ್ರ ಹಾಸ್ಯ ನಟ ಧಾರವಾಡ ರಂಗಾಯಣದ ನಿರ್ದೇಶಕ ರಾಜು ತಾಳಿಕೋಟಿ ಅವರು ಹೃದಯಾಘಾತದಿಂದ ಸೋಮವಾರ ನಿಧನರಾಗಿದ್ದಾರೆ. ಹೃದಯಸಂಬಂಧಿಸಿದ ಕಾಯಿಲೆಯಿಂದ ಬಳುತ್ತಿದ್ದ ಅವರನ್ನು ಉಡುಪಿಯ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಕೊನೆಯುಸಿರೆಳೆದಿದ್ದಾರೆ. ರಾಜು ತಾಳಿಕೋಟಿ ಅವರು ಮೂಲತ ತಾಳಿಕೋಟಿ ಪಟ್ಟಣದವರಾಗಿದ್ದು ಪ್ರಸಕ್ತ ಸಿಂದಗಿ ತಾಲೂಕಿನ ಚಿಕ್ಕ ಸಿಂದಗಿ ಗ್ರಾಮದಲ್ಲಿ ವಾಸಿಸುತ್ತಿದ್ದರು. ಅವರ ಮೂಲ ಹೆಸರು ರಾಜೇಸಾಬ್ ಮಕ್ತೂಮಸಾಬ ತಾಳಿಕೋಟಿ. ಅವರು



ಶ್ರೀ ಖಾಸ್ಗತೇಶ್ವರ ನಾಟಕ ಮಂಡಳಿಗೆ ಮಾಲೀಕರೂ ಆಗಿದ್ದರು, ಜೊತೆಗೆ ಧಾರವಾಡದ ಪ್ರಸಿದ್ಧ ರಂಗಾಯಣ ಸಂಸ್ಥೆಯ ನಿರ್ದೇಶಕರಾಗಿಯೂ ಕಾರ್ಯನಿರ್ವಹಿಸುತ್ತಿದ್ದರು. ಕಿರುತೆ-ರೆಯ ನಟನೆಯೊಂದಿಗೆ ಅವರು ಮನಸಾರೆ, ಅದ್ದೂರಿ, ಪಂಚರಂಗಿ ಹೀಗೆ ಕೆಲವು ಚಲನಚಿತ್ರಗಳಲ್ಲಿಯೂ ನಟಿಸಿ ಅತ್ಯುತ್ತಮ ಪ್ರದರ್ಶನ ನೀಡಿದ್ದರು. ಉತ್ತರ ಕರ್ನಾಟಕದ ಜವಾರಿ ಭಾಷೆಯ ತಮ್ಮ ಹಾಸ್ಯ ನಟನೆಯಿಂದಾಗಿ ರಾಜ್ಯದ ಜನರ ಮನೆಮಾತಾಗಿದ್ದರು. ಅವರಿಗೆ ಇಬ್ಬರು ಪತ್ನಿಯರಿದ್ದು ಇಬ್ಬರು ಗಂಡು ಹಾಗೂ ಇಬ್ಬರು ಹೆಣ್ಣು ಮಕ್ಕಳಿದ್ದಾರೆ. ಸಂತಾಪ: ಖ್ಯಾತ ಹಾಸ್ಯಕಲಾವಿದ ರಾಜು ತಾಳಿಕೋಟಿ ಅವರ ಅಕಾಲಿಕ ನಿಧನಕ್ಕೆ ಮುಸ್ಲಿಂ ಧಾರ್ಮಿಕ ಮುಖಂಡ ಸಯ್ಯದ್ ಶಕೀಲ ಅಹ್ಮದ್ ಖಾಜಿ, ಮುದ್ದೇಬಿಹಾಳ ಮತಕ್ಷೇತ್ರ ಶಾಸಕರಾದ ಸಿ.ಎಸ್.ನಾಡಗೌಡ(ಅಪ್ಪಾಜಿ), ಮಾಜಿ ಶಾಸಕ ಎ.ಎಸ್.ಪಾಟೀಲ (ನಡಹಳ್ಳಿ), ಬಿಜೆಪಿ ನಿಕಟಪೂರ್ವ ಅಧ್ಯಕ್ಷ ಆರ್ ಎಸ್ ಪಾಟೀಲ ಕೂಚಬಾಳ, ಜೆಡಿಎಸ್ ಜಿಲ್ಲಾ ಅಧ್ಯಕ್ಷ ಬಸನಗೌಡ ಮಾಡಗಿ, ಕಾಂಗ್ರೆಸ್ ಜಿಲ್ಲಾ ಕಾರ್ಯದರ್ಶಿ ವಿಜಯಸಿಂಗ್ ಹಜೇರಿ, ಕಲಾವಿದ ಹುಸೇನಮಕಾನದಾರ, ಸಾಹಿತಿಗಳಾದ ಅಶೋಕ ಹಂಚಲಿ, ಶ್ರೀಕಾಂತ ಪತ್ತಾರ, ಉದ್ಯಮಿ ರಾಜು ಹಂಚಾಟೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ಲಿಪಿಕ ನೌಕರರ ಸಮಸ್ಯೆ ಪರಿಹಾರಕ್ಕೆ ಪ್ರಯತ್ನ-ವೆಂಕಟೇಶ

ಮಲ್ಲಮ್ಮ ನುಡಿ ವಾರ್ತೆ




ಬಾಗಲಕೋಟೆ,ಅ.13-ಶಿಕ್ಷಣ ಇಲಾಖೆಯ ಬೋಧಕೇತರ ನೌಕರರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆನ್‌ಲೈನ್ ವ್ಯವಸ್ಥೆಯ ಕಾರ್ಯಾಗಾರ, ಜಿಲ್ಲಾ ತರಬೇತಿ ಕೇಂದ್ರಗಳಲ್ಲಿ ವಿವಿಧ ವಿಷಯಗಳಿಗೆ ತರಬೇತಿ ಆಯೋಜನೆ, ನೌಕರರ ಆರೋಗ್ಯದ ಸಮಸ್ಯೆಗಳ ಕುರಿತಾಗಿ ವೈದ್ಯರಿಂದ ಗೂಗಲ್ ಮೀಟ್ ಮೂಲಕ ಸಂದೇಶ ಸೇರಿದಂತೆ ಇನ್ನಿತರೆ ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿ ಹಮ್ಮಿಕೊಂಡು ಸಂಘಟನೆಯನ್ನು ಜಿಲ್ಲೆಯನ್ನು ರಾಜ್ಯಕ್ಕೆ ಮಾದರಿ ಆಗುವ ರೀತಿಯಲ್ಲಿ ತರಲು ಪ್ರಯತ್ನಿಸಲಾಗುವುದೆಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಲಿಪಿಕ ನೌಕರರ, ವಾಹನ ಚಾಲಕರ ಮತ್ತು ಗ್ರೂಪ್ 'ಡಿ' ನೌಕರರ ಸಂಘದ ಜಿಲ್ಲಾಧ್ಯಕ್ಷ ವೆಂಕಟೇಶ ಇನಾಮದಾರ ಹೇಳಿದರು.

ನಗರದ ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಪದಾಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಎಲ್ಲ ತಾಲ್ಲೂಕುಗಳಲ್ಲಿ ಲಿಪಿಕ ನೌಕರರ ಸಮಸ್ಯೆಗಳ ಕುರಿತು ಜಿಲ್ಲಾ ಸಂಘದಿಂದ ತಾಲೂಕುಗಳಿಗೆ ಭೇಟಿ ನೀಡಿ, ಸಮಸ್ಯೆಗಳನ್ನು ಆಲಿಸಿ ಬಗೆಹರಿಸಲು ಹಾಗೂ ನಿವೃತ್ತಿ ಸಮಯದಲ್ಲಿ ಅವರನ್ನು ಜಿಲ್ಲಾ ಸಂಘದಿಂದ ಸನ್ಮಾನಿಸಿ ಗೌರವಿಸಲಾಗುವುದೆಂದು ತಿಳಿಸಿದರು. ಜಿಲ್ಲಾ ಮಟ್ಟದಲ್ಲಿ ಎಲ್ಲ ಪದಾಧಿಕಾರಿಗಳ ಪದಗ್ರಹಣ ಮತ್ತು ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದರು.

ಜಿಲ್ಲಾ ಮಾಜಿ ಅಧ್ಯಕ್ಷ, ವಿಶೇಷ ಘಟಕದ ಅಶೋಕ ನಾಯಕ, ಜಿಲ್ಲಾ ಉಪಾಧ್ಯಕ್ಷೆ ಶ್ರೀಮತಿ ಸುವರ್ಣಾ ಕೊಳಚಿ, ಜಮಖಂಡಿ ತಾಲೂಕಾ ಅಧ್ಯಕ್ಷ ಮಹೇಶ ಜೋಶಿ, ಹುನಗುಂದ ತಾಲೂಕಾಧ್ಯಕ್ಷ ಮಲ್ಲಿಕ ವಾಲಿಕಾರ ಮತ್ತಿತರರು ಮಾತನಾಡಿ, ಜಿಲ್ಲೆಯಲ್ಲಿ ಉತ್ತಮ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ನೌಕರರಿಗೆ ಸಂಘಟನೆಯು ಸಹಕಾರಿಯಾಗಿರಬೇಕೆಂದು ತಿಳಿಸಿದರು.

ಜಿಲ್ಲಾ ಪದಾಧಿಕಾರಿಗಳಿಗೆ ರಾಜ್ಯ ಚುನಾವಣಾಧಿಕಾರಿಗಳು ನೀಡಿರುವ ಚುನಾವಣಾ ಆಯ್ಕೆಯ ಪ್ರಮಾಣ ಪತ್ರಗಳನ್ನು ಜಿಲ್ಲಾಧ್ಯಕ್ಷರು ಕೊಡಮಾಡಿದರು. ಹಾಗೂ ಜಿಲ್ಲಾ ಗ್ರೂಪ್ 'ಡಿ' ನೌಕರರ ಸಂಘದ ಜಿಲ್ಲಾಧ್ಯಕ್ಷ ಹಾಗೂ ಲಿಪಿಕ ನೌಕರರ ಜಿಲ್ಲಾ ಸಹ ಕಾರ್ಯದರ್ಶಿ ಅಮೀನಸಾಬ ಹಳ್ಳೂರ ಸೇರಿದಂತೆ ಇತರೆ ಗ್ರೂಪ್ 'ಡಿ' ನೌಕರರ ಪದಾಧಿಕಾರಿಗಳು ಜಿಲ್ಲಾಧ್ಯಕ್ಷರನ್ನು ಹಾಗೂ ತಾಲೂಕಾ ಅಧ್ಯಕ್ಷರುಗಳನ್ನು ಸನ್ಮಾನಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶ್ರೀಶೈಲ್ ಹುನ್ನೂರ ಸ್ವಾಗತಿಸಿದರು. ರೇಖಾ ಬೀಳಗಿ ಪ್ರಾರ್ಥನೆ ಗೀತೆ ಹಾಡಿದರು. ಜಿಲ್ಲಾ ಕೋಶಾಧ್ಯಕ್ಷ ಸಿ.ಎಂ.ಕುಲಕರ್ಣಿ ವಂದಿಸಿದರು. ಬಾದಾಮಿ ತಾಲೂಕಾಧ್ಯಕ್ಷ ಮಹೇಶ ಮುಧೋಳ, ಬೀಳಗಿ ತಾಲೂಕಾಧ್ಯಕ್ಷ ರಮೇಶ ಬ್ಯಾಡಗಿ, ಬಾಗಲಕೋಟೆ ತಾಲೂಕಾಧ್ಯಕ್ಷ ಉಮೇಶ ಹಂಜಿ, ವಿಶೇಷ ಘಟಕದ ಪ್ರಧಾನ ಕಾರ್ಯದರ್ಶಿ ರಾಜು ನಾಯಕ ಮತ್ತಿತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

